**ಸಂಪುಟ:** 04 **ಸಂಚಿಕೆ:** 261 **ಪುಟಗಳು:** 08 **ಬುಧವಾರ** 04 **ಡಿಸೆಂಬರ್** 2024

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ನಿಮ್ಮ ಮೇಲೆ ನೀವು ನಂಬಿಕೆ ಇಡಿ ಆಗ ಜಗತ್ತು ನಿಮ್ಮ ಪಾದದಡಿ ಯಲ್ಲಿರುತ್ತದೆ.

## ತಂಬಾಕು ಬೆಳೆಗೆ ಬೆಂಬಲ ಬೆಲೆ ನೀಡಲು ಮನವಿ ಸಲ್ಲಿಸಿದ್ದೇವೆ

• **ಉದಯವಾಹಿನಿ, ನವದೆಹಲಿ**

ರಾಜ್ಯದ ತಂಬಾಕು ಬೆಳೆಯನ್ನು ಪ್ರಧಾನ ಮಂತ್ರಿ ಫಸಲ್ ಭೀಮಾ ಯೋಜನೆ ವ್ಯಾಪ್ತಿಗೆ ತರಬೇಕು ಹಾಗೂ ತಂಬಾಕಿಗೆ ಬೆಂಬಲ ಬೆಲೆ ನೀಡುವಂತೆ ಆಗ್ರಹಿಸಿ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ಕೇಂದ್ರದ ವಾಣಿಜ್ಯ ಮತ್ತು ಕೈಗಾರಿಕೆ ಖಾತೆ ಸಚಿವ ಪಿಯೂಷ್ ಗೋಯಲ್ ಅವರನ್ನು ಭೇಟಿ ಮಾಡಿ ಈ ಬಗ್ಗೆ ಮನವಿ ಸಲ್ಲಿಸಲಾಯಿತು. ನಮ್ಮ ಮನವಿಗೆ ಕೇಂದ್ರ ಸಚಿವರು ಸಕಾರಾತಕವಾಗಿ ಸ್ಪಂದಿಸಿದ್ದಾರೆ ಎಂದು ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಬೆಲೆ ಕುಸಿತ ಸೇರಿದಂತೆ ಹಲವಾರು ಸಮಸ್ಯೆಗಳಿಗೆ ಸಿಲುಕಿ ತೀವ ಸಂಕಷ್ಟದಲ್ಲಿರುವ ರಾಜ್ಯದ ತಂಬಾಕು ಬೆಳೆಗಾರರ ಹಿತದೃಷ್ಟಿಯಿಂದ ನಾವು ಸಚಿವರಿಗೆ ಈ ಮನವಿ ಸಲ್ಲಿಸಿದ್ದೇವೆ. ಇದೇ ವೇಳೆ ನಮ್ಮ ಜತೆಯಲ್ಲಿದ್ದ ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರು ಕೂಡ ಸಚಿವ ಗೋಯಲ್ ಅವರಿಗೆ ತಂಬಾಕು ಬೆಳೆಗಾರರ ಸಮಸ್ಯೆಗಳನ್ನು ಮನವರಿಕೆ ಮಾಡಿಕೊಟ್ಟರು ಎಂದು ಅವರು ಹೇಳಿದ್ದಾರೆ.

## ನಿರ್ಮಲಾ, ಕಟೀಲ್ ವಿರುದ್ಧ ಎಫ್ಐಆರ್ ರದ್ದುಗೊಳಿಸಿ

• **ಉದಯವಾಹಿನಿ, ಬೆಂಗಳೂರು**

ಚುನಾವಣಾ ಬಾಂಡ್ ಹೆಸರಿನಲ್ಲಿ ಸುಲಿಗೆ ಆರೋಪಕ್ಕೆ ಸಂಬಂಧಿಸಿದಂತೆ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ಹಾಗೂ ಮಾಜಿ ಸಂಸದ ನಳೀನ್ ಕುಮಾರ್ ಕಟೀಲ್ ವಿರುದ್ಧ ದಾಖಲಾಗಿದ್ದ ಎಫ್ಐಆರ್ ರದ್ದುಗೊಳಿಸಿ ಹೈಕೋರ್ಟ್ ಆದೇಶ ಹೊರಡಿಸಿದೆ. ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್, ಮಾಜಿ ಸಂಸದ ನಳಿನ್ ಕುಮಾರ್ ಕಟೀಲು ಸೇರಿದಂತೆ ಮತ್ತಿತರರ ವಿರುದ್ಧದ ಚುನಾವಣಾ ಬಾಂಡ್ ಹೆಸರಿನಲ್ಲಿ ಸುಲಿಗೆ ಮಾಡಿದ್ದಾರೆ ಎಂದು ಆರೋಪಿಸಿ ಆದರ್ಶ್ ಅಯ್ಯರ್ ಎನ್ನುವರು ಖಾಸಗಿ ದೂರು ದಾಖಲಿಸಿದ್ದರು. ಇದು ರಾಜಕೀಯ ಪ್ರೇರಿತವಾಗಿದ್ದು ಎಫ್ಐಆರ್ ರದ್ದುಪಡಿಸಿವಂತೆ ಹೈಕೋರ್ಟ್ ಮೆಟ್ಟಿಲೇರಲಾಗಿತ್ತು. ಈ ಅರ್ಜಿ ವಿಚಾರಣೆ ನಡೆಸಿದ್ದ ಹೈಕೋರ್ಟ್ ಏಕಸದಸ್ಯ ಪೀಠ, ಇಂದು ಅರ್ಜಿದಾರರ ವಾದ ಮಾನ್ಯ ಮಾಡಿ ಎಫ್ಐಆರ್ ರದ್ದುಪಡಿಸಿ ಆದೇಶ ಹೊರಡಿಸಿದೆ.

## 2028ರ ಚುನಾವಣೆಯಲ್ಲಿ 140 ಸ್ಥಾನ ಗೆದ್ದು ಅಧಿಕಾರ ಹಿಡಿಯುತ್ತೇವೆ

• **ಉದಯವಾಹಿನಿ, ತುಮಕೂರು**

2028ರ ಸಾರ್ವತ್ರಿಕ ಚುನಾವಣೆ ವಿಜಯೇಂದ್ರರ ನೇತೃತ್ವದಲ್ಲಿ ನಡೆಯಲಿದ್ದು, 140 ಸ್ಥಾನ ಗೆದ್ದು ಅಧಿಕಾರ ಹಿಡಿಯುತ್ತೇವೆ ಎಂದು ಮಾಜಿ ಸಚಿವ ಎಂಪಿ ರೇಣುಕಾಚಾರ್ಯ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಯಡಿಯೂರಪ್ಪರ ಕುಟುಂಬದ ಮೇಲೆ ದುಷ್ಟ ಶಕ್ತಿಯ ದೃಷ್ಟಿ ಬೀಳಬಾರದು ಇತ್ತಿಚಿಗೆ ಯಡಿಯೂರಪ್ಪ ಹಾಗೂ ವಿಜಯೇಂದ್ರರ ಮೇಲೆ ದುಷ್ಟ ಶಕ್ತಿಗಳ ಕಣ್ಣು ಬೀಳುತ್ತಿದೆ. ಹಾಗಾಗಿ ಸಿದ್ಧಲಿಂಗೇಶ್ವರ ದೇವರಲ್ಲಿ ಪ್ರಾರ್ಥನೆ ಮಾಡಿದ್ದೇನೆ ಎಂದರು. ಯಡಿಯೂರಪ್ಪನವರು 45 ವರ್ಷ ಇರುವಾಗ ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನ ಅಲಂಕರಿಸಿದ್ದರು. ಆದರೆ ವಿಜಯೇಂದ್ರರ 49ನೇ ವರ್ಷದಲ್ಲಿ ಅಧ್ಯಕ್ಷರಾಗಿದ್ದಾರೆ. ಆದರೆ ಸ್ವಯಂ ಘೋಷಿತ ನಾಯಕರಿಂದ ಉಪಚುನಾವಣೆ ಸೋತಿದೆ ಎಂದು ಯತ್ನಾಳ್‌ಗೆ ಟಾಂಗ್ ಕೊಟ್ಟರು.

## ಮುಸ್ಲಿಮರು ಅನ್ನ ತಿಂದ ಮನೆಗೆ ಕನ್ನ ಹಾಕುವವರು: ಈಶ್ವರಪ್ಪ ಕಿಡಿ

• **ಉದಯವಾಹಿನಿ, ಶಿವಮೊಗ್ಗ**

ಬಾಂಗ್ಲಾದೇಶದ ಸ್ಥಿತಿ ನೋಡಿದ್ರೆ ಮುಸ್ಲಿಮರು ಅನ್ನ ತಿಂದ ಮನೆಗೆ ಕನ್ನ ಹಾಕುವವರು ಎಂಬುದು ಗೊತ್ತಾಗುತ್ತದೆ ಎಂದು ಮಾಜಿ ಡಿಸಿಎಂ ಕೆ.ಎಸ್ ಈಶ್ವರಪ್ಪ ಹೇಳಿದ್ದಾರೆ. ನಗರದಲ್ಲಿ ಹಿಂದೂ ಹಿತರಕ್ಷಣಾ ಸಮಿತಿ ಪ್ರತಿಭಟನಾ ಸಭೆಯಲ್ಲಿ ಅವರು ಮಾತನಾಡಿದರು. ಈ ವೇಳೆ ಬಾಂಗ್ಲಾದೇಶಕ್ಕೆ ತಿನ್ನಲು ಅನ್ನ ಇರಲಿಲ್ಲ. ಚಿನ್ಮಯ್ ದಾಸ್ ಅವರು ಎಲ್ಲಾರಿಗೂ ಅನ್ನ ಹಾಕುತ್ತಿದ್ದರು. ಚಿನ್ಮಯ್ ದಾಸ್ ಪರವಾಗಿ ಒಬ್ಬರು ವಕೀಲರು ವಕಾಲತ್ತು ಹಾಕಲು ಹೊರಟ್ಟಿದ್ದರು. ಮುಸ್ಲಿಮರು ಆ ವಕೀಲರ ಮೇಲೆ ಹಲ್ಲೆ ನಡೆಸಿದ್ದಾರೆ. ಆ ವಕೀಲರು ಸಾಯುವ ಸ್ಥಿತಿಯಲ್ಲಿ ಇದ್ದಾರೆ ಎಂದು ಕಿಡಿಕಾರಿದ್ದಾರೆ. ಭಾರತದ ಹಿಂದೂಗಳು ಈ ದೇಶದ ಮುಸ್ಲಿಮರಿಗೆ ಸಿಕ್ಕ ಸಿಕ್ಕ ಕಡೆ ಹೊಡೆದರೆ ಮುಸ್ಲಿಮರು ಉಳಿಯುತ್ತಾರಾ? ಮುಸ್ಲಿಮರು ಹಿಂದೂ ಯುವತಿಯರ ಮೇಲೆ ಅತ್ಯಾಚಾರ ನಡೆಸುತ್ತಿದ್ದಾರೆ. ಆದರೆ ಒಬ್ಬ ಹಿಂದೂ ಸಹ ಮಸೀದಿ ಧ್ವಂಸ ಮಾಡಲು ಹೋಗಿಲ್ಲ. ರಾಮ ಮಂದಿರ ನಿರ್ಮಾಣ ಮಾಡಲು ಬಾಬ್ರಿ ಮಸೀದಿ ಧ್ವಂಸ ಮಾಡಿದ್ದು ಬಿಟ್ಟರೆ ಬೇರೆ ಮಸೀದಿ ಧ್ವಂಸ ಮಾಡಿಲ್ಲ. ಹಿಂದೂಗಳು ಶಾಂತಿಪ್ರಿಯರು ಎಂದಿದ್ದಾರೆ. ಇವತ್ತೂ ಸಹ ಬಾಂಗ್ಲದಲ್ಲಿ ಹಿಂದೂ ದೇವಸ್ಥಾನ ಧ್ವಂಸ ಮಾಡಿದ್ದಾರೆ. ಇದೇ ರೀತಿ ಮುಂದುವರೆದರೆ ಬಾಂಗ್ಲಾದೇಶ, ಪಾಕಿಸ್ತಾನ ಮುಂದೊಂದು ದಿನ ಇರಲ್ಲ. ಅದು ಅಖಂಡ ಭಾರತ ಆಗುತ್ತದೆ. ಸಾಧು ಸಂತರು ಹೋರಾಟಕ್ಕೆ ಬಂದಿದ್ದಾರೆ. ಅಖಂಡ ಭಾರತದ ನಿರ್ಮಾಣಕ್ಕೆ ಸಾಧು ಸಂತರ ನೇತೃತ್ವ ಅವಶ್ಯಕತೆ ಇದೆ ಎಂದು ಹೇಳಿದ್ದಾರೆ.

**ಸಾಧನೆ ಮಾಡುವ ಶಕ್ತಿ ಇದೆ**

''ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ಅವರು ನಿಮ್ಮನ್ನು ದೇವರ ಮಕ್ಕಳು ಎಂದು ಕರೆದರು. ನಿಮಗೆ ಗಣಪತಿ ಸ್ಫೂರ್ತಿ. ಆನೆ ತಲೆ, ಮುರಿದ ಒಂದು ದಂತವಿದ್ದರೂ ಆತನನ್ನು ವಿಘ್ನ ನಿವಾರಿಸುವ ನಾಯಕ ವಿನಾಯಕ ಎಂದು ಪೂಜಿಸುತ್ತೇವೆ. ಹೀಗಾಗಿ, ನಿಮ್ಮಿಂದ ಏನೂ ಮಾಡಲು ಆಗುವುದಿಲ್ಲ ಎಂದು ಭಾವಿಸಬೇಡಿ. ನಿಮ್ಮಲ್ಲಿ ಮನೋಬಲ ಹೆಚ್ಚಾಗಿರಬೇಕು. ನಿಮ್ಮಲ್ಲಿ ಎಲ್ಲಾ ರೀತಿಯ ಸಾಧನೆ ಮಾಡುವ ಶಕ್ತಿ ಇದೆ. ನಿಮ್ಮ ಸಾಧನೆಯಲ್ಲಿ ಯಾವುದೇ ರೀತಿಯ ರಾಜಿ ಬೇಡ. ಪುಟ್ಟರಾಜ ಗವಾಯಿ, ಪಂಚಾಕ್ಷರಿ ಗವಾಯಿ ಅವರು ಸೇರಿದಂತೆ ಅನೇಕ ಸಾಧಕರು ನಮಗೆ ಸ್ಫೂರ್ತಿಯಾಗಿ ನಿಂತಿದ್ದಾರೆ. ಒಲಿಂಪಿಕ್ಸ್ ಕ್ರೀಡಾಕೂಟದಲ್ಲಿ ನಮಗೆ ನಿರೀಕ್ಷಿತ ಮಟ್ಟದಲ್ಲಿ ಪದಕ ಬರಲಿಲ್ಲ. ಆದರೆ ಪ್ಯಾರಾಒಲಿಂಪಿಕ್ಸ್ ಕ್ರೀಡಾಕೂಟದಲ್ಲಿ 29 ಪದಕ ಬಂದಿದೆ. ಇವರೆಲ್ಲರೂ ತಮಗಿರುವ ಅಡೆತಡೆ ಮರೆತು ಸಾಧನೆ ಮಾಡಿ ಇತಿಹಾಸ ಪುಟ ಸೇರಿದ್ದಾರೆ ಎಂದರು.



# ವಿಕಲಚೇತನರ ಸಬಲೀಕರಣಕ್ಕಾಗಿ ಸಿದ್ಧ ಸರ್ಕಾರ ಬದ್ಧ

• ಅಂಗವಿಕಲರ ಶ್ರೇಯೋಭಿವೃದ್ಧಿಗೆ ಶ್ರಮ • ವಿಕಲಚೇತನರ ಮಾಸಾಶನ ಹೆಚ್ಚಳ

• ವಿಕಲಚೇತನರ ಶ್ರೇಯೋಭಿವೃದ್ಧಿಗೆ 44 ಕೋಟಿ ರೂ.ಮಂಜೂರು ಮಾಡುವೆ: ಸಿಎಂ

• ವಿಕಲಚೇತನರ ದಿನ: ಘನತೆಯ ಬದುಕಿಗೆ ಪೂರಕ ಸೌಲಭ್ಯ

• **ಉದಯವಾಹಿನಿ, ಬೆಂಗಳೂರು**

ವಿಕಲಚೇತನರು ಸಮಾಜಕ್ಕೆ ಹೊರೆಯಲ್ಲ, ಅವರು ಸಮಾಜದ ಆಸ್ತಿ. ವಿಕಲಚೇತನರ ಸಬಲೀಕರಣಕ್ಕಾಗಿ ಸರ್ಕಾರ ಬದ್ಧವಾಗಿದೆ. ಅವರ ಶ್ರೇಯೋಭಿವೃದ್ಧಿಗಾಗಿ ಪ್ರಸಕ್ತ ಸಾಲಿನ ಪೂರಕ ಅಂದಾಜಿನಲ್ಲಿ 44 ಕೋಟಿ ರೂ. ಮಂಜೂರು ಮಾಡುತ್ತೇನೆ ಎಂದು ಸಿಎಂ ಸಿದ್ದರಾಮಯ್ಯ ಘೋಷಿಸಿದರು. ವಿಕಲಚೇತನರು ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖಾ ವತಿಯಿಂದ ನಗರದ ಕಂಠೀರವ ಒಳಾಂಗಣ ಕ್ರೀಡಾಂಗಣದಲ್ಲಿ ಮಂಗಳವಾರ ಆಯೋಜಿಸಲಾಗಿದ್ದ ವಿಶ್ವ ವಿಕಲಚೇತನರ ದಿನಾಚರಣೆಯಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ ಸುಮಾರು 15 ಲಕ್ಷ ವಿಕಲಚೇತನರಿದ್ದಾರೆ. ಇವರೆಲ್ಲರನ್ನು ಆರೈಕೆ ಮಾಡಿ ವಿಶೇಷ ಸೌಲಭ್ಯಗಳನ್ನು ನೀಡುವುದು ಸರ್ಕಾರದ ಕರ್ತವ್ಯ. ಸಂವಿಧಾನ ಎಲ್ಲಾರಿಗೂ ಬದುಕುವ, ಉದ್ಯೋಗ ಪಡೆಯುವಂತಹ ಅವಕಾಶ ಕಲ್ಪಿಸಿದೆ. ವಿಕಲಚೇತನರು ಎಲ್ಲಾ ಕ್ಷೇತ್ರಗಳಲ್ಲಿಯೂ ಸಾಧನೆ ಮಾಡುತ್ತಿದ್ದಾರೆ ಎಂದು ಹೇಳಿದ್ದಾರೆ.

ಇತ್ತೀಚೆಗೆ ನಡೆದ ಪ್ಯಾರಾಒಲಿಂಪಿಕ್ಸ್‌ನಲ್ಲಿ ಭಾರತದ ವಿಕಲಚೇತನ ಕ್ರೀಡಾಪಟುಗಳು ಹೆಚ್ಚಿನ ಪದಕಗಳನ್ನು ಪಡೆದಿರುವುದು ಹೆಮ್ಮೆಯ ವಿಚಾರ. ನಮ್ಮ ಸರ್ಕಾರ ಈ ಬಾರಿ ವಿಶ್ವ ವಿಕಲಚೇತನರ ದಿನಾಚರಣೆಯನ್ನು ''ಸಮಗ್ರ ಮತ್ತು ಸುಸ್ಥಿರ ಭವಿಷ್ಯಕ್ಕಾಗಿ ವಿಕಲಚೇತನ ವ್ಯಕ್ತಿಗಳಲ್ಲಿ ನಾಯಕತ್ವದ ಉತ್ತೇಜನ'' ಎಂಬ ಘೋಷವಾಕ್ಯದೊಂದಿಗೆ ಆಚರಿಸುತ್ತಿದೆ ಎಂದರು.

**ಗುರುತಿನ ಚೀಟಿ**

**ವಿಕಲಚೇತನರಿಗೆ ಗುರುತಿನ ಚೀಟಿ ನೀಡುತ್ತಿದ್ದು, ಈ ಗುರುತಿನ ಚೀಟಿಯನ್ನು ಸರ್ಕಾರದ ವಿವಿಧ ಸೌಲಭ್ಯ ಪಡೆಯಲು ಉಪಯೋಗಿಸಿ ಕೊಳ್ಳಬಹುದಾಗಿದೆ. ಈವರೆಗೆ 8,03,975 ವಿಕಲಚೇತನರಿಗೆ ಯುಡಿಐಡಿ ಕಾರ್ಡ್ ನೀಡಲಾಗಿದೆ.**

**ಸರ್ಕಾರಿ ಉದ್ಯೋಗದಲ್ಲಿ ಮೀಸಲಾತಿ:** ಈ ವರ್ಷ ನಾಲ್ಕು ಬಗೆಯ ವಿಕಲಚೇತನರ ಆರೈಕೆದಾರರಿಗೆ ಪ್ರತೀ ತಿಂಗಳು 1,000 ರೂ.ಗಳ ಆರೈಕೆದಾರರ ಭತ್ಯೆ ನೀಡುವ ಯೋಜನೆಯನ್ನು ದೇಶದಲ್ಲಿ ಪ್ರಪ್ರಥಮವಾಗಿ ಕರ್ನಾಟಕ ರಾಜ್ಯ ಘೋಷಿಸಿದ್ದು, ಪ್ರಸಕ್ತ ಸಾಲಿನಿಂದಲೇ ನೀಡಲಾಗುವುದು. ಈ ಸಾಲಿನಲ್ಲಿ 7 ಜಿಲ್ಲೆಗಳಲ್ಲಿ 2 ಕೋಟಿ ರೂ ವೆಚ್ಚದಲ್ಲಿ 10 ಬುದ್ಧಿಮಾಂದ್ಯ ಮಕ್ಕಳ ವಸತಿ ಶಾಲೆಗಳನ್ನು ಪ್ರಾರಂಭಿಸಲು 2023-24ನೇ ಸಾಲಿನ ಆಯವ್ಯಯ ಭಾಷಣದಲ್ಲಿನ ಘೋಷಣೆಯಂತೆ ಶಾಲೆಗಳನ್ನು ತೆರೆಯಲಾಗಿದೆ ಎಂದು ಸಿಎಂ ಹೇಳಿದರು.

ಇದಲ್ಲದೇ ಇನ್ನೂ 13 ಹೊಸ ಶಾಲೆಗಳನ್ನು ಪ್ರಸಕ್ತ ಸಾಲಿನಲ್ಲಿ ಅನುದಾನಕ್ಕೆ ಒಳಪಡಿಸಲಾಗಿದೆ. ಗ್ರಾಮೀಣ ಪುನರ್ವಸತಿ ಯೋಜನೆಯಡಿ ಕಾರ್ಯನಿರ್ವಹಿಸುತ್ತಿರುವ ಕಾರ್ಯಕರ್ತರ ಅವಲಂಬಿತರಿಗೆ ನೀಡಲಾಗುವ ಮರಣ ಪರಿಹಾರ ನಿಧಿಯನ್ನು 2023ನೇ ಸಾಲಿನಲ್ಲಿ 50,000 ರೂ.ಯಿಂದ ಪರಿಷ್ಕರಿಸಿ 1 ಲಕ್ಷ ರೂ.ಗೆ ಹೆಚ್ಚಿಸಲಾಗಿದೆ. ಸರ್ಕಾರಿ ಉದ್ಯೋಗಗಳಲ್ಲಿ 'ಸಿ' ಮತ್ತು 'ಡಿ' ಸಮೂಹದ ಹುದ್ದೆಗಳಲ್ಲಿ ಶೇ. 5 ಹಾಗೂ 'ಎ' ಮತ್ತು 'ಬಿ' ಹುದ್ದೆಗಳಲ್ಲಿ ಶೇ.4ರಷ್ಟು ಮೀಸಲಾತಿಯನ್ನು ನೀಡಲಾಗಿದೆ. ಅಲ್ಲದೇ ಇವರು ನಿರ್ವಹಿಸಬಹುದಾದಂತಹ ಹುದ್ದೆಗಳನ್ನು ಗುರುತಿಸಲು ರಾಜ್ಯ ಮಟ್ಟದಲ್ಲಿ ತಜ್ಞರ ಸಮಿತಿ ರಚಿಸಲಾಗಿದ್ದು, ಇಲಾಖೆಗಳಲ್ಲಿನ ಹುದ್ದೆಗಳನ್ನು ಗುರುತಿಸುವ ಕಾರ್ಯ ನಡೆಯುತ್ತಿದೆ. ವಿಕಲಚೇತನರ ಅನುಕೂಲಕ್ಕಾಗಿ ವಾಹನಗಳನ್ನು ನೀಡಲು ಈಗಾಗಲೇ ಸೂಚನೆ ನೀಡಲಾಗಿದೆ ಎಂದು ತಿಳಿಸಿದ್ದಾರೆ.

**ಆರೈಕೆ ಭತ್ಯೆ**

**ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳು ಐದು ವರ್ಷ ಪೂರೈಸುವವರೆಗೆ ಅವರನ್ನು ಆರೈಕೆ ಮಾಡಲು ಆಯಾ ಸೇವೆ, ಆರೋಗ್ಯ ಪಾಲನೆ, ಪೌಷ್ಠಿಕ ಆಹಾರ, ಔಷಧಕ್ಕೆ ತಿಂಗಳಿಗೆ 2 ಸಾವಿರ ರೂ.ಗಳಂತೆ 5 ವರ್ಷಗಳವರೆಗೆ ಸಹಾಯಧನ ನೀಡಲಾಗುತ್ತದೆ. ಸೆರಬ್ರೈಲ್ ಪಾಲ್ಸಿ, ಮಸ್ಕೂಲರ್ ಡಿಸ್ಟ್ರೋಫಿ, ಪಾರ್ಕಿನ್ಸನ್, ಮಲ್ಟಿಪಲ್ ಸ್ಕ್ಲೆರೋಸಿಸ್ ಕಾಯಿಲೆಗಳಿಂದ ಬಳಲುತ್ತಿರುವ ವ್ಯಕ್ತಿಗಳನ್ನು ಆರೈಕೆ ಮಾಡುತ್ತಿರುವವರಿಗೆ ತಿಂಗಳಿಗೆ 1 ಸಾವಿರ ರೂ. ಪ್ರೋತ್ಸಾಹಧನ ನೀಡುವ ಯೋಜನೆಯನ್ನು 2024-25ನೇ ಸಾಲಿನಿಂದ ಜಾರಿಗೊಳಿಸಲಾಗಿದೆ.**

**ವಿಕಲಚೇತನರ ಮಾಸಾಶನ ಹೆಚ್ಚಿಸಲು ಕೇಂದ್ರಕ್ಕೆ ಮನವಿ:** ಸಾಮಾಜಿಕ ಸಬಲೀಕರಣಕ್ಕಾಗಿ ಶೇ 40 ರಿಂದ ಶೇ 74 ವಿಕಲಚೇತನರಿಗೆ 800 ರೂ ಹಾಗೂ 75% ಮತ್ತು ಅದಕ್ಕಿಂತ ಹೆಚ್ಚಿನ ಅಂಗವೈಕಲ್ಯತೆವುಳ್ಳವರಿಗೆ 1400 ರೂ ಮತ್ತು ತೀವ್ರತರನಾದ ಮನೋವೈಕಲ್ಯತೆ ಇರುವ ವ್ಯಕ್ತಿಗಳಿಗೆ 2000 ರೂ ಪ್ರತೀ ತಿಂಗಳು ನೀಡಲಾಗುತ್ತಿದೆ. ಕೇಂದ್ರ ಸರ್ಕಾರದಿಂದ ನೀಡಲಾಗುವ ವಿಕಲಚೇತನರ ಮಾಸಾಶನ ಮೊತ್ತ ಹೆಚ್ಚಿಸುವಂತೆ ಕೋರಿ ಕೇಂದ್ರಕ್ಕೆ ಪತ್ರ ಬರೆಯಲು ಕ್ರಮ ಕೈಗೊಳ್ಳಲಿದೆ ಎಂದರು. ಮಾತನಾಡಿದ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ವಿಕಲಚೇತನತೆ ವರವೂ ಅಲ್ಲ, ಶಾಪವೂ ಅಲ್ಲ. ದೇವರು ನಿಮಗೆ ಜೀವನದಲ್ಲಿ ನೀಡಿರುವ ಪರೀಕ್ಷೆ. ಇದನ್ನು ಮೆಟ್ಟಿನಿಂತು ಅನೇಕರು ಸಾಧನೆ ಮಾಡಿ ನಮ್ಮೆಲ್ಲರಿಗೂ ಸ್ಫೂರ್ತಿಯಾಗಿದ್ದಾರೆ. ನೀವೂ ಅನುಸರಿಸಿ'' ಎಂದು ಹೇಳಿದರು.



**ಮಾಹಿತಿ ಕೇಂದ್ರ**

ವಿಕಲಚೇತನರಿಗೆ ಲಭ್ಯವಿರುವ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಯೋಜನೆಗಳು, ವಿಶೇಷ ಶಾಲೆಗಳು ಹಾಗೂ ವೃತ್ತಿ ತರಬೇತಿ ಸಂಸ್ಥೆಗಳ ಬಗ್ಗೆ ಮಾಹಿತಿ ಒದಗಿಸಲು ನಿರ್ದೇಶನಾಲಯ ಹಾಗೂ ರಾಜ್ಯದ 30 ಜಿಲ್ಲೆಗಳಲ್ಲಿ ವಿಕಲಚೇತನರ ಸಹಾಯವಾಣಿ/ ಮಾಹಿತಿ ಕೇಂದ್ರ ನಡೆಸಲಾಗುತ್ತಿದೆ. ಪ್ರಶಸ್ತಿ ಮತ್ತು ಪುರಸ್ಕಾರಗಳು ಅಂಗವೈಕಲ್ಯ ಮೆಟ್ಟನಿಂತು ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ವ್ಯಕ್ತಿಗಳು, ವಿಶೇಷ ಶಿಕ್ಷಕರು ಹಾಗೂ ವಿಕಲಚೇತನರ ಕ್ಷೇತ್ರದಲ್ಲಿ ಉತ್ತಮ ಸೇವೆ ಸಲ್ಲಿಸುತ್ತಿರುವ ಸಂಸ್ಥೆಗಳನ್ನು ಗುರುತಿಸಿ ಸಾಧಕರಿಗೆ ಪ್ರತಿ ವರ್ಷ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ.

## ಪಕ್ಷ ವಿರೋಧಿ ಚಟುವಟಿಕೆ ಮಾಡಿದ ವಿಜಯೇಂದ್ರಗೆ ಯಾವಾಗ ನೋಟಿಸ್?

• **ಉದಯವಾಹಿನಿ, ನವದೆಹಲಿ**



ಪಕ್ಷ ವಿರೋಧಿ ಚಟುವಟಿಕೆ ಮಾಡಿದ ವಿಜಯೇಂದ್ರಗೆ ಯಾವಾಗ ನೋಟಿಸ್ ಕೊಡುತ್ತೀರಾ ಎಂದು ಮಾಜಿ ಸಚಿವ ರಮೇಶ್ ಜಾರಕಿಹೊಳಿ ಪ್ರಶ್ನಿಸಿದ್ದಾರೆ.

ದೆಹಲಿಯಲ್ಲಿ (ಡಿ.04) ವಕ್ಫ್ ವಿಚಾರವಾಗಿ ಜಗದಾಂಬಿಕ ಪಾಲ್ ಭೇಟಿ ಹಾಗೂ ಕೇಂದ್ರ ಶಿಸ್ತು ಸಮಿತಿ ಪಾಠಕ್ ಅವರ ಭೇಟಿಗಾಗಿ ಪೂರ್ವ ತಯಾರಿ ಸಭೆ ನಡೆಸಿದರು. ಸಭೆಯಲ್ಲಿ ಬಸನಗೌಡ ಪಾಟೀಲ್ ಯತ್ನಾಳ್ ಕುಮಾರ್ ಬಂಗಾರಪ್ಪ, ರಮೇಶ್ ಜಾರಕಿಹೊಳಿ, ಲಿಂಬಾವಳಿ, ಬಿ.ಪಿ ಹರೀಶ್, ಬಿ.ವಿ ನಾಯಕ್, ಎನ್.ಆರ್ ಸಂತೋಷ್ ಭಾಗಿಯಾಗಿ ಯತ್ನಾಳ್‌ಗೆ ನೀಡಿರುವ ಶೋಕಾಸ್ ನೊಟೀಸ್ ಬಗ್ಗೆ ಸಮಾಲೋಚನೆ ನಡೆಸಿದರು. (ಡಿ.04) 11:30ಕ್ಕೆ ಹೈಕಮಾಂಡ್‌ನ್ನು ಭೇಟಿ ಮಾಡುತ್ತಾರೆ. ಕೇಂದ್ರ ಶಿಸ್ತು ಸಮಿತಿ ಪಾಠಕ್ ಅವರನ್ನು ಭೇಟಿ ಮಾಡುತ್ತಾರೆ. ಪಕ್ಷ ವಿರೋಧಿ ಚಟುವಟಿಕೆ ಮಾಡಿದ ವಿಜಯೇಂದ್ರಗೆ ಯಾವಾಗ ನೋಟಿಸ್ ಕೊಡುತ್ತೀರಾ ಎಂದು ಪ್ರಶ್ನೆ ಮಾಡುತ್ತೇವೆ.

2 ದಿನದ ಹಿಂದೆಯೇ ನಮಗೆ ನೋಟಿಸ್ ವಿಚಾರ ಗೊತ್ತಾಗಿದೆ. ನೋಟಿಸ್ ಬಂದಿದೆ. ಅದಕ್ಕೆ ಯತ್ನಾಳ್ ಉತ್ತರ ಕೊಡುತ್ತಾರೆ. ನಾವು ಪಕ್ಷದ ಚೌಕಟ್ಟಿನಲ್ಲಿ ಕೆಲಸ ಮಾಡುತ್ತಿದ್ದೇವೆ. ನಾವು ಎಲ್ಲಾದಕ್ಕೂ ಉತ್ತರ ಕೊಡುತ್ತೇವೆ. ವಿಜಯೇಂದ್ರ ಪರವಾಗಿ ಮಾತಾನಾಡುವವರೆಲ್ಲ ಕೆಜೆಪಿ ಪಕ್ಷದಿಂದ ಬಂದವರು, ಅಲ್ಲಿ 80% ಅವರೇ ಇದ್ದಾರೆ. ವಿಜಯೇಂದ್ರ ಪರವಾಗಿ ಮಾತನಾಡದೇ ಬೇರೆ ಯಾರ ಪರ ಮಾತನಾಡುತ್ತಾರೆ. ವಿಜಯೇಂದ್ರ ಅವರು ಅಧ್ಯಕ್ಷರಾಗಿ ಪಕ್ಷ ವಿರೋಧಿ ಕೆಲಸ ಮಾಡುತ್ತಿದ್ದಾರೆ. ಅವರು ಮಾಡಿದ್ದಕ್ಕೆ ನಾವು ಮಾಡುವ ಪರಿಸ್ಥಿತಿ ಬಂತು. ಪಕ್ಷದ ಹಿತ ದೃಷ್ಟಿಯಿಂದ ವಕ್ಫ್ ಹೋರಾಟ ಮಾಡಿದ್ದೆವು. ಯತ್ನಾಳ್ ಅವರಿಗೆ ನೋಟಿಸ್ ಕೊಡುತ್ತಾರೆ ಎಂದು ಗೊತ್ತಿತ್ತು. ಯತ್ನಾಳ್ ಪಕ್ಷದ ಚೌಕಟ್ಟಿನಲ್ಲಿ ಕೆಲಸ ಮಾಡಿದ್ದಾರೆ. ಅವರು ಉತ್ತರ ಕೊಡುತ್ತಾರೆ ಎಂದರು. ವಕ್ಫ್ ಹೋರಾಟದ ನಂತರ ವರದಿ ಸಲ್ಲಿಸುವುದಾಗಿ ಹೇಳಿದ್ದೆವು. ಅದರಂತೆ ಈಗ ದೆಹಲಿಗೆ ಬಂದಿದ್ದೇವೆ, ಇದೀಗ ವರದಿ ನೀಡುತ್ತೇವೆ. ಸಹಜವಾಗಿ ಬೇರೆ ವಿಚಾರಗಳು ಮಾತನಾಡುತ್ತೇವೆ. ಸದ್ಯ ಯತ್ನಾಳ್ ಅವರಿಗೆ ಶಿಸ್ತು ಸಮಿತಿ ಅಧ್ಯಕ್ಷರು ಬೆಳಗ್ಗೆ 11:30ಕ್ಕೆ ಭೇಟಿಗೆ ಸಮಯ ನೀಡಿದ್ದಾರೆ.

ಮತ್ತೊಮ್ಮೆ ಬಂದು ಹೈಕಮಾಂಡ್‌ಗೆ ದೂರು ನೀಡುತ್ತೇವೆ. ಎಸ್ಸಿ ಎಸ್ಟಿ ಶಾಸಕರಿಗೆ ಬರಬೇಕು ಎಂದು ಒತ್ತಾಯ ಮಾಡಿದ್ದಾರೆ. ಲಿಂಗಾಯತ ಒಕ್ಕಲಿಗ ಶಾಸಕರಿಗೆ ಒತ್ತಡ ಹೇರಲು ಸಾಧ್ಯವಾಗಲ್ಲ. ಹೀಗಾಗಿ ಅವರಿಗೆ ಬೆದರಿಕೆ ಹಾಕುತ್ತಿದ್ದಾರೆ. ಸಭೆಯಲ್ಲಿ ಭಾಗಿಯಾದ ನಾಯಕರು ನನಗೂ ಆತ್ಮೀಯರು. ಕೆಜೆಪಿ ನಾಯಕರು ಮಾತ್ರ ವಿಜಯೇಂದ್ರ ಪರವಾಗಿ ಮಾತನಾಡುತ್ತಿದ್ದಾರೆ. ಬಿಜೆಪಿ ನಾಯಕರು ಯಾರು ಮಾತನಾಡುತ್ತಿಲ್ಲ. ಹೈಕಮಾಂಡ್ ಒಂದು ಉತ್ತಮ ನಿರ್ಧಾರ ತೆಗೆದುಕೊಳ್ಳಬೇಕು. ನಾವು ಜೆಪಿಸಿ ಅಧ್ಯಕ್ಷರ ಭೇಟಿಗೆ ಬಂದಿದ್ದೇವೆ. ರಾಷ್ಟ್ರೀಯ ನಾಯಕರಿಗೆ ಸಮಯ ಕೇಳಿದ್ದೇವೆ. ಮೋದಿ ಬಿಟ್ಟು ಎಲ್ಲಾರ ಬಳಿ ಸಮಯ ಕೇಳಿದೆ. ಸಮಯ ಕೊಟ್ಟರೇ ಭೇಟಿ ಮಾಡುತ್ತೇವೆ ಎಂದು ತಿಳಿಸಿದರು.

## ವಕ್ಸ್ ಬೋರ್ಡ್ ವಜಾಗೊಳಿಸಲು ಭಗವಂತ ಖೂಬಾ ಆಗ್ರಹ

• **ಉದಯವಾಹಿನಿ, ಬೀದರ್**

'ಆಂಧ್ರ ಪ್ರದೇಶದಂತೆ ರಾಜ್ಯದಲ್ಲಿ ವಕ್ಸ್ ಬೋರ್ಡ್ ವಜಾ ಗೊಳಿಸಬೇಕು' ಎಂದು ಮಾಜಿ ಕೇಂದ್ರ ಸಚಿವ ಭಗವಂತ ಖೂಬಾ ಆಗ್ರಹಿಸಿದ್ದಾರೆ. ವಕ್ಸ್ ಬೋರ್ಡ್ ಮಾಡಿರುವ ಭೂ ಕಬಳಿಕೆಯಿಂದ ರೈತರು, ಮಠ ಮಂದಿರಗಳವರು, ಶಿಕ್ಷಣ ಸಂಸ್ಥೆಯವರಿಗೆ ಅನ್ಯಾಯವಾಗಿದೆ. ಕಾಂಗ್ರೆಸ್ ನೇತೃತ್ವದ ಸರ್ಕಾರ ರೈತರ ಪರ, ಜನರ ಪರ, ಸಂವಿಧಾನದ ಪರ ಎಂದು ಹೇಳುತ್ತದೆ. ಅದನ್ನು ಈಗ ಮಾಡಿ ತೋರಿಸಬೇಕು ಎಂದು ಪ್ರಕಟಣೆ ಮೂಲಕ ಒತ್ತಾಯಿಸಿದ್ದಾರೆ. ಇದರಿಂದ ದೇಶದ ಸ್ವಾಸ್ಥ್ಯ ಹಾಳಾಗುತ್ತಿದೆ. ವಕ್ಸ್ ಬೋರ್ಡ್ ಮೂಲಕ ರೈತರಿಗೆ ಕೊಟ್ಟಿರುವ ನೋಟಿಸ್ ಹಿಂಪಡೆದಿರುವುದು ಶಾಶ್ವತ ಪರಿಹಾರವಲ್ಲ, ಸರ್ಕಾರಕ್ಕೆ ನಿಜವಾಗಲೂ ರೈತರ ಮೇಲೆ ಕಾಳಜಿಯಿದ್ದರೆ ಅವರ ಪಹಣಿಯಲ್ಲಿ ರೈತರ ಹೆಸರು ಬರುವಂತೆ ನೋಡಿಕೊಳ್ಳಬೇಕಿತ್ತು ಎಂದಿದ್ದಾರೆ.

# ಯತ್ನಾಳ್ ವಿರುದ್ಧ ಶಿಸ್ತು ಕ್ರಮ ಜರುಗಿಸುವ ಕುರಿತು ಬಿಜೆಪಿಯಲ್ಲೇ ಗೊಂದಲ

■ ಯತ್ನಾಳ್‌ರನ್ನು ಪಕ್ಷದ ಪ್ರಾಥಮಿಕ ಸದಸ್ಯತ್ವದಿಂದಲೇ ಉಚ್ಚಾಟನೆ ಮಾಡಬೇಕೆಂದು ರಾಜ್ಯ ಬಿಜೆಪಿ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಹಾಗೂ ಅವರ ಬಣದ ಬೇಡಿಕೆ

• **ಉದಯವಾಹಿನಿ, ಬೆಂಗಳೂರು**




**ಬಿಜೆಪಿ ಪಕ್ಷದಲ್ಲಿ ಕಚ್ಚಾಟ**

ಸ್ವಪಕ್ಷೀಯರ ವಿರುದ್ಧವೇ ಬಹಿರಂಗವಾಗಿ ಬೆಂಕಿ ಉಗುಳುತ್ತಿರುವ ಖಾಯಂ ಭಿನ್ನಮತೀಯ ನಾಯಕ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ಶಿಸ್ತು ಕ್ರಮ ಜರಿಗಿಸುವ ಕುರಿತು ಬಿಜೆಪಿಯಲ್ಲಿ ಗೊಂದಲದ ಪರಿಸ್ಥಿತಿ ನಿರ್ಮಾಣವಾಗಿದೆ. ತಮ ಹಾಗೂ ಕುಟುಂಬದವರ ವಿರುದ್ಧ ವಾಚಮ ಗೋಚರವಾಗಿ ನಾಲಿಗೆ ಹರಿಬಿಟ್ಟು ಟೀಕೆ ಮಾಡುತ್ತಿರುವ ಯತ್ನಾಳ್ ಅವರನ್ನು ಪಕ್ಷದ ಪ್ರಾಥಮಿಕ ಸದಸ್ಯತ್ವದಿಂದಲೇ ಉಚ್ಚಾಟನೆ ಮಾಡಬೇಕೆಂದು ರಾಜ್ಯ ಬಿಜೆಪಿ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಹಾಗೂ ಅವರ ಬಣದ ಪ್ರಮುಖ ಬೇಡಿಕೆ. ಆದರೆ ಬಿಜೆಪಿಯೊಳಗಿರುವ ವಿಜಯೇಂದ್ರ ಹಾಗೂ ಯಡಿಯೂರಪ್ಪ ಬಣ ಯತ್ನಾಳ್ ಅವರನ್ನು ಪಕ್ಷದಿಂದ ಕಿತ್ತು ಹಾಕುವಂತಹ ಕಠಿಣ ಕ್ರಮ ಜರುಗಿಸದೆ ಇನ್ನು ಮುಂದೆ ಲಕ್ಷ್ಮಣ ರೇಖೆ ದಾಟದೆ ಪಕ್ಷ ಹಾಗೂ ನಾಯಕರ ವಿರುದ್ಧ ಯಾವುದೇ ಹೇಳಿಕೆ ನೀಡಬಾರದೆಂದು ಎಚ್ಚರಿಕೆ ಕೊಟ್ಟು ಬಿಕ್ಕಟ್ಟು ಇತ್ಯರ್ಥಪಡಿಸಬೇಕೆಂಬ ಒಲವು ತೋರಿದೆ.

ಇದಕ್ಕೆ ನೀಡುತ್ತಿರುವ ಕಾರಣಗಳೆಂದರೆ ಕಲ್ಯಾಣ ಮತ್ತು ಉತ್ತರ ಕರ್ನಾಟಕದಲ್ಲಿ ಪಂಚಮಸಾಲಿ ಸಮುದಾಯ ಪ್ರಬಲವಾಗಿದ್ದು, ಯತ್ನಾಳ್ ಅವರನ್ನು ಬಿಜೆಪಿಯಿಂದ ಉಚ್ಚಾಟನೆ ಮಾಡಿದರೆ ಮುಂಬರುವ ಚುನಾವಣೆಯಲ್ಲಿ ಸಮುದಾಯ ಪಕ್ಷಕ್ಕೆ ಕೈಕೊಡಬಹುದೆಂಬ ಆತಂಕವನ್ನು ಹೊರಹಾಕಿದ್ದಾರೆ. ಹೀಗಾಗಿ ಯತ್ನಾಳ್ ಮತ್ತು ವಿಜಯೇಂದ್ರ ಅವರನ್ನು ಪರಸ್ಪರ ಮುಖಾಮುಖಿ ಕೂರಿಸಿ ಬಿಕ್ಕಟ್ಟನ್ನು ಇತ್ಯರ್ಥಪಡಿಸಬೇಕು.

**ಬಿಕ್ಕಟ್ಟನ್ನು ಸೂಕ್ಷ್ಮವಾಗಿ ಪರಿಹರಿಸಲು ದೆಹಲಿ ನಾಯಕರ ಮೇಲೆ ಒತ್ತಡ**

**ಯತ್ನಾಳ್ ಪ್ರಕರಣದಲ್ಲಿ ವಿಜಯೇಂದ್ರ ಬಣ ಮೇಲುಗೈ ಸಾಧಿಸಿದರೆ ಬರುವ ದಿನಗಳಲ್ಲಿ ತಮಗೂ ತಮ್ಮ ರಾಜಕೀಯ ಭವಿಷ್ಯಕ್ಕೆ ಕಂಟಕವಾಗಬಹುದೆಂಬ ಕಾರಣಕ್ಕಾಗಿ ಎರಡು ಕಡೆ ಸಮತೋಲನ ಸಾಧಿಸಲು ಮುಂದಾಗಿದ್ದಾರೆ. ಹೀಗೆ ರಾಜ್ಯವನ್ನು ಪ್ರತಿನಿಧಿಸುವ ಕೇಂದ್ರದ ಪ್ರಭಾವಿ ಸಚಿವರೊಬ್ಬರು ಯತ್ನಾಳ್ ಹಾಗೂ ವಿಜಯೇಂದ್ರ ಬಣದಲ್ಲಿ ಗುರುತಿಸಿಕೊಳ್ಳದೆ ಬಿಕ್ಕಟ್ಟನ್ನು ಸೂಕ್ಷ್ಮವಾಗಿ ಪರಿಹರಿಸಲು ದೆಹಲಿ ನಾಯಕರ ಮೇಲೆ ಒತ್ತಡ ಹಾಕಿದ್ದಾರೆ. ಎಂ.ಪಿ.ರೇಣುಕಾಚಾರ್ಯ ನೇತೃತ್ವದ ವಿಜಯೇಂದ್ರ ಬಣ ಈಗಾಗಲೇ ಎಲ್ಲಾ ನಾಯಕರನ್ನು ಒಗ್ಗೂಡಿಸುವ ಪ್ರಯತ್ನ ನಡೆಸಿದ್ದು, ದಾವಣಗೆರೆಯಲ್ಲಿ ಬೃಹತ್ ಸಮಾವೇಶ ಮಾಡುವ ಮೂಲಕ ಬಿಎಸ್‌ವೈ ಹಾಗೂ ವಿಜಯೇಂದ್ರ ಪರವಾಗಿ ಶಕ್ತಿ ಪ್ರದರ್ಶನಕ್ಕೆ ಮುಂದಾಗಿದೆ. ಈ ಮೂಲಕ ಪರೋಕ್ಷವಾಗಿ ಹೈಕಮಾಂಡ್‌ಗೂ ತಮ ಶಕ್ತಿ ಏನು ಎನ್ನುವುದನ್ನು ತೋರಿಸಲು ಮುಂದಾಗಿದೆ.**

ಇಲ್ಲಿ ಯಾರೊಬ್ಬರ ಕೈ ಮೇಲಾಗುವುದಾಗಲಿ ಅಥವಾ ಹಿನ್ನಡೆಯಾಗದಂತೆ ಅತ್ಯಂತ ಜಾಗರೂಕತೆಯಿಂದ ಸಮಸ್ಯೆಯನ್ನು ಪರಿಹರಿಸುವಂತೆ ರಾಷ್ಟ್ರೀಯ ನಾಯಕರಿಗೆ ಮನವಿ ಮಾಡಿದ್ದಾರೆ. ಬಿಜೆಪಿ ಬಣಗಳ ಬಡಿದಾಟದಿಂದ ಹೈಕಮಾಂಡ್ ತಟಸ್ಥವಾಗಿದೆ. ವಿಜಯೇಂದ್ರ ಪರವೂ ಇಲ್ಲ, ಯತ್ನಾಳ್ ವಿರುದ್ಧವೂ ಇಲ್ಲ ಎನ್ನಲಾಗುತ್ತಿದೆ. ಎರಡು ದಿನಗಳ ಹಿಂದೆ ದೆಹಲಿಗೆ ತೆರಳಿ ವರಿಷ್ಠರನ್ನು ಭೇಟಿಯಾಗಿದ್ದ ವಿಜಯೇಂದ್ರ, ಯತ್ನಾಳ್ ವಿರುದ್ಧ ಕ್ರಮಕೈಕೊಳ್ಳುವಂತೆ ಒತ್ತಡ ಹೇರಿದ್ದರು. ಹೀಗಾಗಿ ವಿಜಯೇಂದ್ರ ಒತ್ತಡಕ್ಕೆ ಮಣಿದು ಹೈಕಮಾಂಡ್ ಯತ್ನಾಳ್‌ಗೆ ನೋಟಿಸ್ ಜಾರಿ ಮಾಡಿದೆ. ಹತ್ತು ದಿನಗಳಲ್ಲಿ ಉತ್ತರ ನೀಡುವಂತೆ ಹೇಳಿದೆ. ಆದರೆ 10 ದಿನಗಳ ಬಳಿಕ ಹೈಕಮಾಂಡ್ ಯಾವ ಕ್ರಮಕೈಗೊಳ್ಳುತ್ತದೆ ಎನ್ನುವುದೇ ಮುಂದಿರುವ ಪ್ರಶ್ನೆ.ಒಂದು ವೇಳೆ ವಿಜಯೇಂದ್ರ ಬದಲಿಸಿದರೆ ಲಿಂಗಾಯತರನ್ನು ಎದುರು ಹಾಕಿಕೊಂಡಂತಾಗುತ್ತದೆ. ಈಗಾಗಲೇ ಯಡಿಯೂರಪ್ಪನವರನ್ನು ಸಿಎಂ ಸ್ಥಾನದಿಂದ ಕೆಳಗಿಳಿಸಿ ಕೈಸುಟ್ಟುಕೊಂಡಾಗಿದೆ. ಈಗ ಏಕಾಏಕಿ ಈ ಸಂದರ್ಭದಲ್ಲಿ ವಿಜಯೇಂದ್ರರನ್ನು ರಾಜ್ಯಾಧ್ಯಕ್ಷದಿಂದ ಕೆಳಗಿಳಿಸಿದರೆ ಲಿಂಗಾಯತ ಸಮುದಾಯವನ್ನು ಮತ್ತಷ್ಟು ಕೆರಳಿಸಿದಂತಾಗುತ್ತದೆ ಎನ್ನುವುದು ಹೈಕಮಾಂಡ್ ನಾಯಕರ ತಲೆಯಲ್ಲಿದೆ. ಯತ್ನಾಳ್ ವಿರುದ್ಧ ಕ್ರಮ ಕೈಗೊಂಡರೇ ಹಿಂದುತ್ವ ಎಂದು ಹೇಳಿಕೊಂಡು ತಿರುಗಾಡಿ ಕಟ್ಟರ್ ಹಿಂದುತ್ವವಾದಿಗಳನ್ನು ತುಳಿಯುತ್ತೀರಿ ಎನ್ನುವ ಆರೋಪಗಳು ಕೇಳಿಬರುತ್ತವೆ. ಹೀಗಾಗಿ ಯತ್ನಾಳ್ ವಿರುದ್ಧ ಕಠಿಣ ಕ್ರಮ ಕೈಗೊಳ್ಳದ ಸ್ಥಿತಿಯಲ್ಲಿದೆ. ಒಂದು ವೇಳೆ ಯತ್ನಾಳ್ ವಿರುದ್ಧ ಕ್ರಮ ಕೈಗೊಳ್ಳುವುದೇ ಆಗಿದ್ದರೆ ಈ ಹಿಂದೆಯೇ ಅಮಾನತು ಮಾಡಬಹುದಿತ್ತು. ಆದರೆ ಅದನ್ನು ಹೈಕಮಾಂಡ್ ಮಾಡಿಲ್ಲ. ಕೇವಲ ಯತ್ನಾಳ್ ಬಿಎಸ್‌ವೈ ಕುಟುಂಬದ ವಿರುದ್ಧ ಆರೋಪ ಮಾಡಿದಾಗಲೆಲ್ಲ ನೋಟಿಸ್ ನೀಡಿ ಸುಮನಾಗಿದೆ. ಅದಕ್ಕಾಗಿ ಯತ್ನಾಳ್ ಗೆ ಕೇವಲ ನೋಟೀಸ್ ಕೊಡದೇ ಪಕ್ಷದಿಂದಲೇ ಉಚ್ಚಾಟನೆ ಮಾಡಬೇಕು ಎಂಬ ಒತ್ತಾಯವನ್ನು ವಿಜಯೇಂದ್ರ ನಿಷ್ಠರು ಶುರು ಮಾಡಿದ್ದಾರೆ.

**ಈ ದಿನದ ದರ** ಪೆಟ್ರೋಲ್: 103.44 ₹/L ಡೀಸೆಲ್ : 89.97 ₹/L ಬಂಗಾರ: ₹7,778/Gram24ct ₹7,130/Gram22ct ಬೆಳ್ಳಿ: ₹91.00/Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ವಿವಾದಿತ ಮಂದಿರ ಮಸೀದಿಗಳು

ಸೀತಾರಾಂ ಗೋಯಲ್ ಅವರು ಹಿಂದು ಟೆಂಪಲ್ಸ್ ವಾಟ್ ಹ್ಯಾಪನ್ಡ್ ಟು ದೆಮ್ ಪುಸ್ತಕದಲ್ಲಿ 2000 ಮಸೀದಿ ಪಟ್ಟಿ ಮಾಡಿ ಬಹುತೇಕ ಹಿಂದುದೇವಾಲಯಗಳ ಮೇಲೆ ನಿರ್ಮಾಣಗೊಂಡಿವೆ ಎನ್ನಲಾಗಿದೆ. ಎರಡನೇ ಸಂಪುಟದಲ್ಲಿ ಹಿಂದು ಜೈನ ಬೌದ್ಧ ದೇವಾಲಯಗಳ ನಾಶಕ್ಕೆ ಸಂಬಂಧಿಸಿದ ಶಾಸನಗಳನ್ನು ಉಲ್ಲೇಖಿಸಲಾಗಿದೆ. ಇವರ ಪ್ರಕಾರ ಜಾವಾ ದೇಶದ ಮೆನಾರಾ ಕುಡುಪ್ ಮಸೀದಿಯ ಮಿನಾರೆಟ್ ಮೂಲತಃ ಹಿಂದು ದೇವಾಲಯದ ಭಾಗ. ಭಾರತದ ಸುಪ್ರೀಂ ಕೋರ್ಟಿನ ವಕೀಲ ವಿಷ್ಣು ಜೈನ್ ಹೇಳುವಂತೆ, 20 ನೇ ಶತಮಾನದ ಇತಿಹಾಸಕಾರ ಜಾದುನಾಥ್ ಸರ್ಕಾರ್ ಅವರ ಪ್ರಕಾರ ಭಾರತದಾದ್ಯಂತ ವಿವಾದಿತ ಮಸೀದಿ - ಸ್ಮಾರಕಗಳ ಸಂಖ್ಯೆ 50. 1) ಜ್ಞಾನವಾಪಿ ಮಸೀದಿ : ಕಾಶಿಯ ಮೂಲ ವಿಶ್ವನಾಥ ಮಂದಿರವನ್ನು 1669 ರಲ್ಲಿ ಮೊಘಲ್ ದೊರೆ ಔರಂಗಜೇಬ್ ಕೆಡವಿ ಅದರ ಮೇಲೆ ಜ್ಞಾನವಾಪಿ ಮಸೀದಿ ನಿರ್ಮಿಸಿದನೆನ್ನಲಾಗಿದ್ದು ಈ ಮಸೀದಿಯಲ್ಲಿ ಶಿವಲಿಂಗ ಸಿಕ್ಕಿದ್ದು ಪ್ರಕರಣ ನ್ಯಾಯಾಲಯದಲ್ಲಿದೆ.

## ಎಂಎಲ್ಎ 5 ಕೋಟಿ ವಂಚನೆ ಕೇಸ್

• ಉದಯವಾಹಿನಿ ಬೆಂಗಳೂರು

ವಿಧಾನಸಭೆಯ ಎಂಎಲ್ಎ ಟಿಕೆಟ್ ಕೊಡಿಸುವುದಾಗಿ ಉದ್ಯಮಿ ಗೋವಿಂದಬಾಬು ಎನ್ನುವವರಿಗೆ ಬಿಗ್ ಬಾಸ್ ಸ್ಪರ್ಧಿ ಚೈತ್ರ ಅವರು 5 ಕೋಟಿ ಪಡೆದು ವಂಚನೆ ಎಸಗಿದ್ದರು. ಇದೀಗ ಈ ಒಂದು ಪ್ರಕರಣಕ್ಕೆ ಸಂಬಂಧಪಟ್ಟಂತೆ ಚೈತ್ರ ಅವರು ಬೆಂಗಳೂರಿನ 1ನೇ ಎಸಿಎಂಎಂ ನ್ಯಾಯಾಲಯಕ್ಕೆ ಹಾಜರಾದರು.

ಪ್ರಕರಣಕ್ಕೆ ಸಂಬಂಧಿಸಿದಂತೆ ಬಿಗ್ ಬಾಸ್ ಸ್ಪರ್ಧಿ ಚೈತ್ರಾ, ಕೋರ್ಟ್‌ಗೆ ಹಾಜರಾಗಿದ್ದರೆ. ವಾರಂಟ್ ಜಾರಿಯಾದ ಹಿನ್ನೆಲೆಯಲ್ಲಿ ಚೈತ್ರ ನ್ಯಾಯಾಲಯಕ್ಕೆ ಹಾಜರಾದರು. ಬಿಗ್ ಬಾಸ್ ಮನೆಯಿಂದ ಹೊರಬಂದು ಚೈತ್ರ ಕೋರ್ಟಿಗೆ ಹಾಜರಾದರು.ಚೈತ್ರ ಶ್ರೀಕಾಂತ್ ಸೇರಿದಂತೆ ಮೂವರು ಆರೋಪಿಗಳು ನ್ಯಾಯಾಲಯಕ್ಕೆ ಹಾಜರಾದರು. ಈ ವೇಳೆ ವಾರೆಂಟ್ ರಿಕಾಲ್ ಮಾಡಿಸಿಕೊಂಡು ಚೈತ್ರ ಮತ್ತೆ ಬಿಗ್ ಬಾಸ್‌ಗೆ ತೆರಳಿದ್ದಾರೆ. 1ನೇ ಎಸಿಎಂ ನ್ಯಾಯಾಧೀಶರ ಮುಂದೆ ಚೈತ್ರ ಹಾಜರಾಗಿದ್ದರು. ಈ ಹಿಂದೆ ವಂಚನೆ ಕೇಸ್‌ನಲ್ಲಿ ಸಿಸಿಬಿ ಅಧಿಕಾರಿಗಳು ಚೈತ್ರ ಅವರನ್ನು ಅರೆಸ್ಟ್ ಮಾಡಿದರು. ಮುಂದಿನ ವಿಚಾರಣೆ 2025 ಜನವರಿ 13ರಂದು ಮುಂದೂಡಿ ಕೋರ್ಟ್ ಆದೇಶ ಹೊರಡಿಸಿದೆ.

## ವಿದೇಶಿ ಬಂಡವಾಳ ಹೂಡಿಕೆಯಲ್ಲಿ ಕರ್ನಾಟಕ ದೇಶಕ್ಕೆ ನಂ.2!

• ಉದಯವಾಹಿನಿ ಬೆಂಗಳೂರು

2024ರ ಏಪ್ರಿಲ್-ಸೆಪ್ಟೆಂಬರ್ ಅವಧಿಯಲ್ಲಿ 3.54 ಶತಕೋಟಿಯೊಂದಿಗೆ ವಿದೇಶಿ ನೇರ ಹೂಡಿಕೆ (ಈಆಖ)ಯಲ್ಲಿ ನಮ್ಮ ರಾಜ್ಯವು ಭಾರತದಲ್ಲೇ ಎರಡನೇ ಸ್ಥಾನವನ್ನು ಪಡೆದುಕೊಂಡಿದೆ. ಈ ಕುರಿತು ಸಚಿವ ಎಂ.ಬಿ.ಪಾಟೀಲ್ ಮಾಹಿತಿ ನೀಡಿದ್ದು, ಆರ್ಥಿಕ ಬೆಳವಣಿಗೆಯಲ್ಲಿ ಕರ್ನಾಟಕವು ತನ್ನ ಶಕ್ತಿಯನ್ನು ಮತ್ತೆ ಸಾಬೀತು ಪಡಿಸಿದೆ. ಮಹಾರಾಷ್ಟ್ರವು (13.55 ಬಿಲಿಯನ್ ಡಾಲರ್‌ಗಳು) ಅಗ್ರಸ್ಥಾನದಲ್ಲಿದ್ದರೆ, ತೆಲಂಗಾಣವು (1.54 ಬಿಲಿಯನ್ ಡಾಲರ್‌ಗಳು)ಮೂರನೇ ಸ್ಥಾನದಲ್ಲಿದೆ. ಕಾಂಗ್ರೆಸ್ ನೇತೃತ್ವದ ಕರ್ನಾಟಕ ಸರ್ಕಾರದ ಪರಿಣಾಮಕಾರಿ ಕಾರ್ಯತಂತ್ರಗಳು ಮತ್ತು ಉದ್ಯಮಸ್ನೇಹಿ ನೀತಿಗಳ ಫಲವಾಗಿ ಈ ಸಾಧನ ಸಾಧ್ಯವಾಗಿದೆ. ಆರ್ಥಿಕ ಅಭಿವೃದ್ಧಿಯನ್ನು ಚಾಲನೆ ಮಾಡುವಲ್ಲಿ ನಮ್ಮ ಬದ್ಧತೆ ಮತ್ತು ದೂರದೃಷ್ಟಿಯನ್ನು ಪ್ರತಿಬಿಂಬಿಸುತ್ತದೆ. ಐಟಿ, ಸೇವೆಗಳು ಮತ್ತು ಟೆಲಿಕಾಂನಂತಹ ಪ್ರಮುಖ ಕ್ಷೇತ್ರಗಳಲ್ಲಿ ಕರ್ನಾಟಕದ ಹೆಚ್ಚುತ್ತಿರುವ ಆಕರ್ಷಣೆಯು ಜಾಗತಿಕ ಹೂಡಿಕೆಯ ಕೇಂದ್ರವಾಗಿ ಅದರ ಸ್ಥಾನವನ್ನು ಬಲಪಡಿಸುತ್ತದೆ.

## ಬಾಣಂತಿಯರ ಸಾವಿನ ಪ್ರಕರಣಗಳ ತನಿಖೆಗೆ ಸಮಿತಿ ರಚಿಸಿ ಸರ್ಕಾರ ಆದೇಶ

• ಉದಯವಾಹಿನಿ ಬೆಂಗಳೂರು

ರಾಜ್ಯದ ವಿವಿಧ ಆಸ್ಪತ್ರೆಗಳಲ್ಲಿ ಸಂಭವಿಸಿದ ಬಾಣಂತಿಯರ ಸಾವಿನ ಪ್ರಕರಣಗಳ ತನಿಖೆಗೆ ತಜ್ಞರ ಸಮಿತಿಯನ್ನು ರಚಿಸಲಾಗಿದೆ ಎಂಬುದಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದ್ದಾರೆ. ರಾಜ್ಯದ ವಿವಿಧ ಆಸ್ಪತ್ರೆಗಳಲ್ಲಿ ಸಂಭವಿಸಿರುವ ಬಾಣಂತಿಯರ ಸಾವಿನ ಪ್ರಕರಣಗಳ ತನಿಖೆಗೆ ಅಭಿವೃದ್ಧಿ ಆಯುಕ್ತರ ಅಧ್ಯಕ್ಷತೆಯಲ್ಲಿ ತಜ್ಞರ ಸಮಿತಿ ರಚಿಸಿ, ವಾರದೊಳಗೆ ವರದಿ ಪಡೆಯಲಾಗುವುದು. ಔಷಧ ನಿಯಂತ್ರಣ ಕಾಯ್ದೆಯನ್ನು ಇನ್ನಷ್ಟು ಬಿಗಿಗೊಳಿಸುವ ಕುರಿತು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವ ಸಲ್ಲಿಸಲು ಕೂಡ ನಿರ್ಧರಿಸಲಾಗಿದೆ ಎಂದು' ಸಿದ್ದರಾಮಯ್ಯ ಅವರು ತಿಳಿಸಿದ್ದಾರೆ. ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ಸಂಭವಿಸಿದ ನಾಲ್ವರು ಬಾಣಂತಿಯರ ಸಾವು ಪ್ರಕರಣಕ್ಕೆ ಸಂಬಂಧಿಸಿದಂತೆ ಮೃತ ಬಾಣಂತಿಯರ ಕುಟುಂಬಕ್ಕೆ ರಾಜ್ಯ ಸರ್ಕಾರ ರೂ. 2 ಲಕ್ಷ ಪರಿಹಾರ ಘೋಷಿಸಿದೆ. ಅಲ್ಲದೇ, ಸಾವಿಗೆ ಕಾರಣವಾದ ಔಷಧ ಪೂರೈಸಿದ ಕಂಪನಿಯಿಂದಲೂ ಪರಿಹಾರ ವಸೂಲಿ ಮಾಡಿ, ಮೃತರ ಕುಟುಂಬಕ್ಕೆ ನೀಡಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದೇನೆ ಎಂದು ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಅವರು ತಿಳಿಸಿದ್ದಾರೆ.

## ಔಷಧ ನಿಯಂತ್ರಣ ಇಲಾಖೆಯ ಮುಖ್ಯಸ್ಥರನ್ನಾಗಿ ಐಎಎಸ್ ಅಧಿಕಾರಿ ಶ್ರೀನಿವಾಸ ನೇಮಕ

• ಉದಯವಾಹಿನಿ ಬೆಂಗಳೂರು

ಬಳ್ಳಾರಿ ಜಿಲ್ಲಾಸ್ಪತ್ರೆಯಲ್ಲಿ ಬಾಣಂತಿಯರ ಸಾವಿನ ಪ್ರಕರಣಕ್ಕೆ ಸಂಬಂಧಪಟ್ಟಂತೆ ಕರ್ತವ್ಯಲೋಪಕ್ಕಾಗಿ ಡ್ರಗ್ ಕಂಟ್ರೋಲರ್ ಉಮೇಶ್ ಅವರನ್ನು ಸಸ್ಪೆಂಡ್ ಮಾಡಲಾಗಿತ್ತು. ಈಗ ರಾಜ್ಯ ಸರ್ಕಾರದಿಂದ ಔಷಧ ನಿಯಂತ್ರಣ ಇಲಾಖೆಯ ಮುಖ್ಯಸ್ಥರನ್ನಾಗಿ ಐಎಎಸ್ ಅಧಿಕಾರಿ ಶ್ರೀನಿವಾಸ ಅವರನ್ನು ನೇಮಕ ಮಾಡಿ ಆದೇಶಿಸಿದೆ. ಈ ಕುರಿತಂತೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸರ್ಕಾರದ ಅಧೀನ ಕಾರ್ಯದರ್ಶಿ ಅಧಿಸೂಚನೆ ಹೊರಡಿಸಿದ್ದಾರೆ. ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯ ಆಯುಕ್ತರಾಗಿದ್ದಂತ ಐಎಎಸ್ ಅಧಿಕಾರಿ ಶ್ರೀನಿವಾಸ ಇವರನ್ನು ಔಷಧ ನಿಯಂತ್ರಣ ಇಲಾಖೆಯ ಆಡಳಿತಾತ್ಮಕ ಮುಖ್ಯಸ್ಥರನ್ನಾಗಿ ಆದೇಶಿಸಲಾಗಿದೆ. ಅಂದಹಾಗೇ ಈ ಹುದ್ದೆಯಲ್ಲಿದ್ದಂತ ಉಮೇಶ್ ಅವರನ್ನು ಸಿದ್ದರಾಮಯ್ಯ ಅವರು ಅಮಾನತುಗೊಳಿಸಿದ್ದರು. ಹೀಗಾಗಿ ಐಎಎಸ್ ಅಧಿಕಾರಿ ಶ್ರೀನಿವಾಸ ಅವರನ್ನು ಸಾರ್ವಜನಿಕ ಹಾಗೂ ಆಡಳಿತಾತ್ಮಕ ಹಿತದೃಷ್ಟಿಯಿಂದ ತಕ್ಷಣದಿಂದ ಜಾರಿಗೆ ಬರುವಂತೆ ಔಷಧ ನಿಯಂತ್ರಣ ಇಲಾಖೆಯ ಆಡಳಿತಾತ್ಮಕ ಮುಖ್ಯಸ್ಥರನ್ನಾಗಿ ನೇಮಿಸಿ ಆದೇಶಿದ್ದಾರೆ.

## ವಿಶ್ವಗುರು ಬಸವಣ್ಣನವರ ಕುರಿತ ಯತ್ನಾಳ್ ಹೇಳಿಕೆಗೆ ತೀವ್ರ ವಿರೋಧ

• ಉದಯವಾಹಿನಿ ಬೆಂಗಳೂರು

ವಿಶ್ವಗುರು ಬಸವಣ್ಣನವರ ಕುರಿತ ಬಸನಗೌಡ ಪಾಟೀಲ ಯತ್ನಾಳ್ ಹೇಳಿಕೆಗಳು ಅಜ್ಞಾನದ ಪರಮಾವಧಿ. ಬಸವ ತತ್ವ ಅನುಯಾಯಿಗಳಿಗೆ ಅವಮಾನ ಮಾಡಿದ್ದಾರೆ. ಕೂಡಲೇ ಅವರು ಸಾರ್ವಜನಿಕವಾಗಿ ಕ್ಷಮೆ ಕೇಳಬೇಕೆಂದು ರಾಷ್ಟ್ರೀಯ ಬಸವದಳ ಆಗ್ರಹಿಸಿದೆ. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಉಪಾಧ್ಯಕ್ಷ ಪರಮಪೂಜ್ಯ ಸದ್ಗುರು ಶ್ರೀ ಬಸವ ಯೋಗ ಸ್ವಾಮೀಜಿ, ವಿಶ್ವಗುರು ಬಸವಣ್ಣನವರು ಚಿಕ್ಕ ವಯಸ್ಸಿನಿಂದಲೂ ಧೈರ್ಯಶಾಲಿಯೂ, ಮಹಾನ್ ಸಾಹಸಿಯೂ, ಜ್ಞಾನಿಯೂ ಆಗಿದ್ದರು. ಸರ್ವ ಜೀವರಾಶಿಗಳ ಸಮಾನತೆಗಾಗಿಅಧಿಕಾರ ಶಾಹಿಯಲ್ಲಿದ್ದ ಪಟ್ಟಭದ್ರ ಹಾಗೂ ಸಂಪ್ರದಾಯವಾದಿಗಳ ವಿರುದ್ಧ ಕ್ರಾಂತಿಯನ್ನೇ ಮಾಡಿದವರು.

# ಸಿದ್ದರಾಮಯ್ಯಗೆ ಇಡಿ ಶಾಕ್ ಸಿಎಂ ಪತ್ನಿಗೆ ಸೈಟ್ ಹಂಚಿಕೆಯೇ ಅಕ್ರಮ

### ಹಗರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಿದ ಜಾರಿ ನಿರ್ದೇಶನಾಲಯ ಭೂ ಸ್ವಾಧೀನ ಪ್ರಕ್ರಿಯೆ

• ಉದಯವಾಹಿನಿ ಬೆಂಗಳೂರು

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ ಸೈಟ್ ಹಂಚಿಕೆ ಹಗರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆಸಿದ ಜಾರಿ ನಿರ್ದೇಶ ನಾಲಯ ಭೂ ಸ್ವಾಧೀನ ಪ್ರಕ್ರಿಯೆಯೇ ಅಕ್ರಮ ಎಂದು ಹೇಳಿದೆ.ಮುಡಾ ಅಕ್ರಮದ ತನಿಖೆ ನಡೆಸುತ್ತಿರುವ ಇಡಿ ಲೋಕಾಯುಕ್ತ ಎಡಿಜಿಪಿಗೆ ತನಿಖೆಯ ಪ್ರಗತಿಯ ಬಗ್ಗೆ ಪತ್ರ ಬರೆದು ಬ್ರಹ್ಮಾಂಡ ಭ್ರಷ್ಟಾಚಾರವನ್ನು ಎಳೆಎಳೆಯಾಗಿ ಬಿಡಿಸಿದೆ. ಸಿಎಂ ಪತ್ನಿಗೆ ಕೊಟ್ಟಿರುವ 14 ಸೈಟ್ ಗಳು ಸಹ ಅಕ್ರಮ ಎಂದು ಇಡಿ ಉಲ್ಲೇಖಿಸಿದೆ. ಜಮೀನಿನ ಮಾಲೀಕ ಜೆ.ದೇವರಾಜು ನಡೆಯೇ ಅನುಮಾನಾಸ್ಪದವಾಗಿದೆ. ಸಿಎಂ ಬಾಮೈದ ಮಲ್ಲಿಕಾರ್ಜುನ ಸ್ವಾಮಿ ಸುಳ್ಳು ಹೇಳಿಕೆಗಳನ್ನು ನೀಡಿದ್ದಾರೆ. ವರ್ಕ್ ಆರ್ಡರ್ ಆದ ಜಾಗದಲ್ಲಿ ಬಡಾವಣೆ ನಿರ್ಮಿಸಿ ಫಲಾನುಭವಿಗಳಿಗೆ ಸೈಟ್‌ಗಳನ್ನು ಹಂಚಿಕೆ ಮಾಡಲಾಗಿತ್ತು. ದೇವನೂರು ಬಡಾವಣೆಯಲ್ಲೇ 352 ಸೈಟ್‌ಗಳು ಖಾಲಿ ಇದ್ದರೂ ಅಲ್ಲಿ 60:40 ಅನುಪಾತದಲ್ಲಿ ಸೈಟ್ ಮಂಜೂರು ಮಾಡದೇ ಪ್ರತಿಷ್ಠಿತ ವಿಜಯನಗರ ಬಡಾವಣೆಯಲ್ಲಿ 14 ಸೈಟ್ ಗಳನ್ನು ಹಂಚಿಕೆ ಮಾಡಿದ್ದನ್ನು ನೋಡಿದಾಗ ಭಾರೀ ಅಕ್ರಮ ನಡೆದಿರುವುದು ಮೇಲ್ನೋಟಕ್ಕೆ ದೃಢವಾಗುತ್ತದೆ ಎಂದು ಇಡಿ ಹೇಳಿದೆ.ಇಡಿ ತನ್ನ ತನಿಖಾ ವರದಿಯ ಸಾರಾಂಶ ಪಬ್ಲಿಕ್ ಟಿವಿಗೆ ಲಭ್ಯವಾಗಿದ್ದು ಅದನ್ನು ಇಲ್ಲಿ ನೀಡಲಾಗಿದೆ.

**ತನಿಖೆ ಅಂಶ -1** ಜೆ.ದೇವರಾಜು ನಡೆಯೇ ಅನುಮಾನಾಸ್ಪದ ಕೆಸರೆ ಗ್ರಾಮದ ವಿವಾದಿತ ಜಮೀನು ಭೂಸ್ವಾಧೀನದಿಂದ ಕೈಬಿಡುವ ಪ್ರಕ್ರಿಯೆಯೇ ಅಕ್ರಮವಾಗಿದೆ. ಪ್ರಕರಣದ ನಾಲ್ಕನೇ ಆರೋಪಿಯಾಗಿರುವ ಜಮೀನಿನ ಮೂಲ ಮಾಲೀಕ



ಜೆ.ದೇವರಾಜು ನಡೆಯೇ ಅನುಮಾನಾಸ್ಪದವಾಗಿದೆ. 3 ಎಕರೆ 16 ಗುಂಟೆ ಜಮೀನು ಭೂಸ್ವಾಧೀನದಿಂದ ಕೈ ಬಿಡುವಂತೆ ಮುಡಾಗೆ ಅವರು ಪತ್ರ ಬರೆದಿಲ್ಲ. ಬದಲಾಗಿ 1997ರ ನಗರಾಭಿವೃದ್ಧಿ ಸಚಿವರಾಗಿದ್ದ ಬಚ್ಚೇಗೌಡರಿಗೆ ನೇರ ಮನವಿ ಸಲ್ಲಿಸಿದ್ದರು. ಜುಲೈ 24, 1997 ರಂದು ಮುಡಾ ಸಾಮಾನ್ಯ ಸಭೆಯಲ್ಲಿ ಡಿನೋಟಿಫಿಕೇಷನ್ ಬಗ್ಗೆ ಚರ್ಚೆ ನಡೆದಿದೆ. ದೇವರಾಜು ಭೂಮಿಯನ್ನು ಭೂಸ್ವಾಧೀನದಿಂದ ಕೈಬಿಡಬಹುದು ಎಂಬ ನಿರ್ಧಾರಕ್ಕೆ ಬರಲಾಯಿತು. ದೇವರಾಜು ಜಮೀನು ಬಡಾವಣೆ ಮುಖ್ಯದ್ವಾರದಿಂದ ಕೇವಲ 200 ಮೀಟರ್ ದೂರದಲ್ಲಿದೆ. ಉಪಗ್ರಹ ಆಧಾರಿತ ದೃಶ್ಯವನ್ನು ಪರಿಶೀಲಿಸಿದಾಗ ಆ ಜಮೀನು ಬಡಾವಣೆಯ ಮಧ್ಯ ಭಾಗದಲ್ಲಿರುತ್ತದೆ. ಡಿನೋಟಿಫಿಕೇಷನ್ ಪ್ರಕ್ರಿಯೆ ಆದಾಗ ಸಿದ್ದರಾಮಯ್ಯ ಡಿಸಿಎಂ ಆಗಿದ್ದರು. ಡಿನೋಟಿಫಿಕೇಷನ್ ನಿರ್ಧಾರ ಕೈಗೊಂಡ ಸಭೆಯಲ್ಲಿ ಸಿದ್ದರಾಮಯ್ಯ ಭಾಗಿಯಾಗಿರಲಿಲ್ಲ. 3 ಎಕರೆ ಭೂಮಿಯೇ ಜೀವನಾಧಾರ, ಬೇರೆ ಆದಾಯ ನನಗೆ ಇಲ್ಲ. ಸರ್ಕಾರಿ ನೌಕರ, ಜಮೀನಿನ ಮೇಲೆ ಅವಲಂಬಿತರಾಗಿರುವುದಿಲ್ಲ ಎಂದಿದ್ದ ದೇವರಾಜು ವಿವಾದಿತ ಭೂಮಿಯಲ್ಲಿ ಕೃಷಿ ಚಟುವಟಿಕೆ ಮಾಡಿಲ್ಲ ಎಂದು ಇಡಿಗೆ ತಿಳಿಸಿದ್ದಾರೆ. 2003ರಲ್ಲಿ ಎ3 ಆರೋಪಿ ಸಿಎಂ ಬಾಮೈದ ಮಲ್ಲಿಕಾರ್ಜುನ ಸ್ವಾಮಿ ಜೊತೆ ಒಮ್ಮೆ ಮಾತ್ರ ಜಮೀನಿಗೆ ಭೇಟಿ ನೀಡಿದ್ದರು. 2004ರಲ್ಲಿ ಮಲ್ಲಿಕಾರ್ಜುನ ಸ್ವಾಮಿಗೆ ಮಾರಾಟ ಮಾಡಿದಾಗ ಅದು ಕೃಷಿ ಭೂಮಿ ಎಂದಿದ್ದರು. ಆದರೆ ಕೃಷಿ ಭೂಮಿಯನ್ನು ಮಾರಾಟ ಮಾಡಿದ್ದ ಬಗ್ಗೆ ದೇವರಾಜು ಸರಿಯಾದ ವಿವರಣೆ ನೀಡಿಲ್ಲ.

**ತನಿಖೆ ಅಂಶ ? 2** 2001ರಲ್ಲೇ ಎಲ್ ಟಿ ಕಂಪನಿಗೆ ಬಡಾವಣೆ ನಿರ್ಮಾಣಕ್ಕೆಂದು ವರ್ಕ್ ಆರ್ಡರ್ ಆಗಿತ್ತು. 2003ರಲ್ಲೇ ಬಡಾವಣೆ ನಿರ್ಮಾಣ ಕಾರ್ಯ ಪೂರ್ಣಗೊಳಿಸಿ ಫಲಾನುಭವಿಗಳಿಗೆ ಸೈಟ್ ಹಂಚಿಕೆ ಸಹ ಆಗಿತ್ತು. ಡಿಸೆಂಬರ್ 1, 20024 ರಂದು ರಂದು ಮೈಸೂರು ತಹಶೀಲ್ದಾರ್‌ಗೆ ಕೃಷಿಯೇತರ ಭೂಮಿ ಎಂದು ಪರಿವರ್ತಿಸುವಂತೆ ಮನವಿ ಮಾಡಲಾಗುತ್ತದೆ. ತಹಶೀಲ್ದಾರ್, ಡಿಸಿ ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿ ನಡೆದಿಲ್ಲವೆಂದು ನಮೂದು ಮಾಡುತ್ತಾರೆ. ಪಟ್ಟಭದ್ರ ಹಿತಾಸಕ್ತಿಗಳ ಪ್ರಭಾವದಿಂದ ಕಾನೂನು ಉಲ್ಲಂಘಿಸಿ ಭೂ ಪರಿವರ್ತನೆ ಮಾಡಲಾಗಿದೆ. ಈ ಪ್ರಕ್ರಿಯೆಗಳು ನಡೆಯುತ್ತಿದ್ದಾಗ ಧರಂ ಸಿಂಗ್ ಸರ್ಕಾರದಲ್ಲಿ ಸಿದ್ದರಾಮಯ್ಯ ಡಿಸಿಎಂ ಆಗಿದ್ದರು.

**ಮಲ್ಲಿಕಾರ್ಜುನ ಸ್ವಾಮಿ ಹೇಳಿಕೆ ಸುಳ್ಳು**

**ಸಿಎಂ ಬಾಮೈದ ಮಲ್ಲಿಕಾರ್ಜುನ ಸ್ವಾಮಿ ದೇವರಾಜುರಿಂದ 5,95,000 ರೂ.ಗಳಿಗೆ ಜಮೀನು ಖರೀದಿ ಮಾಡಿರುವುದಾಗಿ ಹೇಳಿದ್ದಾರೆ. 2004ರಲ್ಲಿ ಜಮೀನು ಖರೀದಿ ಮಾಡಿದಾಗ ಅದು ಕೃಷಿ ಭೂಮಿಯೇ ಆಗಿತ್ತು. ಆದರೆ ಮುಡಾದಿಂದ ಬಡಾವಣೆ ಅಭಿವೃದ್ಧಿ ಕಾರ್ಯ ನಡೆಯುತ್ತಿರಲಿಲ್ಲ ಎಂದಿದ್ದಾರೆ. ಆದರೆ ಅದಾಗಲೇ ಬಡಾವಣೆ ನಿರ್ಮಾಣ ಕಾಮಗಾರಿ ಕೈಗೆತ್ತಿಕೊಳ್ಳಲಾಗಿತ್ತು. ರಸ್ತೆಗಳು ನಿರ್ಮಾಣವಾಗಿದ್ದವು ಎಂಬ ಸಂಗತಿ ತನಿಖೆಯಿಂದ ಬಯಲಾಗಿದೆ.**


**ಸಿದ್ದರಾಮಯ್ಯ ಪತ್ನಿಗೆ ದಾನಪತ್ರ**

**2010ರಲ್ಲಿ ಪಾರ್ವತಿಗೆ ದಾನದ ರೂಪದಲ್ಲಿ ಮಲ್ಲಿಕಾರ್ಜುನ ಸ್ವಾಮಿ ಜಾಗವನ್ನು ನೀಡಿದ್ದರು. 6 ವರ್ಷಗಳ ಕಾಲ ಆ ಭೂಮಿ ಸ್ಥಿತಿಗತಿ ಮಲ್ಲಿಕಾರ್ಜುನ ಸ್ವಾಮಿಗೆ ಮಾಹಿತಿಯೇ ಇರಲಿಲ್ಲವೇ? ಒಂದು ವೇಳೆ ಗೊತ್ತಿದ್ದರೆ ಯಾಕೆ ಆಕ್ಷೇಪ ಸಲ್ಲಿಸಲಿಲ್ಲ ಈ ಎಲ್ಲಾ ಪ್ರಕ್ರಿಯೆಗಳನ್ನು ಹಗರಣದ ಭಾಗವಾಗಿಯೇ ಮಾಡಿದ್ದರಿಂದ ಆಕ್ಷೇಪ ಸಲ್ಲಿಸಿಲ್ಲ ಎನ್ನುವುದು ತಿಳಿಯುತ್ತಿದೆ. ಕೆಸರೆ ಜಾಗದ ಬದಲಾಗಿ ಪ್ರಮುಖ ಸ್ಥಳದಲ್ಲಿ ಬೆಲೆಬಾಳುವ ಸೈಟ್ ಪಡೆಯುವ ದುರುದ್ದೇಶದಿಂದಲೇ ಈ ಎಲ್ಲಾ ಪ್ರಕ್ರಿಯೆಗಳನ್ನು ಮಾಡಲಾಗಿದೆ ಎನ್ನುವುದು ಮೇಲ್ನೋಟಕ್ಕೆ ಗೊತ್ತಾಗುತ್ತಿದೆ.**

## ಮೂವರು ಸೈಬರ್ ಕ್ರೈಂ ವಂಚಕರು ಅರೆಸ್ಟ್!

• ಉದಯವಾಹಿನಿ ಬೆಂಗಳೂರು

Meesho ಕಂಪನಿಗೆ ವಂಚನೆ ಪ್ರಕರಣಕ್ಕೆ ಸಂಬಂಧಿ ಸಿದಂತೆ ಬೆಂಗಳೂರಿನಲ್ಲಿ ಗುಜರಾತ್ ಮೂಲದ ಮೂವರು ಸೈಬರ್ ವಂಚಕರನ್ನು ಪೊಲೀಸರು ಬಂಧಿಸಿದ್ದಾರೆ. Meesho ಕಂಪನಿಯಲ್ಲಿ ಗುಜ ರಾತ್ ಮೂಲದ ಸರಬರಾಜುದಾರರು Sellers 3ನೇ ಪಾರ್ಟಿ ಏಜೆಂಟ್‌ಗಳ ಜೊತೆ ಕೈಜೋಡಿಸಿ, ಗ್ರಾಹಕರು ಗಳನ್ನು (Buyers) ಸೃಷ್ಟಿಸಿ, ಜನವರಿ-2024 ರಿಂದ ಜುಲೈ-2024 ರವರೆಗೆ 7 ತಿಂಗಳ ಅವಧಿಯಲ್ಲಿ ಒಟ್ಟು 5 ಕೋಟಿ 50 ಲಕ್ಷ ನಷ್ಟವಾಗಿರುತ್ತದೆಂದು ದೂರಿನಲ್ಲಿ ಕಂಪನಿ ಅಧಿಕಾರಿ ತಿಳಿಸಿರುತ್ತಾರೆ. ಈ ಕುರಿತು ಸೈಬರ್ ಕ್ರೈಂ ಪೊಲೀಸ್ ಠಾಣೆಯಲ್ಲಿ ಸೈಬರ್ ವಂಚನೆ ಪ್ರಕರಣವು ದಾಖಲಾಗಿರುತ್ತದೆ. ಪ್ರಕರಣದ ತನಿಖೆಯನ್ನು ಮುಂದುವರೆಸಿದ ಸೈಬರ್ ಕ್ರೈಂ ಪೊಲೀಸರು, ವಿವಿಧ ಆಯಾಮಗಳಲ್ಲಿ ತನಿಖೆಯನ್ನು ಕೈಗೊಂಡು, Meesho ಕಂಪನಿಯಿಂದ ಆನ್‌ಲೈನ್ ಮುಖಾಂತರ ಹಣವನ್ನು ವರ್ಗಾವಣೆ ಮಾಡಿಕೊಂಡ ಬ್ಯಾಂಕ್ ಖಾತೆಯ ವಿವರ ಮತ್ತು ಕೃತ್ಯಕ್ಕೆ ಉಪಯೋಗಿಸಿದ ಹಲವಾರು ಮೊಬೈಲ್




ಫೋನ್ ನಂಬರ್‌ಗಳ ಬಗ್ಗೆ ಮಾಹಿತಿಯನ್ನು ಸಂಗ್ರಹಿಸಿ. ಈ ಪ್ರಕರಣದಲ್ಲಿ ವಂಚನೆ ಮಾಡಿದವರ ಪತ್ತೆಗಾಗಿ ವಿಶೇಷ ತಂಡವನ್ನು ರಚಿಸಿ. ಈ ತಂಡವನ್ನು ಗುಜರಾತ್ ರಾಜ್ಯಕ್ಕೆ ಕಳುಹಿಸಲಾಗಿತ್ತು ದಿನಾಂಕ:21/11/2024 ರಂದು ಈ ಪ್ರಕರಣದಲ್ಲಿ ಭಾಗಿಯಾಗಿದ್ದ ಮೂವರು ವ್ಯಕ್ತಿಗಳನ್ನು ಗುಜರಾತ್ ರಾಜ್ಯದ ಸೂರತ್ ನಗರದಲ್ಲಿ ಪತ್ತೆಮಾಡಿ, ವಶಕ್ಕೆ ಪಡೆದು ಕೊಳ್ಳಲಾಯಿತು. ವಶಕ್ಕೆ ಪಡೆದ ಮೂವರು ವ್ಯಕ್ತಿಗಳನ್ನು ವಿಚಾರಣೆ ಗೊಳಪಡಿಸಲಾಗಿ, ಪ್ರಕರಣದಲ್ಲಿ ವಂಚನೆ ಮಾಡಿರುವುದಾಗಿ ತಪ್ಪೊಪ್ಪಿಕೊಂಡಿದ್ದು, ಅಲ್ಲದೆ ಇತರೆ ಮೂವರು ಸಹಚರರ ಬಗ್ಗೆ ಮಾಹಿತಿಯನ್ನು ನೀಡಿರುತ್ತಾರೆ. ಮೂವರು ಸಹಚರರು ತಲೆಮರೆಸಿಕೊಂಡಿದ್ದು, ಪತ್ತೆಕಾರ್ಯ ಮುಂದುವರೆದಿದೆ.

## ಒಂದೇ ದಿನದಲ್ಲಿ ಬಡ ಕುಟುಂಬಕ್ಕೆ ಸೈಟ್ ಮಂಜೂರು

• ಉದಯವಾಹಿನಿ ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ನಿನ್ನೆ ಮಹಿಳೆಯೊಬ್ಬರು ಭೇಟಿಯಾಗಿ, ತನಗೆ ನಿವೇಶನ ಇಲ್ಲ. ಗಂಡ ಮತ್ತು ಇಬ್ಬರು ಮಕ್ಕಳಿದ್ದಾರೆ. ಬಾಡಿಗೆ ಕಟ್ಟೋದಕ್ಕೂ ಕಷ್ಟವಾಗುತ್ತಿದೆ ಎಂಬುದಾಗಿ ಅಲವತ್ತುಕೊಂಡು, ನಿವೇಶನಕ್ಕೆ ಮನವಿ ಮಾಡಿದ್ದರು. ಅವರು ಮನವಿ ಮಾಡಿದಂತ ಒಂದೇ ದಿನದಲ್ಲಿ ನಿವೇಶನ ಮಂಜೂರು ಮಾಡಿ ಆದೇಶಿಸಲಾಗಿದೆ. ಈ ಸಂಬಂಧ ತುಮಕೂರು ಜಿಲ್ಲೆಯ ಶಿರಾ ನಗರಸಭೆಯ ಪೌರಾಯುಕ್ತರು ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿದ್ದು, ದಿನಾಂಕ 02-12-2024ರಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತುಮಕೂರಿಗೆ ಭೇಟಿ ನೀಡಿದಂತ ಸಂದರ್ಭದಲ್ಲಿ ರಾಬಿಯಾ ಕೋಂ ಅಸ್ಲಂ ಪಾಷಾ ಎಂಬುವರು ತಾತ್ಕಾಲಿಕ ನಿವೇಶನ ಕೋರಿ ಮನವಿ ಸಲ್ಲಿಸಿದ್ದರು. ಅವರು ಸಲ್ಲಿಸಿದಂತ ಮನವಿಯಲ್ಲಿ ತಾನು ಶಿರಾ ಟೌನ್ ನಿವಾಸಿಯಾಗಿದ್ದು, ಕಡು ಬಡವರಾಗಿದ್ದೇವೆ. ಗಂಡ ಮತ್ತು ಎರಡು ಪುಟ್ಟ ಮಕ್ಕಳನ್ನು ನೋಡಿಕೊಂಡು ಬಾಡಿಗೆ ಕಟ್ಟಲು ಸಾಧ್ಯವಿಲ್ಲದ ಕಾರಣ ತಾತ್ಕಾಲಿಕವಾಗಿ ನಿವೇಶನವನ್ನು ಕಲ್ಪಿಸುವಂತೆ ಕೋರಿದ್ದರು ಎಂದಿದ್ದಾರೆ. ಸದರಿ ಕೋರಿಯನ್ನು ಶಿರಾ ಆಶ್ರಯ ಸಮಿತಿಯ ಸಭೆಯಲ್ಲಿ ಪರಿಗಣಿಸಿ, ಶಿರಾ ನಗರದ ಸರ್ವೆ ನಂಬಬರ್.100ರಲ್ಲಿ ನಗರ ಆಶ್ರಯ ಯೋಜನೆಯಡಿ ರಚಿಸಲಾಗಿರುವ ನಿವೇಶನಗಳ ಪೈಕಿ 20X30 ಅಳತೆಯ ಒಂದು ನಿವೇಶವನ್ನು ಸದರಿಯವರಿಗೆ ಹಂಚಿಕೆ ಮಾಡಲು ಠರಾವು ಅಂಗೀಕರಿಸಲಾಗಿರುತ್ತದೆ ಎಂದು ಹೇಳಿದ್ದಾರೆ. ನಿವೇಶನ ನೀಡಿ, ಮನೆ ಮಂಜೂರು ಮಾಡಿಸಿಕೊಡುವಂತೆಯೂ ಮನವಿಯಲ್ಲಿ ಕೋರಿದ್ದರು. ಈ ಮನವಿಗೆ ಮಾನವೀಯತೆಯನ್ನು ಮೆರೆದಂತ ಸಿಎಂ ಸಿದ್ದರಾಮಯ್ಯ ಒಂದೇ ದಿನದಲ್ಲಿ ಸೈಟ್ ಮಂಜೂರು ಮಾಡಿ ಆದೇಶಿಸಿದ್ದಾರೆ.



**ಮುಂದಿನ ದಿನಗಳಲ್ಲಿ ಇವರು ರಾಜೀವ್ ಗಾಂಧಿ ವಸತಿ ನಿಗಮ, ಬೆಂಗಳೂರು ಇವರಿಗೆ ದಾಖಲೆಗಳನ್ನು ಸಲ್ಲಿಸಿ ನಿಯಮಾನುಸಾರ ಹಕ್ಕು ತಿಳಿಸಿದ್ದಾರೆ. ಪತ್ರ ಸೃಜಿಸಿ, ವಿತರಿಸಲು ಕ್ರಮವಹಿಸಲಾಗಿರುತ್ತದೆ ಎಂಬುದಾಗಿ ಒಟ್ಟಾರೆಯಾಗಿ ನಿನ್ನೆ ಮುಖ್ಯಮಂತ್ರಿಗಳಿಗೆ ಬಡ ಕುಟುಂಬದ ಮಹಿಳೆ ತನಗೆ ನಿವೇಶನವಿಲ್ಲ. ಬಾಡಿಗೆ ಮನೆಯಲ್ಲಿ ಇದ್ದೀವಿ. ಬಾಡಿಗೆ ಕಟ್ಟೋದಕ್ಕೂ ಕಷ್ಟವಾಗುತ್ತಿದೆ ಎಂಬುದಾಗಿ ಗೋಳಾಡುತ್ತಲೇ ಸಿದ್ದರಾಮಯ್ಯಗೆ ಮನವಿ ನೀಡಿದ್ದರು.**

## ರಾಜ್ಯದಲ್ಲಿ ಭಾರೀ ಮಳೆ, ಈ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಘೋಷಣೆ!

• ಉದಯವಾಹಿನಿ ಬೆಂಗಳೂರು

ಬಂಗಾಳಕೊಲ್ಲಿಯಲ್ಲಿ ಫೆಂಗಲ್ ಚಂಡಮಾರುತದ ಅಬ್ಬರ ಪರಿಣಾಮ, ರಾಜ್ಯದ ಮಂಗಳೂರು, ಚಿಕ್ಕಬಳ್ಳಾಪುರ ಸೇರಿದಂತೆ ವಿವಿಧ ಜಿಲ್ಲೆಗಳಲ್ಲಿ ಮಳೆ, ಚಳಿಗಾಳಿ ಆರಂಭಗೊಂಡಿದೆ.

ಫೆಂಗಲ್ ಚಂಡಮಾರುತದ ಪರಿಣಾಮ ರಾಜ್ಯದ ಹಲವಡೆ ಭಾರೀ ಮಳೆಯಾಗುವ ಸಾಧ್ಯತೆ ಇದ್ದು, ಕೊಡಗು, ದಕ್ಷಿಣ ಕನ್ನಡ, ಉತ್ತರ ಕನ್ನಡ, ಉಡುಪಿ, ಚಿಕ್ಕಮಗಳೂರು, ಹಾಸನ ಜಿಲ್ಲೆಗಳಲ್ಲಿ ಮಳೆಯಾಗುವ ಸಾಧ್ಯತೆ ಇದ್ದು, ಯೆಲ್ಲೋ ಅಲರ್ಟ್ ಘೋಷಿಸಲಾಗಿದೆ.

ಬೆಂಗಳೂರು, ಕೋಲಾರ, ತುಮಕೂರು ಸೇರಿ ಇತರೆ ಜಿಲ್ಲೆಗಳಲ್ಲಿ ಮೋಡ ಕವಿತ ವಾತಾವರಣದ ಜೊತೆಗೆ ಸಾಮಾನ್ ಮಳೆಯಾಗುವ ನಿರೀಕ್ಷೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮಂಗಳೂರಿನಲ್ಲಿ ಆರೇಂಜ್ ಅಲರ್ಟ್



ಉದಯವಾಹಿನಿ ಚಿತ್ರ

ಅನ್ನು ಜಿಲ್ಲಾಧಿಕಾರಿ ಘೋಷಣೆ ಮಾಡಿದ್ದಾರೆ. ಅಲ್ಲದೇ ಯಾವುದೇ ಮೀನುಗಾರರು ಸಮುದ್ರಕ್ಕೆ ಇಳಿಯದಂತೆ, ಮೀನುಗಾರಿಕೆಗೆ ತೆರಳಿದ್ದರೇ, ಕೂಡಲೇ ವಾಪಾಸಾಗುವಂತೆ ಮುನ್ಸೂಚನೆ ನೀಡಿದ್ದಾರೆ. ಮಂಗಳೂರಿನ ಹಲವೆಡೆ ಸತತ ಒಂದು ಗಂಟೆಯಿಂದ ಭಾರೀ ಮಳೆಯ ಜೊತೆಗೆ ಸುಳಿಗಾಳಿ ಬೀಸುತ್ತಿದ್ದು, ಜನ ಜೀವನ ಅಸ್ತವ್ಯಸ್ಥಗೊಂಡಿದೆ. ಮಳೆಯಿಂದಾಗಿ ಕತ್ತಲು ಕವಿದಂತೆ ಆಗಿದ್ದು ರಸ್ತೆಗಳಲ್ಲಿ ವಾಹನ ಸಂಚಾರಕ್ಕೂ ಅಡ್ಡಿಯಾಗಿದೆ. ರಾತ್ರಿ ಅರಬ್ಬಿ ಸಮುದ್ರ ತೀರದ ಜಿಲ್ಲೆಗಳಲ್ಲಿ ಭಾರೀ ಮಳೆಯಾಗುವ ಮುನ್ಸೂಚನೆಯನ್ನು ಹವಾಮಾನ ಇಲಾಖೆ ನೀಡಿದೆ. ಹೀಗಾಗಿ ಸಮುದ್ರ, ನದಿ ಪಾತ್ರದ ಜನರು ಎಚ್ಚರಿಕೆಯಿಂದ ಇರುವಂತೆ ಹವಾಮಾನ ಇಲಾಖೆ ಸೂಚಿಸಿದೆ. ಅರಬ್ಬಿ ಸಮುದ್ರದಲ್ಲಿ ಮೀನುಗಾರರು ಕಟ್ಟೆಚ್ಚರ ವಹಿಸಲು ತಿಳಿಸಿದೆ.

## ಸರ್ಕಾರಿ ಕಾಲೇಜು ಪ್ರಭಾರ ಪ್ರಾಂಶುಪಾಲರ ರಜೆ ಮಂಜೂರಾತಿ

• ಉದಯವಾಹಿನಿ ಬೆಂಗಳೂರು

ಇಲಾಖಾ ವ್ಯಾಪ್ತಿಯ ಸರ್ಕಾರಿ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಭಾರ ಪ್ರಾಂಶುಪಾಲರುಗಳ ರಜೆ ಮಂಜೂರಾತಿಯ ಬಗ್ಗೆ, ಶಿಕ್ಷಣ ಇಲಾಖೆ ಮಹತ್ವದ ಆದೇಶ ಹೊರಡಿಸಿದೆ.

ಆದೇಶದಲ್ಲಿ ಏನಿದೆ? ಇಲಾಖಾ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಸಂಸ್ಕೃತ ಕಾಲೇಜು, ಚಿತ್ರಕಲಾ ಕಾಲೇಜು, ಶಿಕ್ಷಣ ಕಾಲೇಜು ಹಾಗೂ ಕಾನೂನು ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರಭಾರ ಪ್ರಾಂಶುಪಾಲರುಗಳು ದೀರ್ಘಾವಧಿ ರಜೆಗಳಾದ ಗಳಿಕೆ ರಜೆ, ಅಸಾಧಾರಣಾ ರಜೆ, ಮಾತೃತ್ವ ರಜೆ, ಪಿತೃತ್ವ ರಜೆ, ವ್ಯಾಸಂಗ ರಜೆಗಳ ಹಾಗೂ ಸಾಂಧರ್ಭಿಕ ರಜೆ ಮೇಲೆ ತೆರಳುವ ಸಂದರ್ಭದಲ್ಲಿ ಸದರಿ ರಜೆಗಳಿಗೆ ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಂದ ಪೂರ್ವಾನುಮತಿ ಪಡೆಯದೆ ರಜೆಯನ್ನು ಹಾಗೂ ಕೇಂದ್ರ ಸ್ಥಾನ ಬಿಡುತ್ತಿರುವ



ಪ್ರಕರಣಗಳ ಮಾಹಿತಿಯು ಈ ಕಛೇರಿಯಲ್ಲಿ ಸ್ವೀಕೃತಗೊಂಡಿರುವ ಹಿನ್ನೆಲೆಯಲ್ಲಿ ಈ ಕುರಿತು ಗಂಭೀರವಾಗಿ ಪರಿಗಣಿಸಲಾಗಿದೆ.

ಪರಿಶೀಲಿಸಲಾಗಿ ಇನ್ನೂ ಮುಂದೆ ಪ್ರಭಾರ ಪ್ರಾಂಶುಪಾಲರುಗಳು ಯಾವುದೇ ರಜೆಯನ್ನು ಹಾಗೂ ಕೇಂದ್ರ ಸ್ಥಾನ ಬಿಡುವ ಪೂರ್ವದಲ್ಲಿ ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರುಗಳ ಪೂರ್ವಾನುಮತಿ ಪಡೆದು ತೆರಳುವಂತೆ ಕಡ್ಡಾಯವಾಗಿ ಸೂಚಿಸಲಾಗಿದೆ.

**ಒಂದು ವೇಳೆ ಸಂಬಂದಪಟ ಪಾದೇಶಿಕ ಜಂಟಿ ನಿರ್ದೇಶಕರುಗಳ ಪೂರ್ವಾನುಮತಿ ಪಡೆದು ತೆರಳುವಂತೆ ಕಡ್ಡಾಯವಾಗಿ ಸೂಚಿಸಲಾಗಿದೆ. ಒಂದು ವೇಳೆ ಸಂಬಂಧಪಟ್ಟ ಪ್ರಾದೇಶಿಕ ಜಂಟಿ ನಿರ್ದೇಶಕರುಗಳ ಪೂರ್ವಾನುಮತಿ ಪಡೆದು ಯಾವುದೇ ರಜೆಯನ್ನು ಹಾಗೂ ಕೇಂದ್ರ ಸ್ಥಾನದಲ್ಲಿ ಇಲ್ಲದಿದ್ದ ಸಂದರ್ಭದಲ್ಲಿ ಸದರಿ ಅಧಿಕಾರಿಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ ನಿಯಮ 1957ರ (ವರ್ಗೀಕರಣ. ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳನ್ವಯ ಶಿಸ್ತು ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಲಾಗಿದೆ.**

## ಏಡ್ಸ್ ಸೋಂಕು ಪ್ರಮಾಣ ಇಳಿಕೆ

• ಉದಯವಾಹಿನಿ ಬೆಂಗಳೂರು

ಏಡ್ಸ್ ನಿಯಂತ್ರಣಕ್ಕೆ ಬರುತ್ತಿದ್ದು, ಸೋಂಕಿತರ ಸಂಖ್ಯೆಯು ಇಳಿಕೆಯಾಗುತ್ತಿದೆ. 2014 ರಲ್ಲಿ ಒಟ್ಟಾರೆ ತಪಾಸಣೆಯ ಶೇ.1.77 ರಷ್ಟು ಇದ್ದ ಸೋಂಕಿನ ಪ್ರಮಾಣ, 2024-25 ರಲ್ಲಿ ಶೇ.0.33 ರಷ್ಟು ಇಳಿಕೆಯಾಗಿದೆ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಮಾಹಿತಿ ನೀಡಿದ್ದಾರೆ. ಸಿನಿಮಾ ವ್ಯವಹಾರ ಕರ್ನಾಟಕ ನಗರದ ದೇವರಾಜ ಅರಸು ಟ್ರಕ್ ಟರ್ಮಿನಲ್‌ನಲ್ಲಿ ನಡೆದ ವಿಶ್ವ ಏಡ್ಸ್ ದಿನ ಕಾರ್ಯಕ್ರಮದಲ್ಲಿ ಮಾತನಾಡಿದ ಸಚಿವರು. ಮನುಕುಲವನ್ನು ಕಾಡುತ್ತಿರುವ ಏಡ್ಸ್ ರೋಗದ ವಿರುದ್ಧ ಹೋರಾಡಲು ಮೊದಲ ಹೆಜ್ಜೆಯೇ ಜಾಗೃತಿ ಮೂಡಿಸುವುದಾಗಿದೆ. ಏಡ್ಸ್ ಬಗ್ಗೆ ತಿಳುವಳಿಕೆ, ಶಿಕ್ಷಣ ನೀಡುವ ಜೊತೆಗೆ ಏಡ್ಸ್ ಬಾಧಿತರನ್ನು ದೂರವಿಡುವ ಅವೈಜ್ಞಾನಿಕ ಮಾದರಿಗಳನ್ನು ಬಿಡಬೇಕು ಎಂದರು.



ವೈದ್ಯ ಕೀಯ ಸಂಶೋಧನೆ ಹೆಚ್ಚುತ್ತಿರುವ ಕಾಲಘಟ್ಟದಲ್ಲಿ ಹೆಚ್‌ಐವಿ ಎಂದರೆ ಭಯಪಡಬೇಕಿಲ್ಲ. ಏಡ್ಸ್ ರೋಗದ ಸಾವಿನ ಭಯದಿಂದ ಹೊರಬರಲು, ರೋಗವನ್ನು ನಿಯಂತ್ರಣದಲ್ಲಿರಿಸಿಕೊಳ್ಳಲು ಚಿಕಿತ್ಸೆಗಳಿವೆ. ರಾಜ್ಯದಲ್ಲಿ ಏಡ್ಸ್ ಹರಡುವಿಕೆ ನಿಯಂತ್ರಿಸುವುದು ಮತ್ತು ಸಾವಿನ ಪ್ರಮಾಣವನ್ನು ಶೂನ್ಯಕ್ಕೆ ತರುವುದು ನಮ್ಮ ಮುಖ್ಯ ಉದ್ದೇಶವಾಗಿದೆ. ರಾಜ್ಯದಲ್ಲಿ ಹೆಚ್‌ಐವಿ ವೈರಸ್ ಪರೀಕ್ಷೆಗಳು ಹೆಚ್ಚೆಚ್ಚು ನಡೆಯುತ್ತಿದ್ದು, ರೋಗ ಹರಡುವಿಕೆ ಮತ್ತು ಸಾವಿನ ಪ್ರಮಾಣದಲ್ಲಿ ಇಳಿಕೆ ಕಂಡಿದೆ.

# ದೌರ್ಬಲ್ಯವಲ್ಲ, ಅದು ಭೂಮಿಯ ಮೇಲಿನ ಸೌಹಾರ್ದತೆಯ ಪ್ರಬಲ ಶಕ್ತಿ

### ಬ್ರಹ್ಮಶ್ರೀ ನಾರಾಯಣ ಗುರುಗಳ ಮೊದಲ ಅಂತರರಾಷ್ಟ್ರೀಯ ಸರ್ವಧರ್ಮ ಸಮ್ಮೇಳನದ ಶತಮಾನೋತ್ಸವ

• ಉದಯವಾಹಿನಿ ಬೆಂಗಳೂರು

ಯಾವುದೇ ಧರ್ಮ ಮತ್ತು ಸಮಾಜವು ಕೀಳರಿಮೆ ಹಾಗೂ ಪ್ರತ್ಯೇಕತೆಯನ್ನು ಅನುಭವಿಸುವ ವಾತಾವರಣವಿರಬಾರದು. ಧಾರ್ಮಿಕ ನಂಬಿಕೆ ದೌರ್ಬಲ್ಯವಲ್ಲ, ಅದು ಭೂಮಿಯ ಮೇಲಿನ ಸೌಹಾರ್ದತೆಯ ಪ್ರಬಲ ಶಕ್ತಿಯಾಗಿದೆ ಎಂದು ವಿಧಾನ ಸಭೆಯ ಸಭಾಧ್ಯಕ್ಷರಾದ ಯು.ಟಿ.ಖಾದರ್ ಫರೀದ್ ಹೇಳಿದ್ದಾರೆ.

ರೋಮಿನ ವ್ಯಾಟಿಕನ್ ನಗರದಲ್ಲಿ, ಬ್ರಹ್ಮಶ್ರೀ ನಾರಾಯಣ ಗುರುಗಳ ಮೊದಲ ಅಂತರರಾಷ್ಟ್ರೀಯ ಸರ್ವಧರ್ಮ ಸಮ್ಮೇಳನದ ಶತಮಾನೋತ್ಸವ ಸ್ಮರಣಾರ್ಥ ಮಾನವೀಯತೆಗಾಗಿ ಧರ್ಮಗಳ ಒಗ್ಗಟ್ಟು ಎಂಬ ಶೀರ್ಷಿಕೆಯೊಂದಿಗೆ ಆಯೋಜಿಸಲಾದ ಮೂರು ದಿನಗಳ ವಿಶ್ವ ಸರ್ವಧರ್ಮ ಸಮ್ಮೇಳನದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ, ಮಾತನಾಡಿದ ಅವರು ನಾವು ವೈವಿಧ್ಯತೆಗಳನ್ನು ಹೊಂದಿದ್ದರೂ, ಪ್ರತಿಯೊಬ್ಬರೊಳಗಿರುವ ದೈವಿಕ ಚೇತನವು ಒಂದೇ. ಸಮಾಜವನ್ನು ಮುನ್ನಡೆಸುವ ನನ್ನ ಸಹೋದರ ಸಹೋದರಿಯರೇ, ನಾವಿಂದು ದ್ವೇಷವನ್ನು ತಿರಸ್ಕರಿಸುವ ಪ್ರತಿಜ್ಞೆ ಮಾಡೋಣ ಎಂದರು. ನಾನು ಇಲ್ಲಿ ಯಾವುದೇ ಒಂದು ಧರ್ಮದ ಪ್ರತಿನಿಧಿಯಾಗಿ ಬಂದಿಲ್ಲ.

ಬದಲಾಗಿ ಮಾನವೀಯತೆಯ ವಿನಮ್ರ ಧ್ವನಿಯಾಗಿ, ಶಾಂತಿ, ಪ್ರೀತಿ ಮತ್ತು ಸೌಹಾರ್ದತೆಯಿಂದ ತುಂಬಿದ ಒಂದು ಸುಂದರ



ಉದಯವಾಹಿನಿ ಚಿತ್ರ

**ಶತಕೋಟಿ ಜನರ ಸಾಮೂಹಿಕ ಆಶಯ, ಹೋರಾಟ**

ಪ್ರಪಂಚದ ಕನಸು ಕಾಣುವ ಶತಕೋಟಿ ಜನರ ಸಾಮೂಹಿಕ ಆಶಯ, ಹೋರಾಟ ಮತ್ತು ಆಕಾಂಕ್ಷೆಗಳನ್ನು ಹೊತ್ತುಕೊಂಡು ಅವರೆಲ್ಲರ ಧ್ವನಿಯಾಗಿ ಇಲ್ಲಿ ನಿಮ್ಮೆದುರು ನಿಂತಿದ್ದೇನೆ ಎಂದು ತಿಳಿಸಿದರು. Ad removed. Details ಒಂದು ಜಾತಿ, ಒಂದು ಧರ್ಮ ಮತ್ತು ಒಬ್ಬ ದೇವರುಎಂಬ ಬ್ರಹ್ಮಶ್ರೀ ನಾರಾಯಣ ಗುರುಗಳ ಬೋಧನೆಯು ಕೇರಳದಲ್ಲಿ ಸಾಮಾಜಿಕ ಸಮಾನತೆ, ಸಾಮರಸ್ಯ ಮತ್ತು ಶಾಂತಿಯುತ ಸಹಬಾಳ್ವೆಯನ್ನು ಪ್ರತಿಪಾದಿಸುವ ಮಹತ್ವದ ಸಾಮಾಜಿಕ ಆಂದೋಲನವನ್ನು ಸೃಷ್ಟಿಸಿತ್ತು. ಜೊತೆಗೆ, ಶ್ರೀ ನಾರಾಯಣ ಗುರುಗಳು ಸಮಾಜದ ಸಬಲೀಕರಣ ಮತ್ತು ಉನ್ನತೀಕರಣದಲ್ಲಿ ಶಿಕ್ಷಣದ ಮಹತ್ವದ ಬಗ್ಗೆ ಜನರಲ್ಲಿ ಗಾಢವಾದ ಅರಿವು ಮೂಡಿಸಿದವರು. ಬ್ರಹ್ಮಶ್ರೀ ನಾರಾಯಣ ಗುರುಗಳು ಮತ್ತು ಸ್ವಾಮಿ ವಿವೇಕಾನಂದರಂತಹ ಮಹಾನ್ ಆಧ್ಯಾತ್ಮಿಕ ದಾರ್ಶನಿಕರ ಪುಣ್ಯ ಭೂಮಿ ಭಾರತದಿಂದ ಬಂದಿದ್ದೇನೆ ಎಂದು ಹೇಳಲು ನಾನು ಹೆಮ್ಮೆ ಪಡುತ್ತೇನೆ.

**ಅದು ಪವಿತ್ರ ಬೈಬಲ್, ಕುರಾನ್, ವೇದಗಳು, ಧಮ್ಮಪದ ಅಥವಾ ಟೋರಾ ಆಗಿರಲಿ, ಎಲ್ಲಾ ಧರ್ಮಗ್ರಂಥಗಳ ಸಾರವೇ ನಾವೆಲ್ಲರೂ ಒಂದೇ. ಇದು ಯಾವ ಕಾಲದಲ್ಲೂ ಬದಲಾವಣೆಯಾಗುವುದಿಲ್ಲ ಎನ್ನುವ ಮೂಲಭೂತ ಸತ್ಯವನ್ನು ನಾವು ಸದಾ ನೆನಪಿಟ್ಟುಕೊಳ್ಳಬೇಕು ಎಂದು ವಿಧಾನ ಸಭೆಯ ಸಭಾಧ್ಯಕ್ಷರಾದ ಯು.ಟಿ.ಖಾದರ್ ಫರೀದ್ ಹೇಳಿದರು.**

ಹಾಗೆಯೇ, ನನಗೆ ಮತ್ತು ನನ್ನಂತಹ ಅಸಂಖ್ಯಾತರಿಗೆ ಏಕತೆ, ಶಾಂತಿ, ಮತ್ತು ಸೌಹಾರ್ದತೆಯಿಂದ ಕೂಡಿದ ಹೊಸ ಸಮಾಜ ನಿರ್ಮಾಣಕ್ಕೆ ಪ್ರೇರೇಪಣೆ ನೀಡಿದ ಈ ಮಹಾನ್ ವ್ಯಕ್ತಿಗಳನ್ನು ಈ ಸಂದರ್ಭದಲ್ಲಿ ಅತ್ಯಂತ ಗೌರವಪೂರ್ವಕವಾಗಿ ಸ್ಮರಿಸುತ್ತೇನೆ. ನೂರು ವರ್ಷಗಳ ನಂತರ ಈ ಮೈಲಿಗಲ್ಲನ್ನು ಆಚರಿಸುವುದು ಕೇವಲ ಒಂದು ಸ್ಮರಣಾರ್ಥ ಸಮ್ಮೇಳನವಾಗಿ ಮಾತ್ರವಲ್ಲ-ಇದು ಹೊಸ ಸಾಮರಸ್ಯ ಸಮಾಜದ ನಿರ್ಮಾಣಕ್ಕೆ ನೀಡುವಂತಹ ಒಂದು ಶಕ್ತಿಯುತ ಕರೆಯಾಗಿದೆ ಎಂದು ಹೇಳಿದರು.

ಸಮ್ಮೇಳನದ ಈ ಮಹತ್ವಪೂರ್ಣ ಕ್ಷಣಗಳು ಶ್ರೀ ನಾರಾಯಣ ಗುರುಗಳ ಬೋಧನೆಗಳನ್ನು ಪುನರ್ಮನನ ಮಾಡುವ ಕ್ಷಣಗಳು ಮಾತ್ರವಲ್ಲ, ಅದು ಧಾರ್ಮಿಕ ಧ್ರುವೀ ಕರಣ, ಸಾಮಾಜಿಕ ಅನ್ಯಾಯ, ಅಂತರ್ಧರ್ಮೀರಯ ಸಂವಾದದ ನಿರ್ಣಾಯಕ ಅಗತ್ಯವನ್ನು ಸ್ಪಷ್ಟವಾಗಿ ಎಲ್ಲರಿಗೆ ಸೂಚಿಸುವ ಸಮಯೋಚಿತ ಜ್ಞಾಪನೆಯಾಗಿವೆ.

**ಈ ಶುಭ ಸಂದರ್ಭದಲ್ಲಿ, ನನಗೆ ನನ್ನ ತಾಯ್ನಾಡಾದ ಭಾರತದ ಪೂಜ್ಯ ಋಷಿ ಮುನಿಗಳ ವಸುಧೈವ ಕುಟುಂಬಕಂ - ಜಗತ್ತು ಒಂದೇ ಕುಟುಂಬ ಎನ್ನುವ ಅಮರ ನುಡಿಗಳು ನೆನಪಿಗೆ ಬರುತ್ತದೆ. ಎಲ್ಲರೂ ನಮ್ಮವರು ಎನ್ನುವ ಈ ಪ್ರಾಚೀನ ಮಂತ್ರವು ಇಂದಿನ ಈ ಸಂದರ್ಭದಲ್ಲಿ ಹೆಚ್ಚು ಪ್ರಸ್ತುತವಾಗಿದ್ದು, ನಮ್ಮ ದೇಶದ ಸಂವಿಧಾನದ ಆದರ್ಶವನ್ನೂ ಪ್ರತಿಬಿಂಬಿಸುತ್ತದೆ.**

ಆದ್ದರಿಂದ, ಮಾನವೀಯತೆಗಾಗಿ ಧರ್ಮಗಳ ಏಕತೆ ಎಂಬ ಈ ವಿಶ್ವ ಸಮ್ಮೇಳನವನ್ನು ಆಯೋಜಿಸಿದ ಶಿವಗಿರಿ ಮಠದ ಶ್ರೀ ನಾರಾಯಣ ಧರ್ಮ ಸಂಘದ ಟ್ರಸ್ಟ್ ಅಧ್ಯಕ್ಷರಾದ ಸ್ವಾಮಿ ಸಚ್ಚಿದಾನಂದರಿಗೆ, ಕಾರ್ಡಿನಲ್ ಮಿಗುಯೆಲ್ ಏಂಜೆಲ್ ಆಯುಸೊ ಗುಯಿಕೋಟ್, ಒ.ಎ.ಎ.ಎ. ಅಂತರಧರ್ಮೀಯ ಸಂವಾದದ ಡಿಕ್ಯಾಸ್ಟರಿಯ ಪ್ರಿಫೆಕ್ಟ್, ಕಾರ್ಡಿನಲ್- ಡೆಸಿಗ್ನೆಟ್ ಮಾನ್ಸಿಂಜರ್ ಜಾರ್ಜ್ ಕೂವಕಾಡ್ ಮತ್ತು ಅವರ ತಂಡಕ್ಕೆ ನಾನು ಹೃತೂರ್ವಕ ಕೃತಜ್ಞತೆಗಳನ್ನು ಸಲ್ಲಿಸುತ್ತೇನೆ ಎಂದು ಸಭಾಧ್ಯಕ್ಷರು ಹೇಳಿದರು.

# ಶ್ರೀ ಬೆಟ್ಟದ ಲಿಂಗೇಶ್ವರ ದರ್ಶನ ಪಡೆದ ಸಾವಿರಾರು ಭಕ್ತರು

## ಕೂಕನಪಳ್ಳಿಯಲ್ಲಿ ಅದ್ದೂರಿ ಜಾತ್ರೆ–37 ಜೋಡಿ ಉಚಿತ ಸಾಮೂಹಿಕ ವಿವಾಹ, ಒಗ್ಗಟ್ಟಿನೊಂದಿಗೆ ಸಮಾಜಮುಖಿಯಾಗಿ ಕಾರ್ಯ

• **ಉದಯವಾಹಿನಿ, ಕೊಪ್ಪಳ**

ತಾಲ್ಲೂಕಿನ ಕೂಕನಪಳ್ಳಿ ಗ್ರಾಮದಲ್ಲಿ ಕಾರ್ತಿಕ ಮಾಸ ಪ್ರಯುಕ್ತ ಪ್ರತಿ ವರ್ಷದಂತೆ ಈ ವರ್ಷವು ಇತ್ತಿಚ್ಚಿಗೆ ಗ್ರಾಮದ ಪ್ರಸಿದ್ಧ ಪವಾಡ ಪುರುಷ ಶ್ರೀ ಬೆಟ್ಟದ ಲಿಂಗೇಶ್ವರರ ಜಾತ್ರಾ ಮಹೋತ್ಸವ ಅದ್ದೂರಿಯಾಗಿ ಜರುಗಿತು. ಅಂದು ಬೆಳಗ್ಗೆ ಬೆಟ್ಟದಲಿಂಗೇಶ್ವರನ ಮೂರ್ತಿಗೆ ವಿಶೇಷ ಪೂಜಾ ಕಾರ್ಯದೊಂದಿಗೆ ಜಾತ್ರೆಗೆ ಚಾಲನೆ ನೀಡಲಾಯಿತು.

ನಂತರ ಬೆಳಗ್ಗೆ 11 ಗಂಟೆಗೆ ಗ್ರಾಮದ ಶ್ರೀ ಬೆಟ್ಟದಲಿಂಗೇಶ್ವರನ ದೇವಸ್ಥಾನದಲ್ಲಿ 37 ನವ ಜೋಡಿಗಳು ದಾಂಪತ್ಯ ಜೀವನಕ್ಕೆ ಕಾಲಿಟ್ಟರು. ಮಧ್ಯಾಹ್ನ 12 ಗಂಟೆಗೆ ಗ್ರಾಮದ ದೇವಸ್ಥಾನದ ಬಳಿ ಬರುವ ಭಕ್ತ ರಿಗೆ ಪ್ರಸಾದ ವ್ಯವಸ್ಥೆ ಅಚ್ಚುಕಟ್ಟಾಗಿ ಜರಗಿತು.

**ಅದ್ದೂರಿಯಾಗಿ ರಥೋತ್ಸವಕ್ಕೆ ಚಾಲನೆ:** ಸಂಜೆ 6 ಗಂಟೆಗೆ ಗ್ರಾಮದ ಶ್ರೀ ಬೆಟ್ಟದಲಿಂಗೇಶ್ವರನ ದೇವಸ್ಥಾನದ ಬಳಿ ಕೊಪ್ಪಳ ಮಾಜಿ ಸಂಸದರಾದ ಸಂಗಣ್ಣ ಕರಡಿ ರವರು ಮಾತನಾಡಿ, ಜೀವನದಲ್ಲಿ ಸುಖ ದುಃಖ, ಏರು ಇಳಿತ ಬರುವುದು ಸಹಜ. ಸಮಸ್ಯೆಗಳನ್ನು ಮೆಟ್ಟಿ ನಿಂತು ಛಲದಿಂದ ಬಾಳಿ ಸಾಧಿಸಿ ತೋರಿಸಬೇಕು.

ಇದನ್ನು ನವವಿವಾಹಿತರು ಅರಿತುಕೊಳ್ಳಬೇಕು ಎಂದ ಅವರು, ಬಾಸಿಂಗ ಬಲ, ಕಷ್ಟ ಬಂದರೂ ತಾಳ್ಮೆ ಬೇಕು ಎಂದು ಸೂಚಿಸುವ ತಾಳಿ, ಕುಂಕುಮ, ಕಾಲುಂಗರದ ಔಚಿತ್ಯದ ಹಿನ್ನಲೆ ವಿಶ್ಲೇಷಿಸಿದರು.

ನಂತರ ಶ್ರೀ ಸಿದ್ದಲಿಂಗೇಶ್ವರ ಮಹಾಸ್ವಾಮಿಗಳು ಮೈನಹಳ್ಳಿ ಮಠದ ಶ್ರೀಗಳು ಮಾತನಾಡಿ,ಕೂಕನಪಳ್ಳಿ ಗ್ರಾಮದಲ್ಲಿ ಸರ್ವ ಜನಾಂಗದವರಿದ್ದಾರೆ.

ಒಗ್ಗಟ್ಟಿನೊಂದಿಗೆ ಸಮಾಜಮುಖಿಯಾಗಿ ಕಾರ್ಯಮಾಡುತ್ತಾರೆ. ಪ್ರತಿ ವರ್ಷ ಜಾತ್ರಾ ಮಹೋತ್ಸವದಲ್ಲಿ ಸಾಮೂಹಿಕ ವಿವಾಹ ಏರ್ಪಡಿಸಿ ಬಡವರಿಗೆ ಆಗುವ ಆರ್ಥಿಕ ಹೊರೆಯನ್ನು ನೀಗಿಸಿದ್ದಾರೆ. ಗ್ರಾಮದ ಹಿರಿಯರ ಮಾರ್ಗದರ್ಶನ ಸಾರ್ಥಕತೆ ಪಡೆದಿದೆ ಎಂದರು.

ಮಹಾ ರಥೋತ್ಸವಕ್ಕೆ ಧ್ವಜಾರೋಹಣ ಮಾಡುವ ಮೂಲಕ ಚಾಲನೆ ನೀಡಿದರು. ಕೂಕನಪಳ್ಳಿ, ಅಬ್ಬಿಗೇರಿ, ವನಬಳ್ಳಾರಿ, ಇಂದರಗಿ, ಧನಕನದೊಡ್ಡಿ, ಬೂದುಗುಂಪ,ಕಾಮನೂನುರ, ಸೇರಿದಂತೆ ತಾಲ್ಲೂಕಿನ ವಿವಿಧ ಗ್ರಾಮಗಳಿಂದ ಬೆಟ್ಟದ ಲಿಂಗೇಶ್ವರ ಭಕ್ತರು ಆಗಮಿಸುವ ಮೂಲಕ ಜಾತ್ರಾ ಮಹೋತ್ಸವ ಹಾಗೂ ಮಹಾರಥೋತ್ಸವದಲ್ಲಿ ಸಾವಿರಾರು ಭಕ್ತರು ಪಾಲ್ಗೊಂಡಿದ್ದಾರೆ.





ಉದಯವಾಹಿನಿ ಚಿತ್ರ

**ಸುಖ ದುಃಖ, ಏರು ಇಳಿತ ಬರುವುದು ಸಹಜ**

### ಪ್ರಸಾದ ವ್ಯವಸ್ಥೆಗೆ ಮೆಚ್ಚುಗೆ

**ಶ್ರೀ ಬೆಟ್ಟದಲಿಂಗೇಶ್ವರನ ಜಾತ್ರಾ ಮಹೋತ್ಸವಕ್ಕೆ ಹಾಗೂ ಉಚಿತ ಸಾಮೂಹಿಕ ವಿವಾಹ ವಿವಾಹದಲ್ಲಿ ಪಾಲ್ಗೊಳ್ಳುವ ಭಕ್ತರಿಗೆ ವಿಶೇಷ ಪ್ರಸಾದ ವ್ಯವಸ್ಥೆಯನ್ನ ಅಚ್ಚುಕಟ್ಟಾಗಿ ಮಾಡಲಾಗಿದೆ.ಜಿಲಾಬಿ,ಮಾದಲಿ, ತುಪ್ಪ, ಹಾಲು, ಮೊಸರು, ಕೆಂಪು ಚಟ್ನಿ, ರೊಟ್ಟಿ,ಪಲ್ಯ, ಅನ್ನ ಸಾಂಬಾರ್, ಸೊಂಡಗಿ, ಕಡ್ಲಿ ಪುಡಿ, ಸೇರಿದಂತೆ ಬರುವ ಭಕ್ತರಿಗೆ ಪ್ರಸಾದ ವ್ಯವಸ್ಥೆಯನ್ನ ಮಾಡಲಾಗಿತ್ತು. ಪ್ರಸಾದ ಸವಿದ ಭಕ್ತರು ಹಾಗೂ ಸಾಮೂಹಿಕ ವಿವಾಹ ಕಾರ್ಯಕ್ರಮಕ್ಕೆ ಆಗಮಿಸಿದ ಜನರು ಪ್ರಸಾದ ವ್ಯವಸ್ಥೆಯನ್ನ ಮೆಚ್ಚಿ ಕೊಂಡಿದ್ದಾರೆ. ಇನ್ನೂ ಸರಿಸುಮಾರು 8 ಸಾವಿರ ಜನರು ಪ್ರಸಾದ ಸ್ವೀಕರಿಸಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ.**

### ಉಚಿತ ರಕ್ತದಾನ ಶಿಬಿರದ ಜಾಗೃತ

**ಶ್ರೀ ಬೆಟ್ಟದಲಿಂಗೇಶ್ವರ ದೇವಸ್ಥಾನ ಸಮಿತಿ ಸದಸ್ಯರು ಹಾಗೂ ಗ್ರಾಮದ ಎಲ್ಲಾ ಜನರು ಅನ್ನದಾನಕ್ಕಿಂತ ರಕ್ತದಾನ ಶ್ರೇಷ್ಠ ಎಂಬಂತೆ ದೇವಸ್ಥಾನದ ಬಳಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ನೇತೃತ್ವದಲ್ಲಿ ದೇವಸ್ಥಾನದ ಬಳಿ ಸಾರ್ವಜನಿಕರಿಗಾಗಿ ಉಚಿತ ರಕ್ತದಾನ ಶಿಬಿರ ಹಾಗೂ ರಕ್ತದಾನದ ಮಹತ್ವ ತಿಳಿಸುವ ಕಾರ್ಯ ಮಾಡಿದರು.**

# ನಿಲುಗಡೆಯಾಗದ ಬಸ್‌ಗಳು: ವಿದ್ಯಾರ್ಥಿಗಳಿಗೆ ತೊಂದರೆ

• **ಉದಯವಾಹಿನಿ, ಗಜೇಂದ್ರಗಡ**

ಇಳಕಲ್ಲ ರಸ್ತೆಯಲ್ಲಿರುವ ಕುಂಟೋಜಿ, ಮ್ಯಾಕಲಝುರಿ, ಬೆನಕನಾಳ ಗ್ರಾಮಗಳಲ್ಲಿ ಬೆಳಿಗ್ಗೆ ಸಮಯದಲ್ಲಿ ಬಸ್‌ಗಳು ನಿಲುಗಡೆಯಾಗುತ್ತಿಲ್ಲ. ಇದರಿಂದ ಈ ಗ್ರಾಮಗಳಿಂದ ಶಾಲಾ, ಕಾಲೇಜುಗಳಿಗೆ ತೆರಳುವ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿದೆ.

ಕುಂಟೋಜಿ, ಮ್ಯಾಕಲಝುರಿ, ಬೆನಕನಾಳ ಗ್ರಾಮಗಳಿಂದ ನೂರಾರು ವಿದ್ಯಾರ್ಥಿಗಳು ಗಜೇಂದ್ರಗಡ, ನರೇಗಲ್ಲ ಪಟ್ಟಣಗಳ ಶಾಲಾ, ಕಾಲೇಜುಗಳಿಗೆ ಹೋಗುತ್ತಾರೆ.

ಆದರೆ ಈ ಮಾರ್ಗವಾಗಿ ಸಂಚರಿಸುವ ಹಲವು ಬಸ್‌ಗಳು ಇಲ್ಲಿ ನಿಲ್ಲದೇ ನೇರ ಹೋಗುತ್ತವೆ.

ಇಲ್ಲದಿದ್ದರೆ ರಸ್ತೆ ತಡೆದು ಪ್ರತಿಭಟನೆ ಮಾಡಬೇಕಾಗುತ್ತದೆ ಎಂದು ಮ್ಯಾಕಲಝುರಿ ಗ್ರಾಮದ ವಿದ್ಯಾರ್ಥಿಗಳಾದ ಭೀಮಪ್ಪ ಗೆಜ್ಜಿ ಮಂಜುನಾಥ ವರಗರ ಒತ್ತಾಯಿಸಿದರು.



ಉದಯವಾಹಿನಿ ಚಿತ್ರ

**ಬಸ್‌ಗಳು ನಿಲುಗಡೆಯಾಗುವಂತೆ ಕ್ರಮ ವಹಿಸಬೇಕು**


**ಇಳಕಲ್ಲ ಘಟಕದ ಇಳಕಲ್ಲ-ಹುಬ್ಬಳ್ಳಿ (7.50ಕ್ಕೆ), ಇಳಕಲ್ಲ-ಗಜೇಂದ್ರಗಡ (8.15ಕ್ಕೆ) ಹಾಗೂ ಗಜೇಂದ್ರಗಡ ಘಟಕದ ಗದಗ-ಇಳಕಲ್ಲ (8.30ಕ್ಕೆ), ಮುಂಡರಗಿ-ಮುದ್ದೇಬಿಹಾಳ (8:45ಕ್ಕೆ) ಸಂಚರಿಸುವ ಬಸ್‌ಗಳು ಮ್ಯಾಕಲಝುರಿ ಗ್ರಾಮದಲ್ಲಿ ನಿಲುಗಡೆಯಾಗುತ್ತಿಲ್ಲ. ಇದರಿಂದ ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ತರಗತಿಗಳಿಗೆ ತೆರಳಲು ತೊಂದರೆಯಾಗುತ್ತಿದೆ. ’ಬಸ್‌ಗಳು ನಿಲ್ಲಿಸದ ಕಾರಣ ನಿತ್ಯ ಕಾಲೇಜಿಗೆ ತಡವಾಗಿ ಹೋಗುತ್ತಿದ್ದೇವೆ. ಉಪನ್ಯಾಸಕರಿಂದ ನಿತ್ಯ ಬೈಯಿಸಿಕೊಳ್ಳಬೇಕಾಗಿದೆ. ಸಂಬಂಧಪಟ್ಟವರು ಬೆಳಿಗ್ಗೆ ಗ್ರಾಮದ ಮೂಲಕ ಸಂಚರಿಸುವ ಬಸ್‌ಗಳು ನಿಲುಗಡೆಯಾಗುವಂತೆ ಕ್ರಮವಹಿಸಬೇಕು.**

# ಸತೀಶ ಜಾರಕಿಹೊಳಿ ನಿಂದಿಸಿದ ಯುವಕನ ಬಂಧಿಸಲು ಆಗ್ರಹ

• **ಉದಯವಾಹಿನಿ, ಸುರಪುರ**

ಲೋಕೋಪಯೋಗಿ ಇಲಾಖೆಯ ಸಚಿವ ಸತೀಶ ಜಾರಕಿಹೊಳಿ ಅವರನ್ನು ನಿಂದಿಸಿ ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟ ತುಮಕೂರು ಜಿಲ್ಲೆಯ ಮೊಹಿತ ನರಸಿಂಹಮೂರ್ತಿ ಎಂಬ ಯವಕನನ್ನು ಬಂಧಿಸಿ ಗಡಿ ಪಾರುಮಾಡಬೇಕು ಎಂದು ಒತ್ತಾಯಿಸಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ನಾಗವಾರ ಬಣ ಮತ್ತು ಸತೀಶ ಜಾರಕಿಹೊಳಿ ಅಭಿಮಾನಗಳ ಬಳಗ ಸೋಮವಾರ ಕಂದಾಯ ಇಲಾಖೆ ಶಿರಸ್ತೆದಾರ ಶಂಕರಾನಂದ ಅವರಿಗೆ ಮನವಿ ಸಲ್ಲಿಸಿದರು.

ಜಾರಕಿಹೊಳಿ ಅಭಿಮಾನಿಗಳ ಬಳಗದ ಅಧ್ಯಕ್ಷ ಸಾಹೇಬಗೌಡ ಪಾಟೀಲ ಮಾತನಾಡಿ, ತುಮಕೂರ ಮೂಲದ ಮೋಹಿತ ನರಸಿಂಹಮೂರ್ತಿ ಎಂಬ ಯುವಕ ಸಚಿವ ಸತೀಶ ಜಾರಕಿಹೊಳಿ ಅವರ ಬಗ್ಗೆ ಅವಹೇಳನಕಾರಿಯಾಗಿ ಮಾತನಾಡಿದ್ದಲ್ಲದೇ ಅವಾಚ್ಯ ಶಬ್ದಗಳಿಂದ ನಿಂದಿಸಿ ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟಿದ್ದು, ಸತೀಶ್ ಜಾರಕಿಹೊಳಿ ಅವರ ಲಕ್ಷಾಂತರ ಅಭಿಮಾನಿಗಳ ಮನಸ್ಸಿಗೆ ನೋವುಂಟು ಮಾಡಿದ್ದಾನೆ’ ಎಂದು ಆರೋಪಿಸಿದರು. ಜಿಲ್ಲಾ ಸಮಿತಿ ಸಂಚಾಲಕ ಮಲ್ಲಿಕಾರ್ಜುನ ವಾಗಣಗೇರಾ ಮಾತನಾಡಿ, ಮುಖ್ಯಮಂತ್ರಿ ಮತ್ತು ಇತರೆ ಸಚಿವರ ಬಗ್ಗೆಯೂ ಅವ ಹೇಳನಕಾರಿಯಾಗಿ ಮಾತನಾಡಿದ್ದು ಅಭಿಮಾನಿಗಳ ಮನಸ್ಸಿಗೆ ನೋವಾಗಿದೆ. ಕೂಡಲೇ ಯುವಕನನ್ನು ಬಂಧಿಸಿ ಆತನ ವಿರುದ್ಧ ಪ್ರಕರಣ ದಾಖಲಿಸಿ ಗಡಿ ಪಾರು ಮಾಡಬೇಕು’ ಎಂದು ಒತ್ತಾಯಿಸಿದರು. ತಾಲ್ಲೂಕು ಸಮಿತಿ ಸಂಚಾಲಕ ಮಾನಪ್ಪ ಶೆಳ್ಳಗಿ, ಪ್ರಮುಖರಾದ ಅಪ್ಪಣ್ಣ ಗಾಯಕವಾಡ, ಹಣಮಂತ ಭದ್ರಾವತಿ, ಬಸವರಾಜ ಮಂಗಳೂರು, ರವಿನಾಯಕ ಬಾಡಗೇರಾ, ಶರಣಪ್ಪ ವಾಗನಗೇರಾ, ಮರೆಪ್ಪ ಕಟ್ಟಿಮನಿ, ರವಿ ನಾಯಕ, ಶರಣು ಕೋಗಿಲೆ, ಬಸವರಾಜ ಶಖಾಪುರ ಭಾಗವಹಿಸಿದ್ದರು.



ಉದಯವಾಹಿನಿ ಚಿತ್ರ

# ಸಮಾಜ ಕಟ್ಟುವಲ್ಲಿ ವಕೀಲರ ಪಾತ್ರ ಬಹಳ ಮುಖ್ಯ : ರಾಠೋಡ್

• **ಉದಯವಾಹಿನಿ,ಚಿಂಚೋಳಿ**

ವಕೀಲರು ತಮ್ಮ ವೃತ್ತಿಯ ಜೋತೆ ಸಮಾಜ ಕಟ್ಟುವಲ್ಲಿ ಪ್ರಮುಖ ಪಾತ್ರವಿದ್ದು ಸಮಾಜದ ಅಂಕುಡೊಂಕು ತಿದ್ದುವ ಕೆಲಸ ಮಾಡಬೇಕು ಎಂದು ನಿವೃತ್ತ ನ್ಯಾಯಾಧೀಶ ಸುಭಾಷ್ಚಂದ್ರ ರಾಠೋಡ್ ಸಲಹೆ ನೀಡಿದರು. ಪಟ್ಟಣದ ನ್ಯಾಯಾಲಯ ಆವರಣದಲ್ಲಿ ನ್ಯಾಯಾವಾದಿಗಳ ಸಂಘದಿಂದ ಹಮ್ಮಿಕೊಂಡ ವಕೀಲರ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು,ಸಮಾಜದಲ್ಲಿ ಭ್ರಷ್ಟಾಚಾರ ತಾಂಡಾವಾಡುತ್ತಿದೆ, ಪ್ರತಿಯೊಂದು ಇಲಾಖೆಗಳಲ್ಲಿ ಅನ್ಯಾಯ ಮೀತಿಮಿರುತ್ತಿದೆ,ಅನೇಕ ಕೊಲೆ,ಸುಲಿಗೆ ನಡೆಯುತ್ತಿವೆ ಆದರೆ ನಾವು ವಕೀಲರು ಸಮಾಜ ಪರಿವರ್ತನೆ ಮಾಡುವವರು ನಮಗೆ ಸಂಬಂಧವೆ ಇಲ್ಲಾವೆಂದು ಕುಳಿತುಕೊಳ್ಳುವುದು ನಮ್ಮೆಲ್ಲರ ತಪ್ಪು ನಾವು ಅದನ್ನು ಪ್ರೇಶ್ರೇಸಿ ಬದಲಾವಣೆ ತರುವ ನಿಟ್ಟಿನಲ್ಲಿ ಕೆಲಸ ಮಾಡಬೇಕಾಗಿದೆ.

ನೊಂದವರಿಗೆ ನ್ಯಾಯ ದೊರಕಿಸಿಕೊಡಬೇಕು, ಕಕ್ಷಿದಾರರಿಗೆ ನ್ಯಾಯಾಲಯದಲ್ಲಿ ನ್ಯಾಯ ಸಿಗದಿದ್ದರೆ ನಾವು ಇದ್ದರೂ ಅಷ್ಟೆ ಸತ್ತರು ಅಷ್ಟೆ,ನ್ಯೋಯಾಯುತವಾಗಿ ಕಾನೂನಾತ್ಮಕವಾಗಿ ನಾವು ನ್ಯಾಯ ದೊರಕಿಸಿಕೊಡಬೇಕು.

ಸಮಾಜ ವಕೀಲರಿಗೆ ಹೆದರಲ್ಲ ಅವರ ಬುದ್ಧಿವಂತಿಕೆಗೆ ಹೆದರುತ್ತಾರೆ, ವಕೀಲರು ಪ್ರಕರಣದ ಪರಿಪೂರ್ಣವಾಗಿ ಅಧ್ಯಯನ ಮಾಡಿ ಕಕ್ಷಿದಾರರಿಗೆ ನ್ಯಾಯ ದೊರಕಿಸಿಕೊಡಬೇಕು,ವಕೀಲರು ಕಕ್ಷಿದಾರರಿಗೆ ಮರ್ಯಾದೆ ಗೌರವದಿಂದ ಕಾಣಬೇಕು ನೊಂದವರಿಗೆ ಧ್ವನಿಯಾಗಿ ನ್ಯಾಯ ದೊರಕಿಸಿಕೊಡಬೇಕು.

ವಕೀಲರಿಗೆ ಮತ್ತು ನ್ಯಾಯಾಧೀಶರಿಗೂ ಇಬ್ಬರಿಗೂ ಸಂವಿಧಾನ ಕಾನೂನು ಗೋತ್ತಿರಬೇಕು ಇಲ್ಲದಿದ್ದರೆ ನೊಂದವರಿಗೆ ಕಕ್ಷಿದಾರನಿಗೆ ಕಷ್ಟವಾಗದಲ್ಲದೆ ಶಿಕ್ಷೆಗೆ ಒಳಗಾಗುತ್ತಾನೆ,ಸಮಾಜದಲ್ಲಿ ನಿರಪರಾಧಿಗೆ ಶಿಕ್ಷೆ ಆಗದಂತೆ ನೋಡಿಕೊಳ್ಳುವ ಜವಾಬ್ದಾರಿ ವಕೀಲ ವೃತ್ತಿಗಿದೆ. ಮನೆ ಕಟ್ಟಲು ಇಂಜಿನಿಯರಿಂಗ್ ಇದ್ದರೆ ಸಮಾಜ ಕಟ್ಟುವಲ್ಲಿ ವಕೀಲರ ಪ್ರಮುಖ ಪಾತ್ರ ವಾಗಿದೆ ಎಂದರು.

ವಕೀಲರ ಸಂಘದ ಅಧ್ಯಕ್ಷ ಶ್ರೀಮಂತ ಕಟ್ಟಿಮನಿ ಮಾತನಾಡಿ ಪ್ರತಿಯೊಂದು ಹಂತದಲ್ಲೂ ವಕೀಲರ ಪಾತ್ರ ಪ್ರಮುಖವಾಗಿದೆ,ವಕೀಲ ವೃತ್ತಿ ಬಹಳಷ್ಟು ಜವಾಬ್ದಾರಿಯುತವಾಗಿದೆ. ವಕೀಲರು ಮನಸ್ಸು ಮಾಡಿದರೆ ಸಮಾಜದಲ್ಲಿ ಬದಲಾವಣೆ ಮಾಡ ಬಹುದು, ಕ್ರಾಂತಿಯೇ ಮಾಡಬಹುದು, ವಕೀಲರು ಸಿಸ್ತು,ಸಂಯಮ ಕಾಪಾಡಿಕೊಳ್ಳಬೇಕು ಎಂದರು. ಹಿರಿಯ ಶ್ರೇಣಿ ನ್ಯಾಯಾಧೀಶೆ ಜ್ಯೋತಿ ಶಾಂ ತಪ್ಪ ಕಾಳೆಯವರು ಕಾರ್ಯಕ್ರಮ ಉಧ್ಘಾಟಿಸಿ ಮಾತನಾಡಿದರು,ಪ್ರಧಾನ್ ಸಿವಿಲ್ ನ್ಯಾಯಾಧೀಶ ದತ್ತುಕುಮಾರ ಜವಳಕರ್ ಮಾತನಾಡಿದರು.

ವಕೀಲರ ಸಂಘದ ಉಪಾಧ್ಯಕ್ಷ ಜಗನ್ನಾಥ ಗಂಜಗಿರಿ ಸ್ವಾಗತಿಸಿದರು,ಶೇಖ್ ಭಕ್ತಿಯಾರ್ ಜಾಗೀರದಾರ ನಿರೂಪಿಸಿದರು,ವಿಶ್ವನಾಥ ಬೆನಕಿನ್ ವಂದಿಸಿದರು. ಈ ಸಂದರ್ಭದಲ್ಲಿ ಪುರಸಭೆ ಸಿಇಓ ಕಾಶಿನಾಥ ಧನ್ನಿ, ಪಿಎಸ್‌ಐ ಗಂಗಮ್ಮ, ಮಲ್ಲಿಕಾರ್ಜುನ ಸುಕುಂದ, ಸುದರ್ಶನ್ ಬೀರಾದಾರ, ಮಾಣಿಕರಾವ ಗುಲಗುಂಜಿ, ರವಿಕುಮಾರ ಹೂವಿನಭಾವಿ, ಸುದರ್ಶನ್ ಬೀರಾದಾರ, ಶರಣರೆಡ್ಡಿ ಪೋಂಗಾ, ವಿಜಯಕುಮಾರ ರಾಠೋಡ್, ದೇವೀಂದ್ರಪ್ಪಾ ಜಾಬೀನ್, ಸಿದ್ದು ಸಾತನೂರ, ಸವಿತಾ, ಶೋಭಾರಾಣಿ, ನಾಗವೇಣಿ, ಚಂದ್ರಶೇಟ್ಟಿ ಜಾಧವ, ಕೆಡಿ ಪವ್ಹಾರ, ಸಂಜೀವಕುಮಾರ ಮೇತ್ರಿ, ಜಿ.ಕೆ. ಗೋಖಲೆ, ಪ್ರವೀಣಕುಮಾರ, ಸುದರ್ಶನ್ ಸಂತಾಳ, ಎಂ.ಎ.ಖದೀರ್, ಡಿಕೆ ಚವ್ಹಾಣ, ಸೂರ್ಯಕಾಂತ, ಸುರೇಶ, ಅನೇಕ ವಕೀಲರು, ನ್ಯಾಯಾಲಯದ ಸಿಬ್ಬಂದಿಗಳಿದ್ದರು.







ಉದಯವಾಹಿನಿ ಚಿತ್ರ

### ವಕೀಲ ರತ್ನ ಪ್ರಶಸ್ತಿ ಪ್ರದಾನ

**ನ್ಯಾಯಾವಾದಿಗಳ ಸಂಘದಿಂದ ವಕೀಲರ ದಿನಾಚರಣೆ ಅಂಗವಾಗಿ ನ್ಯಾಯಾಲಯದಲ್ಲಿ ಅತ್ಯುತ್ತಮ ಸೇವೆಗೈದ ವಕೀಲರಾದ 1) ಸುಭಾಷ್ ಕಳಸ್ಕರ,2)ಮಾಣಿಕರಾವ ಗುಲಗುಂಜಿ,3)ಮಲ್ಲಿಕಾರ್ಜುನ ಸುಕಂದ,4)ಸವಿತಾ ಮಹೇಂದ್ರಕರ್,5) ಎಂ.ಎ.ಖದೀರ್ ಐದು ಜನ ವಕೀಲರಿಗೆ ವಕೀಲ ರತ್ನ ಪ್ರಶಸ್ತಿ ಪ್ರದಾನ ಮಾಡಿ ಸನ್ಮಾನಿಸಿ ಗೌರವಿಸಲಾಯಿತು.**

# ಮೆಕ್ಕೆಜೋಳ ಬೆಳೆಗೆ ಕಾಡು ಹಂದಿಗಳ ಕಾಟ

• **ಉದಯವಾಹಿನಿ, ತಾವರಗೇರಾ**

ಪಟ್ಟಣದಿಂದ ಗಂಗಾವತಿಗೆ ತೆರಳುವ ರಸ್ತೆ ಪಕ್ಕದಲ್ಲಿರುವ ವೆಂಕಟಸಿಂಗ್ ಆನೇರಿ ಮತ್ತು ಹನಮಂತಸಿಂಗ್ ನಜಭಾವಿ ಅವರು ಬೆಳೆದ ಮೆಕ್ಕೆಜೋಳಕ್ಕೆ ಕಾಡು ಹಂದಿಗಳ ಕಾಟ ಹೆಚ್ಚಾಗಿದೆ. ನಿತ್ಯ ರಾತ್ರಿ ವೇಳೆ ಹೊಲಕ್ಕೆ ನುಗ್ಗುವ ಹಂದಿಗಳು ಬೆಳೆಯನ್ನು ಹಾಳು ಮಾಡಿ, ತೆನೆಗಳನ್ನು ತಿನ್ನುತ್ತಿವೆ. ಹೀಗಾಗಿ ರೈತರು ರಾತ್ರಿ ಪೂರ್ತಿ ಹೊಲವನ್ನು ಕಾಯಬೇಕಾದ ಪರಿಸ್ಥಿತಿ ಎದುರಾಗಿದೆ.

ಮುಖ್ಯ ರಸ್ತೆಗೆ ಹೊಂದಿಕೊಂಡಿರುವ ವೆಂಕಟಸಿಂಗ್ 2 ಎಕರೆ ಮತ್ತು ಹನಮಂತಸಿಂಗ್ 4 ಎಕರೆಯಲ್ಲಿ ಮೆಕ್ಕೆಜೋಳ ಬೆಳೆದಿದ್ದು, ಉತ್ತಮ ಫಸಲಿನ ನಿರೀಕ್ಷೆಯಲ್ಲಿದ್ದಾರೆ. ಆದರೆ ಕಾಡು ಹಂದಿಗಳ ಕಾಟದಿಂದಾಗಿ ಬೆಳೆ ಹಾಳಾಗುತ್ತಿದೆ. ’ಕಾಡು ಹಂದಿಗಳು, ಹೊಲದಲ್ಲಿ ಓಡಾಡುವುದರಿಂದ ಬೆಳೆಯು ನೆಲಕ್ಕುರುಳಿ ಹಾಳಾಗಿದೆ. ಅರಣ್ಯ ಇಲಾಖೆ ಅಧಿಕಾರಿಗಳು ಮಾಹಿತಿ ಪಡೆದುಕೊಂಡಿದ್ದಾರೆ. ಕಾಡು ಪ್ರಾಣಿಯಿಂದಾಗಿ ಬೆಳೆ ಹಾನಿಯಾಗಿದ್ದು, ನಮ್ಮ ಅನುಭವಿಸಿದ ರೈತರ ಕುಟುಂಬಕ್ಕೆ ಪರಿಹಾರ ನೀಡಲು ಸರ್ಕಾರ ಮತ್ತು ಅರಣ್ಯ ಇಲಾಖೆ ಕ್ರಮಕೊಳ್ಳಲಿದೆ. ಜತೆಗೆ ಅರಣ್ಯ ಇಲಾಖೆಯವರು ಬೆಳೆ ರಕ್ಷಣೆಗೆ ಸಹಕಾರ ನೀಡುವ ಭರವಸೆ ನೀಡಿದ್ದಾರೆ’ ಎಂದು ರೈತ ಹನುಮಂತಸಿಂಗ್ ಹೇಳಿದರು.



ಉದಯವಾಹಿನಿ ಚಿತ್ರ

ನಿತ್ಯ ಕಾಡು ಹಂದಿಗಳ ಹಾವಳಿಯಿಂದಾಗಿ, ಕೈಗೆ ಬಂದ ತುತ್ತು ಬಾಯಿಗೆ ಬರದಂತಾಗಿದೆ’ ಎಂದು ರೈತ ವೆಂಕಟಸಿಂಗ್ ಆನೇರಿ ಅಳಲು ತೋಡಿಕೊಂಡರು. ಕುಷ್ಟಗಿ ಉಪವಲಯ ಅರಣ್ಯಾಧಿಕಾರಿ ಆದೇಶ ಮಾತನಾಡಿ, ತಾವರಗೇರಾ ರೈತರ ಜಮೀನಿನ ಮೆಕ್ಕೆಜೋಳದ ಬೆಳೆಯನ್ನು ಕಾಡು ಪ್ರಾಣಿಗಳು ಬೆಳೆ ನಾಶ ಮಾಡಿರುವ ಬಗ್ಗೆ ಮಾಹಿತಿ ಬಂದಿದೆ. ಆದರೆ ಸ್ಥಳಕ್ಕೆ ಇಲಾಖೆಯ ತಂಡವು ಸ್ಥಳ ಪರಿಶೀಲನೆ ಮಾಡಲಿದೆ. ನಂತರ ರೈತರ ಜಮೀನಿನಲ್ಲಿ ಕಾಡು ಪ್ರಾಣಿಯಿಂದ ಹಾನಿಯಾದ ಬೆಳೆ ಪರಿಹಾರಕ್ಕೆ ಪ್ರತ್ಯೇಕ ಅನುದಾನ ಇದ್ದು, ಅಗತ್ಯ ದಾಖಲಾತಿ ಪಡೆದು ಪರಿಹಾರಕ್ಕೆ ಕ್ರಮಕೈಗೊಳ್ಳಲು ಮೇಲಧಿಕಾರಿಗಳಿಗೆ ವರದಿ ನೀಡಲಾಗುವುದು ಎಂದು ಹೇಳಿದರು.

# ಮೊಟ್ಟೆ ದರ ಹೆಚ್ಚಳ; ಒತ್ತಡದಲ್ಲಿ ಶಿಕ್ಷಕರು

• **ಉದಯವಾಹಿನಿ, ಗದಗ**

ಮೊಟ್ಟೆ ದರ ಏರಿಕೆ ಆಗಿರುವುದರಿಂದ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ನಿತ್ಯ ಮೊಟ್ಟೆ ವಿತರಣೆ ಕಷ್ಟವಾಗುತ್ತಿದೆ. ಸರ್ಕಾರ ಮೊಟ್ಟೆಗೆ ನೀಡುತ್ತಿರುವ ಹಣ ಸಾಕಾಗುತ್ತಿಲ್ಲ, ದರ ಹೆಚ್ಚಿಸಲು ಮನವಿ ಸಲ್ಲಿಸಬೇಕು ಎಂದು ಶಾಲಾ ಶಿಕ್ಷಕರು ಅಕ್ಷರ ದಾಸೋಹ ಅಧಿಕಾರಿಗಳ ಮುಂದೆ ಅಲವತ್ತುಕೊಂಡಿದ್ದಾರೆ. ಗದಗ ಜಿಲ್ಲೆಯಲ್ಲಿ 1ರಿಂದ 10ನೇ ತರಗತಿ ವರೆಗೆ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ 1,27,619 ಮಂದಿ ವಿದ್ಯಾರ್ಥಿಗಳು ಅಭ್ಯಾಸ ಮಾಡುತ್ತಿದ್ದಾರೆ. ಅದರಲ್ಲಿ ಪ್ರತಿನಿತ್ಯ ಶೇ 95ರಷ್ಟು ಹಾಜರಾತಿ ಇರುತ್ತದೆ. ಈ ಪೈಕಿ ಶೇ 85ರಷ್ಟು ವಿದ್ಯಾರ್ಥಿಗಳು ಮೊಟ್ಟೆ ಆಯ್ಕೆ ಮಾಡಿಕೊಂಡಿದ್ದಾರೆ. ಉಳಿದ ಮಕ್ಕಳು ಬಾಳೆಹಣ್ಣು ಮತ್ತು ಶೇಂಗಾ ಚಿಕ್ಕಿ ತಿನ್ನುತ್ತಾರೆ ಎಂದು ಜಿಲ್ಲಾ ಅಕ್ಷರ ದಾಸೋಹ ಇಲಾಖೆ ಜಿಲ್ಲಾ ಅಧಿಕಾರಿ ಸರಸ್ವತಿ ಕನವಳ್ಳಿ ತಿಳಿಸಿದ್ದಾರೆ.

ಸರ್ಕಾರ ಒಂದು ಮೊಟ್ಟೆಗೆ 6 ಅನುದಾನ ಕೊಡುತ್ತದೆ. ಇದರಲ್ಲಿ ವಿಂಗಡಣೆ ಇದ್ದು, ಮೊಟ್ಟೆ ಖರೀದಿಗೆ 5, ಮೊಟ್ಟೆ ಬೇಯಿಸಲು 50 ಪೈಸೆ, ಮೊಟ್ಟೆ ಬಿಡಿಸಲು 30 ಪೈಸೆ ಹಾಗೂ ಸಾಗಣೆ ವೆಚ್ಚ 20 ಪೈಸೆ ಇರುತ್ತದೆ. ಪ್ರಸ್ತುತ ಮೊಟ್ಟೆ ದರ ಹೆಚ್ಚಾಗಿರುವುದರಿಂದ ದರ ಹೆಚ್ಚಿಸುವಂತೆ ಶಿಕ್ಷಕರು ಕೋರಿದ್ದಾರೆ. ಶಿಕ್ಷಕರ ಬೇಡಿಕೆ ಮತ್ತು ಸಮಸ್ಯೆಗಳನ್ನು ಇಲಾಖೆಯ ಉನ್ನತ ಅಧಿಕಾರಿಗಳ ಗನಮಕ್ಕೆ ತರಲಾಗಿದೆ. ದರ ಹೆಚ್ಚಾದರೂ ಮೊಟ್ಟೆ ವಿತರಣೆ ಮಾಡುವುದು ನಿಂತಿಲ್ಲ.

ಮೊಟ್ಟೆ ದರ 6ರಿಂದ 7 ಇರುವಾಗ ಬಡ, ಮಧ್ಯಮವರ್ಗದ ಕುಟುಂಬದ ಪೋಷಕರು ತಮ್ಮ ಮಕ್ಕಳಿಗೆ ವಾರದಲ್ಲಿ ಆರು ದಿನ ಮಕ್ಕಳಿಗೆ ಮೊಟ್ಟೆ ಒದಗಿಸಲು ಸಾಧ್ಯವೇ ಇಲ್ಲ. ಶಾಲಾ ಮಕ್ಕಳಿಗೆ ಮೊಟ್ಟೆ ವಿತರಣೆ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆ. ಮಕ್ಕಳ ಪೌಷ್ಟಿಕತೆ ದೃಷ್ಟಿಯಿಂದಲೂ ಉತ್ತಮವಾಗಿದೆ. ಆದರೆ, ಈಗ ಬೆಲೆ ಏರಿಕೆ ಆಗಿರುವುದರಿಂದ ಸಮಸ್ಯೆ ಆಗುತ್ತಿದೆ. ಇದನ್ನು ಬಗೆಹರಿಸುವ ನಿಟ್ಟಿನಲ್ಲಿ ಸರ್ಕಾರ ಕ್ರಮವಹಿಸಬೇಕು’ ಎಂದು ಖರೀದಿ ಸಮಿತಿಯಲ್ಲಿರುವ ಪೋಷಕರು ಆಗ್ರಹಿಸಿದ್ದಾರೆ.ಸರಸ್ವತಿ ಕನವಳ್ಳಿ ಜಿಲ್ಲಾ ಅಕ್ಷರ ದಾಸೋಹ ಅಧಿಕಾರಿಮೊಟ್ಟೆ ದರ ಏರಿಕೆಯಿಂದ ಆಗುತ್ತಿರುವ ಸಮಸ್ಯೆಗಳ ಕುರಿತು ಉನ್ನತ ಮಟ್ಟದ ಅಧಿಕಾರಿಗಳ ಗಮನಕ್ಕೆ ತರಲಾಗಿದೆ. ದರ ಹೆಚ್ಚಾಗಿದ್ದರೂ ಆರು ದಿನ ಮೊಟ್ಟೆ ವಿತರಣೆಗೆ ಕ್ರಮವಹಿಸಲಾಗಿದೆ.



ಉದಯವಾಹಿನಿ ಚಿತ್ರ

**‘ಸದ್ಯದವರೆಗೆ ಶಿಕ್ಷಕರೇ ಹೊಂದಾಣಿಕೆ ಮಾಡಿಕೊಂಡು ಹೋಗುತ್ತಿದ್ದಾರೆ’ ಎಂದು ಅವರು ತಿಳಿಸಿದ್ದಾರೆ.ಈ ಹಿಂದೆ ಸರ್ಕಾರ ವಾರಕ್ಕೆ ಎರಡು ದಿನ ಮಕ್ಕಳಿಗೆ ಮೊಟ್ಟೆ ವಿತರಿಸುತ್ತಿತ್ತು. ಅಜೀಂ ಪ್ರೇಮ್ ಜೀ ಪ್ರತಿಷ್ಠಾನದವರು ಕೈಜೋಡಿಸಿದ ನಂತರ ಸರ್ಕಾರಿ, ಅನುದಾನಿತ ಶಾಲಾ ಮಕ್ಕಳಿಗೆ ವಾರಕ್ಕೆ ಆರು ದಿನ ಮೊಟ್ಟೆ ವಿತರಣೆ ಮಾಡಲಾಗುತ್ತಿದೆ. ಖರೀದಿ ಸಮಿತಿಯಲ್ಲಿ ಎಸ್‌ಡಿಎಂಸಿ ಅಧ್ಯಕ್ಷರು, ಪೋಷಕರು ಇರುತ್ತಾರೆ. ಸಣ್ಣಪುಟ್ಟ ಸಮಸ್ಯೆಗಳನ್ನು ಬಗೆಹರಿಸಿಕೊಂಡು ಯೋಜನ ಅನುಷ್ಠಾನಗೊಳಿಸುತ್ತಿರುವುದಾಗಿ ಶಿಕ್ಷಕರು ತಿಳಿಸಿದ್ದಾರೆ.**

# ಬಾಲಕಿಯರ ಶಾಲೆ; ಕುಡಿಯುವ ನೀರಿಗೆ ಪರದಾಟ

## ಟ್ಯಾಂಕರ್ ಮೂಲಕ ನೀರು ತರಿಸಿಕೊಳ್ಳುತ್ತಿದ್ದರೂ ಅದು ಸಾಕಾಗುತ್ತಿಲ್ಲ, ಇಲಾಖೆ ಅಧಿಕಾರಿಗಳು ಸಹ ತಿರುಗಿ ನೋಡುತ್ತಿಲ್ಲ

• **ಉದಯವಾಹಿನಿ, ಮೊಳಕಾಲ್ಮುರು**

ಗ್ರಾಮೀಣ ಭಾಗದ ಹೆಣ್ಣುಮಕ್ಕಳನ್ನು ಮುಖ್ಯವಾಹಿನಿಗೆ ತರುವ ಉದ್ದೇಶದಿಂದ ಕೇಂದ್ರ- ರಾಜ್ಯ ಸರ್ಕಾರಗಳು ಸಂಯುಕ್ತವಾಗಿ ಆರಂಭಿಸಿರುವ, ತಾಲ್ಲೂಕಿನ ಕೊಂಡ್ಲಹಳ್ಳಿಯಲ್ಲಿರುವ ಕಸ್ತೂರಾ ಬಾ ಬಾಲಿಕಾ ವಸತಿ ಶಾಲೆ ಅವ್ಯವಸ್ಥೆಗಳ ಆಗರವಾಗಿದೆ. ಇದರಿಂದ ವಿದ್ಯಾರ್ಥಿನಿಯರು ಪರದಾಡುವಂತಾಗಿದೆ. ಹೆಣ್ಣುಮಕ್ಕಳಿಗೆ ಶಾಲೆಯಲ್ಲಿ ಪ್ರಮುಖವಾಗಿ ಕುಡಿಯುವ ನೀರಿನ ಸಮಸ್ಯೆ ಎದುರಾಗಿದೆ.

ಗ್ರಾಮ ಪಂಚಾಯಿತಿ ಕಚೇರಿಯಿಂದ ಕೇವಲ 100 ಅಡಿ ದೂರದಲ್ಲಿರುವ ಈ ಶಾಲೆಗೆ ಕಳೆದೆರಡು ತಿಂಗಳುಗಳಿಂದ ಸರಿಯಾಗಿ ನೀರು ಸರಬರಾಜು ಆಗಿಲ್ಲ. ವಿದ್ಯಾರ್ಥಿನಿಯರೇ ಬಿಂದಿಗೆಯಿಂದ ನೀರು ಹೊತ್ತು ತಂದು ಹಾಕಿಕೊಳ್ಳಬೇಕಿದೆ.



ಉದಯವಾಹಿನಿ ಚಿತ್ರ

**ಬಟ್ಟೆ ಒಗೆಯಲು ನೀರಿಲ್ಲದೇ ಪರದಾಟ**

ಸಮೀಪದ ಸರ್ಕಾರಿ ಶಾಲೆ ಆವರಣದಲ್ಲಿರುವ ನೀರಿನ ತೊಟ್ಟಿ ಬಳಿ ಬಟ್ಟೆ ತೊಳೆದುಕೊಳ್ಳಬೇಕಾದ ಸ್ಥಿತಿ ನಿರ್ಮಾಣವಾಗಿದೆ. ತೊಟ್ಟಿಯ ಬಳಿ ಬರಬೇಡಿ ಎಂದು ಸರ್ಕಾರಿ ಶಾಲೆಯವರು ವಿದ್ಯಾರ್ಥಿನಿಯರಿಗೆ ಸೂಚಿಸಿದ್ದಾರೆ. ಹೀಗಾಗಿ ತಟ್ಟೆ ತೊಳೆದುಕೊಳ್ಳಲು, ಬಟ್ಟೆ ಒಗೆಯಲು ನೀರಿಲ್ಲದೇ ಪರದಾಡುತ್ತಿದ್ದಾರೆ. ಸರ್ವಶಿಕ್ಷ ಅಭಿಯಾನದಡಿ ನಡೆಯುತ್ತಿರುವ ಈ ಶಾಲೆಯಲ್ಲಿ ಜಿಲ್ಲೆಯ ಬೇರೆ, ಬೇರೆ ತಾಲ್ಲೂಕುಗಳ 80 ವಿದ್ಯಾರ್ಥಿನಿಯರು ಇದ್ದಾರೆ. ಕುಡಿಯುವ ನೀರಿನ ದೊಡ್ಡ ಸಮಸ್ಯೆಯಾಗಿದ್ದು, ವಿದ್ಯಾರ್ಥಿನಿಯರು ಪರಿತಪಿಸುವಂತಾಗಿದೆ.

ಶಾಲೆಗೆ ಸ್ವಂತ ಕಟ್ಟಡ ಇಲ್ಲದ ಕಾರಣ ಬಾಡಿಗೆ ಕಟ್ಟಡದಲ್ಲಿ ವಿದ್ಯಾರ್ಥಿ ನಿಲಯ ನಡೆಯುತ್ತಿದೆ. ಸ್ವಂತ ಕಟ್ಟಡ ನಿರ್ಮಾಣಕ್ಕೆ ಇಸ್ಲಾಂಪುರ ಬಳಿ 9 ಎಕರೆ ಜಾಗ ನೀಡಲಾಗಿದೆ. 1.68 ಕೋಟಿ ಅನುದಾನ ಸಹ ಮಂಜೂರಾಗಿದೆ. 4 ವರ್ಷವಾದರೂ ಕಾಮಗಾರಿ ಆರಂಭವಾಗಿಲ್ಲ. ತಾಂತ್ರಿಕ ಕಾರಣದಿಂದಾಗಿ ಪರಶುರಾಂಪುರ, ಗದಗ, ಕೊಂಡ್ಲಹಳ್ಳಿ ಕಟ್ಟಡ ನಿರ್ಮಾಣ ನನೆಗುದಿಗೆ ಬಿದ್ದಿದೆ ಎಂದು ಅಧಿಕಾರಿಗಳು ಹೇಳುತ್ತಾರೆ. ಶಾಲೆಯಲ್ಲಿ 6 ರಿಂದ 10ನೇ ತರಗತಿವರೆಗೆ ಶಿಕ್ಷಣ ನೀಡಲಾಗುತ್ತಿದೆ. ಹದಿಹರೆಯದ ಹೆಣ್ಣು ಮಕ್ಕಳು ಸ್ನಾನ ಮಾಡಲು, ಶೌಚಾಲಯಕ್ಕೂ ನೀರಿನ ಕೊರತೆ ಇದೆ.

ಟ್ಯಾಂಕರ್ ಮೂಲಕ ನೀರು ತರಿಸಿಕೊಳ್ಳುತ್ತಿದ್ದರೂ ಅದು ಸಾಕಾಗುತ್ತಿಲ್ಲ. ಸಮಸ್ಯೆ ಬಗ್ಗೆ ಗ್ರಾಮ ಪಂಚಾಯಿತಿಗೆ ಮನವರಿಕೆ ಮಾಡಿಕೊಡಲಾಗಿದೆ. ಆದರೂ ಯಾವುದೇ ಕ್ರಮ ಕೈಗೊಂಡಿಲ್ಲ. ಇಲಾಖೆ ಅಧಿಕಾರಿಗಳು ಸಹ ತಿರುಗಿ ನೋಡುತ್ತಿಲ್ಲ. ಇದರಿಂದಾಗಿ ಹೆಣ್ಣು ಮಕ್ಕಳು ಶಾಲೆ ಬಿಡುವ ಹಂತದಲ್ಲಿದ್ದಾರೆ ಎಂದು ಸ್ಥಳೀಯರು ಹೇಳುತ್ತಾರೆ. ಕಟ್ಟಡದ ಮಾಲೀಕರಿಗೆ ಸಮಸ್ಯೆ ಬಗ್ಗೆ ಹೇಳಿದರೆ ನೀರಿನ ವ್ಯವಸ್ಥೆ ಮಾಡಲು ಆಗುವುದಿಲ್ಲ. ಇದ್ದರೆ ಇರಿ ಇಲ್ಲವಾದಲ್ಲಿ ಬೇರೆ ಕಟ್ಟಡಕ್ಕೆ ಸ್ಥಳಾಂತರ ಆಗಿ ಎಂದು ಹೇಳುತ್ತಾರೆ.

ನೀರಿನ ವ್ಯವಸ್ಥೆ ಇಲ್ಲದ ಕಾರಣ ಬಟ್ಟೆ ಒಗೆಯಲು ಹೋಗುತ್ತಿರುವ ವಿದ್ಯಾರ್ಥಿನಿಯರುಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿದೆ ವಸತಿ ಶಾಲೆ ಕುಡಿಯುವ ನೀರು, ಸ್ನಾನ, ಶೌಚಕ್ಕೆ ತೊಂದರೆ ಶಾಲೆ ಬಿಡುತ್ತಿರುವ ವಿದ್ಯಾರ್ಥಿನಿಯರುಯಶವಂತ್ ಪಿಡಿಓನೀರಿನ ಸಮಸ್ಯೆಯ ವಿಚಾರ ಗ್ರಾಮ ಪಂಚಾಯಿತಿ ಗಮನಕ್ಕೆ ಬಂದಿದೆ. ಈ ಬಗ್ಗೆ ಸಿಬ್ಬಂದಿ ಜತೆ ಮಾತನಾಡಿ ಆದಷ್ಟು ಬೇಗ ಅಗತ್ಯ ಕ್ರಮ ಕೈಗೊಳ್ಳಲಾಗುವುದುಪವಿತ್ರಾ ಪ್ರದೀಪ್ ಗ್ರಾ.ಪಂ. ಅಧ್ಯಕ್ಷೆತಕ್ಷಣವೇ ನಿಲಯಕ್ಕೆ ಭೇಟಿ ನೀಡುತ್ತೇನೆ. ಸಮಸ್ಯೆ ಆಲಿಸಿ ಪಂಚಾಯಿತಿಯಿಂದ ಒದಗಿಸಬಹುದಾದ ಸೌಲಭ್ಯಗಳನ್ನು ಕಲ್ಪಿಸಲು ಕ್ರಮ ತೆಗೆದುಕೊಳ್ಳಲಾಗುವುದು.

**‘ಅಗತ್ಯವಿರುವ ಕಟ್ಟಡ ಸಿಗುತ್ತಿಲ್ಲ. ಹೊಸ ಕಟ್ಟಡವೂ ನಿರ್ಮಾಣವಾಗುತ್ತಿಲ್ಲ’ ಎಂದು ಗ್ರಾಮಸ್ಥ ಜಯಣ್ಣ ದೂರಿದರು. ಶಿಕ್ಷಣ ಇಲಾಖೆ ಸ್ವಂತ ಕಟ್ಟಡ ನಿರ್ಮಾಣವಾಗುವ ತನಕ ವಸತಿ ಶಾಲೆಗೆ ಬೇಕಿರುವ ಸೌಲಭ್ಯಗಳನ್ನು ಕಲ್ಪಿಸಲು ಹೆಚ್ಚಿನ ಶ್ರಮ ವಹಿಸಬೇಕು. ಇಲ್ಲವಾದಲ್ಲಿ ಈ ವಿದ್ಯಾರ್ಥಿನಿಯರು ಶಾಲೆ ಬಿಡುವುದು ಖಚಿತ. ಹೊಣೆ ಹೊತ್ತಿರುವ ಅಧಿಕಾರಿಗಳು, ಜನಪ್ರತಿನಿಧಿಗಳು ಸ್ಥಳ ಪರಿಶೀಲನೆ ಮಾಡಿ ಸಮಸ್ಯೆ ಸರಿಪಡಿಸಬೇಕು ಎಂದು ಗ್ರಾಮಸ್ಥರು ಒತ್ತಾಯಿಸಿದರು.**

## ಮಿನಿ ನ್ಯೂಸ್

### ಫೆಂಗಲ್ ಚಂಡಮಾರುತ : ಮಂಗಳೂರಲ್ಲಿ ಕೊಚ್ಚಿ ಹೋದ 10ಕ್ಕೂ ಹೆಚ್ಚು ಬೋಟ್‌ಗಳು

• **ಉದಯವಾಹಿನಿ, ಮಂಗಳೂರು**

ತಮಿಳುನಾಡಿನಲ್ಲಿ ಉಂಟಾದ ಫಂಗಲ್ ಚಂಡಮಾರುತದ ಪರಿಣಾಮ ರಾಜ್ಯಕ್ಕೂ ತಟ್ಟಿದ್ದು, ಇದೀಗ ಮಂಗಳೂರಿನ ಬಂದರಿನಲ್ಲಿ ಇದಂತಹ ಸುಮಾರು ಹತ್ತಕ್ಕೂ ಹೆಚ್ಚು ಮೀನುಗಾರಿಕಾ ಬೋಟ್ ಗಳು ಸಮುದ್ರದಲ್ಲಿ ಕೊಚ್ಚಿ ಹೋಗಿರುವ ಘಟನೆ ನಡೆದಿದೆ. ಹೌದು ಮಂಗಳೂರಿನ ಬಂದರಿನಲ್ಲಿ ಲಂಗರು ಹಾಕಿದ್ದ ಮೀನುಗಳಿಗಾಗಿ ಬಲೆ ಬೀಸುವ ದೋಣಿಗಳು ಕೊಚ್ಚಿ ಹೋಗಿದ್ದು, ಮಂಗಳೂರಿನಲ್ಲಿ ಮೀನುಗಾರಿಕೆ ಹಲವು ಬೋಟ್ ಗಳು ಸಹ ಕೊಚ್ಚಿ ಹೋಗಿವೆ. ಅಲ್ಲದೆ ಇನ್ನೊಂದು ಕಡೆ ದಕ್ಷಿಣ ಕನ್ನಡ ಜಿಲ್ಲೆಯ ಬಜಪೆ ಸಮೀಪ ಆದ್ಯಪಾಡಿಯಲ್ಲಿ ಭಾರಿ ಮಳೆಯಿಂದಾಗಿ ಭೂಕುಸಿತ ಉಂಟಾಗಿದೆ. ಭೂ ಕುಸಿತ ಹಿನ್ನೆಲೆಯಲ್ಲಿ ಬಜಪೆ ಮತ್ತು ಆದ್ಯಪಾಡಿಯ ರಸ್ತೆಯ ಸಂಪರ್ಕ ಸಂಪೂರ್ಣವಾಗಿ ಕಡಿತವಾಗಿದ್ದು, ಮಾನಾ ಶಾಲಿಯಾನ್ ಎಂಬುವರಿಗೆ ಸೇರಿದ ಮನೆಗೆ ಭೂಕುಸಿತದ ಹಾನಿ ಉಂಟಾಗಿದೆ.

### ಫೆಂಗಲ್ ಚಂಡಮಾರುತದ ಎಫೆಕ್ಟ್ ದಕ್ಷಿಣಕನ್ನಡದಲ್ಲಿ ಭಾರಿ ಮಳೆಗೆ ಭೂಕುಸಿತ

• **ಉದಯವಾಹಿನಿ, ದಕ್ಷಿಣಕನ್ನಡ**

ತಮಿಳುನಾಡಿನಲ್ಲಿ ಉಂಟಾದ ಫೆಂಗಲ್ ಚಂಡಮಾರುತದ ಅಬ್ಬರ ಕರ್ನಾಟಕದ ಮೇಲು ಭಾರಿ ಪರಿಣಾಮ ಬೀರಿದ್ದು, ರಾಜ್ಯದ ಹಲವು ಜಿಲ್ಲೆಗಳಲ್ಲಿ ಈಗಾಗಲೇ ಭಾರಿ ಮಳೆ ಸುರಿಯುತ್ತಿದ್ದು, ದಕ್ಷಿಣ ಕನ್ನಡದಲ್ಲಿ ಭಾರಿ ಮಳೆ ಆಗಿದ್ದ ಪರಿಣಾಮ, ಜಿಲ್ಲೆಯ ಬಜಪೆ ಸಮೀಪ ಭೂಕುಸಿತ ಉಂಟಾಗಿದೆ. ಹೌದು ಭಾರಿ ಮಳೆಗೆ ದಕ್ಷಿಣಕನ್ನಡ ಜಿಲ್ಲೆಯ ಬಜಪೆ ಸಮೀಪದ ಆದ್ಯಪಾಡಿಯಲ್ಲಿ ಭೂಕುಸಿತ ಉಂಟಾಗಿದೆ. ಭೂಕಸಿತ ಹಿನ್ನೆಲೆಯಲ್ಲಿ ಬಜಪೆ ಮತ್ತು ಆದ್ಯಪಾಡಿಯ ಸಂಪರ್ಕ ಸಂಪೂರ್ಣವಾಗಿ ಕಡಿತವಾಗಿದೆ. ಮಂಗಳೂರು ವಿಮಾನ ನಿಲ್ದಾಣ ಕೆಲ ಭಾಗದ ಆದ್ಯಪಾಡಿ ಪ್ರದೇಶದಲ್ಲಿ ಈ ಭೂಕುಸಿತ ಸಂಭವಿಸಿದೆ.ಉಮಾನಾಥ ಸಾಲಿಯಾನ್ ಎಂಬುವವರಿಗೆ ಸೇರಿದ ಮನೆಗೂ ಹಾನಿ ಉಂಟಾಗಿದ್ದು, ಮನೆ ಮುಂಭಾಗದ ಅಂಗಳದಲ್ಲಿ ಮಣ್ಣು ಕೆಸರು ಸಂಪೂರ್ಣವಾಗಿ ತುಂಬಿಕೊಂಡಿದೆ.

### ಅಪ್ರಾಪ್ತ ಮಗನಿಗೆ ಕಾರು ಚಾಲನೆಗೆ ಕೊಟ್ಟ ವ್ಯಕ್ತಿಗೆ 27 ಸಾವಿರ ರೂ. ದಂಡ.

• **ಉದಯವಾಹಿನಿ, ದಾವಣಗೆರೆ**

ಅಪ್ರಾಪ್ತ ಮಕ್ಕಳಿಗೆ ವಾಹನ ಚಾಲನೆಗೆ ಕೊಡುವ ಪೋಷಕರೇ ಎಚ್ಚರ. ಅಪ್ರಾಪ್ತ ಮಗನಿಗೆ ಚಾಲನೆ ಮಾಡಲು ಕಾರು ನೀಡಿದ ವ್ಯಕ್ತಿಗೆ ಎ.ಎಸ್. ಸಿ.ಎಸ್. ಜೆ.ಎಂ.ಎಫ್.ಸಿ. ನ್ಯಾಯಾಲಯ 27 ಸಾವಿರ ರೂ. ದಂಡ ವಿಧಿಸಿ ತೀರ್ಪು ನೀಡಿದೆ. ಹೌದು, ಕೆಲವು ತಿಂಗಳ ಹಿಂದೆ ಸಂಚಾರ ಠಾಣೆ ಪೋಲೀಸರು ವಾಹನಗಳ ತಪಾಸಣೆ ನಡೆಸುವ ಸಂದರ್ಭದಲ್ಲಿ ಕಾರು ನಿಲ್ಲಿಸಿ ತಪಾಸಣೆಗೆ ಒಳಪಡಿಸಿದಾಗ ಚಾಲಕ ಅಪ್ರಾಪ್ತನಾಗಿರುವುದು ಪತ್ತೆಯಾಗಿದ್ದು, ಕೂಡಲೇ. ಬಾಲಕ ಮತ್ತು ದಾವಣಗೆರೆ ನಿವಾಸಿ ಮಂಜುನಾಥ್ ಎಂಬುವರ ವಿರುದ್ಧ ಸಂಚಾರ ಠಾಣೆಯಲ್ಲಿ ದೂರು ದಾಖಲಾಗಿತ್ತು. ಸಂಚಾರ ವೃತ್ತ ನಿರೀಕ್ಷಕ ನೆಲವಾಗಲು ಮಂಜುನಾಥ್ ನೇತೃತ್ವದಲ್ಲಿ ಪ್ರಕರಣ ತನಿಖೆ ನಡೆಸಿದ ಪಿಎಸ್‌ಐ ಶೈಲಜಾ ನ್ಯಾಯಾಲಯಕ್ಕೆ ದೋಷಾರೋಪ ಪಟ್ಟಿ ಸಲ್ಲಿಸಿದ್ದರು. ಪ್ರಕ ರಣದ ವಿಚಾರಣೆ ನಡೆಸಿದ ನ್ಯಾಯಾಧೀಶರಾದ ನಾಗೇಶ್ ಅವರು ಬಾಲಕನಿಗೆ ಕಾರು ಚಾಲನೆಗೆ ನೀಡಿದ ಮಂಜುನಾಥ್ ಗೆ 27 ಸಾವಿರ ರೂ. ದಂಡ ವಿಧಿಸಿ ತೀರ್ಪು ನೀಡಿದ್ದಾರೆ.

### ರಸ್ತೆ ದಾಟುವಾಗ ಸರ್ಕಾರಿ ಬಸ್ ಹರಿದು ಪಾದಚಾರಿ ಸಾವು

• **ಉದಯವಾಹಿನಿ, ರಾಯಚೂರು**

ರಸ್ತೆ ದಾಟುವಾಗ ಸರ್ಕಾರಿ ಬಸ್ ಹರಿದು ಪಾದಚಾರಿ ವೃದ್ಧೆ ಸಾವನ್ನಪ್ಪಿರುವ ಘಟನೆ ರಾಯಚೂರು ಜಿಲ್ಲೆಯ ದೇವದುರ್ಗ ತಾಲ್ಲೂಕಿನ ತಿಂಥಿಣಿ ಸೇತುವೆ ಬಳಿ ನಡೆದಿದೆ. ಮೃತ ವೃದ್ಧೆಯನ್ನು ಜಾಲಹಳ್ಳಿ ಗ್ರಾಮದ ನಿವಾಸಿ ದುರುಗಮ್ಮ (72) ಎಂದು ಗುರುತಿಸಲಾಗಿದೆ. ಸರ್ಕಾರಿ ಬಸ್ ಯಾದಗಿರಿ ಜಿಲ್ಲೆಯ ಶಹಪುರದಿಂದ ಬಳ್ಳಾರಿಗೆ ಹೊರಟಿತ್ತು. ಇದೇ ಸಮಯದಲ್ಲಿ ತಿಂಥಣಿ ಸೇತುವೆ ಬಳಿ ವೃದ್ಧೆ ರಸ್ತೆ ದಾಟುತ್ತಿದ್ದರು. ಈ ವೇಳೆ ವೃದ್ಧೆಯ ಮೇಲೆ ಬಸ್ ಹರಿದು ಅವಘಡ ಸಂಭವಿಸಿದ್ದು, ಸ್ಥಳದಲ್ಲಿಯೇ ಸಾವನ್ನಪ್ಪಿದ್ದಾರೆ. ಸದ್ಯ ಜಾಲಹಳ್ಳಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಹೆಂಡತಿಗೆ ಮಂಗಳಸೂತ್ರ ಕೊಡಿಸಲು ಎಟಿಎಂಗೆ ಕನ್ನ ಆರೋಪಿ ಬಂಧನ

• **ಉದಯವಾಹಿನಿ, ಬೆಳಗಾವಿ**

ಹೆಂಡತಿಗೆ ಮಂಗಳಸೂತ್ರ ಕೊಡಿಸಲು ಎಟಿಎಂಗೆ ಕನ್ನ ಹಾಕಿದ್ದ ವ್ಯಕ್ತಿಯನ್ನು ಪೊಲೀಸರು ಬಂಧಿಸಿದ್ದಾರೆ. ಬೆಳಗಾವಿ ನಗರದ ಕೃಷ್ಣಾ ಸುರೇಶ್ ದೇಸಾಯಿ ಬಂಧಿತ ಆರೋಪಿ. ಈತ ಹೆಚ್‌ಡಿಎಫ್‌ಸಿ ಬ್ಯಾಂಕ್ ಎಟಿಎಂನಲ್ಲಿ ಹಣ ಎಗರಿಸಿದ್ದ. ಎಂಟು ಲಕ್ಷ ಹಣ ಕಳ್ಳತನ ಮಾಡಿದ್ದ. ಕೃಷ್ಣಾ ಎಟಿಎಂಗೆ ಹಣ ಹಾಕುವ ಕೆಲಸ ಮಾಡುತ್ತಿದ್ದ. ಎಟಿಎಂ ಮಷಿನ್ ಕೀ ತನ್ನ ಬಳಿಯೇ ಇರ್ತಿತ್ತು. ಟೀಂ ಜೊತೆಗೆ ಬಂದು ಹಣ ಹಾಕಿ ಬಳಿಕ ಸಂಜೆ ಒಬ್ಬನೇ ಬಂದು ಕಳ್ಳತನ ಮಾಡಿದ್ದಾನೆ. ಹಣ ಹಾಕಲು ಇರುತ್ತಿದ್ದ ಎಟಿ ಎಂ ಮಷಿನ್ ಕೀ ಬಳಸಿಯೇ ಎಂಟು ಲಕ್ಷ ಹಣ ಕಳ್ಳತನ ಮಾಡಿದ್ದಾನೆ. ಎರಡು ದಿನದ ಬಳಿಕ ಈತನ ಕೃತ್ಯ ಬೆಳಕಿಗೆ ಬಂದಿತ್ತು. ಸಿಸಿಟಿವಿ ದೃಶ್ಯ ಪರಿಶೀಲನೆ ಮಾಡಿದಾಗ ಎಟಿಎಂನಿಂದ ತಮ್ಮ ಸಿಬ್ಬಂದಿ ಹಣ ಕದ್ದಿದ್ದು ಕಂಡು ಇತರರು ಶಾಕ್ ಆಗಿದ್ದರು. ಈ ಕುರಿತು ಮಾರ್ಕೆಟ್ ಠಾಣೆಯಲ್ಲಿ ದೂರು ದಾಖಲಾಗಿತ್ತು. ತಲೆಮರೆಸಿಕೊಂಡಿದ್ದ ಆರೋಪಿಯನ್ನು ಬಂಧಿಸಲಾಗಿದೆ. ಬಂಧಿತನಿಂದ ಒಂದು ಮಂಗಳಸೂತ್ರ, ಚಿನ್ನದ ಸರ, ಏಳು ಲಕ್ಷ ರೂ. ನಗದು ಜಪ್ತಿ ಮಾಡಲಾಗಿದೆ.

### 1 ಲಕ್ಷ ಲಂಚಕ್ಕೆ ಬೇಡಿಕೆ : ದಾವಣಗೆರೆಯಲ್ಲಿ ಲೋಕಾಯುಕ್ತ ಬಲೆಗೆ ಬಿದ್ದ ಎಎಸ್‌ಐ

• **ಉದಯವಾಹಿನಿ, ದಾವಣಗೆರೆ**

ಪ್ರಕರಣ ಒಂದರಲ್ಲಿ ಆರೋಪಿಗಳ ಹೆಸರನ್ನು ಕೈ ಬಿಡಲು ಎಎಸ್‌ಐ ಈರಣ್ಣ ಎನ್ನುವವರು ವ್ಯಕ್ತಿ ಒಬ್ಬರ ಬಳಿ 50 ಸಾವಿರ ರೂಪಾಯಿ ಲಂಚ ಪಡೆಯುವ ವೇಳೆ ಲೋಕಾಯುಕ್ತ ಅಧಿಕಾರಿಗಳ ಕೈಗೆಯಲ್ಲಿ ರೆಡ್ ಹ್ಯಾಂಡ್ ಆಗಿ ಸಿಗಬಿದ್ದಿರುವ ಘಟನೆ ದಾವಣಗೆರೆಯಲ್ಲಿ ನಡೆದಿದೆ. ದಾವಣಗೆರೆಯ ಸರಸ್ವತಿ ನಗರದ ಮಣಿಕಂಠ ಆಚಾರ್ಯನಿಂದ ಎಎಸ್‌ಐ ಅಧಿಕಾರಿ ಲಂಚ ಪಡೆಯುತ್ತಿದ್ದ. ಚಾರ್ಜ್ ಶೀಟ್ ನಲ್ಲಿ ಇಬ್ಬರ ಹೆಸರು ಕೈಬಿಡಲು 1 ಲಕ್ಷ ರೂಪಾಯಿಗೆ ಕೆಟಿಜೆ ನಗರ ಠಾಣೆಯ ಎಎಸ್‌ಐ ಈರಣ್ಣ ಬೇಡಿಕೆ ಇಟ್ಟಿದ್ದ. ಈ ವೇಳೆ ಮುಂಗಡವಾಗಿ ಠಾಣೆ ಬಳಿ ರಂಜಸ ಸ್ವೀಕರಿಸುತ್ತಿದ್ದ ವೇಳೆ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕ ಕಾಲ | ಬೆಳಿಗ್ಗೆ | 10:30 ರಿಂದ 12:00 |
| ಯಮಗಂಡ ಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ** ವ್ಯಾಪಾರದ ಉದ್ದೇಶದಿಂದ ಕೈಗೊಂಡ ಪ್ರಯಾಣ ದೀರ್ಘಾವಧಿಯಲ್ಲಿ ಪ್ರಯೋಜನಕಾರಿ ಎಂದು ಸಾಬೀತಾಗುತ್ತದೆ. ನಿಮ್ಮ ಸಂಗಾತಿಯ ಜೊತೆ ಗಂಭೀರವಾದ ವಾದವನ್ನು ಹೊಂದಿರಬಹುದು.

**ವೃಷಭ** ಇಂದು ಹೆಚ್ಚುವರಿ ಚೈತನ್ಯವನ್ನು ಹೊಂದಿರುತ್ತೀರಿ ಹಾಗೂ ಇದು ನಿಮ್ಮನ್ನು ನಿಮ್ಮ ಗುಂಪಿಗಾಗಿ ಸಮಾರಂಭವನ್ನು ಸಂಯೋಜಿಸುವಂತೆ ಮಾಡುತ್ತದೆ. ನಿಮ್ಮ ಪ್ರೀತಿಯ ಕಥೆ ಇಂದು ಒಂದು ಹೊಸ ತಿರುವು ತೆಗೆದುಕೊಳ್ಳಬಹುದು.

**ಮಿಥುನ** ಜೀವನದೆಡೆಗೆ ಉದಾರವಾದ ಮನೋಭಾವ ಹೊಂದಿ. ದೂರು ನೀಡುವುದು ಮತ್ತು ನಿಮ್ಮ ಜೀವನಮಟ್ಟದ ಬಗೆಗೆ ಅಸಮಾಧಾನ ಹೊಂದುವುದರಿಂದ ಯಾವುದೇ ಪ್ರಯೋಜನವಿಲ್ಲ.

**ಕರ್ಕಾಟಕ** ವಿಶೇಷವಾಗಿ ಹೃದಯ ರೋಗಿಗಳು ಕಾಫಿಯನ್ನು ಬಿಡಬೇಕು. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ಸ್ನೇಹಿತರು ಉಪಯುಕ್ತವಾಗಿರುತ್ತಾರೆ.

**ಸಿಂಹ** ಆರೋಗ್ಯ ಸಮಸ್ಯೆಗಳು ಅಸ್ವಸ್ಥತೆಯನ್ನು ತರಬಹುದು. ಹೆಚ್ಚು ಖರೀದಿಸಲು ಧಾವಿಸುವ ಮೊದಲು ನೀವು ಈಗಾಗಲೇ ಹೊಂದಿರುವುದನ್ನು ಬಳಸಿ. ನಿಮ್ಮ ವೈಯಕ್ತಿಕ ಜೀವನ ನಿಮ್ಮ ಗಮನದ ಕೇಂದ್ರಬಿಂದುವಾಗಿದೆ.

**ಕನ್ಯಾ** ಮನೆಯ ಸುಧಾರಣೆಯ ಯೋಜನೆಗಳನ್ನು ಪರಿಗಣಿಸಬೇಕು. ಪ್ರೀತಿಯ ಭಾವಪರವಶತೆಯನ್ನು ಅನುಭವಿಸಲು ಯಾರಾದರೂ ದೊರಕಬಹುದು. ಸ್ಪರ್ಧೆ ಹೆಚ್ಚಾದ ಹಾಗೆ ಕೆಲಸದ ವೇಳಾಪಟ್ಟಿಯಲ್ಲಿ ಒತ್ತಡ ಉಂಟಾಗುತ್ತದೆ.

**ತುಲಾ** ಬಸುರಿಯು ನೆಲದ ಮೇಲೆ ನಡೆದುಕೊಂಡು ಹೋಗುವಾಗ ವಿಶೇಷ ಕಾಳಜಿ ವಹಿಸಬೇಕು. ಇಂದು ನಿಮ್ಮ ತಂದೆ ತಾಯಿಯರಲ್ಲಿ ಯಾರಾದರೂ ಒಬ್ಬರು ಹಣವನ್ನು ಸಂಗ್ರಹಿಸುವ ಬಗ್ಗೆ ಉಪನ್ಯಾಸಗಳನ್ನು ನೀಡಬಹುದು.

**ವೃಶ್ಚಿಕ** ಇಂದು ನೀವು ನಿಮ್ಮ ಕೆಲಸಗಳನ್ನು ಸಮಯದಲ್ಲೇ ಪೂರೈಸಲು ಪ್ರಯತ್ನಿಸಬೇಕು. ಮನೆಯಲ್ಲಿ ಯಾರೋ ನಿಮಗಾಗಿ ಕಾಯುತ್ತಿದ್ದಾರೆ ಮತ್ತು ಅವರಿಗೆ ನಿಮ್ಮ ಅಗತ್ಯವಿದೆ ಎಂಬುದರ ಬಗ್ಗೆ ನೀವು ಗಮನ ಹರಿಸಬೇಕು.

**ಧನಸ್ಸು** ಹಣವನ್ನು ಯೋಚಿಸದೆ ಮತ್ತು ಪರಿಗಣಿಸದೆ ಖರ್ಚು ಮಾಡುವುದು, ನಿಮಗೆ ಎಷ್ಟು ನಷ್ಟ ಮಾಡಬಹುದು ಎಂಬುದು ಇಂದು ನಿಮಗೆ ಅರ್ಥವಾಗಬಹುದು. ನಿಮ್ಮ ಮಕ್ಕಳೊಂದಿಗೆ ಸ್ವಲ್ಪ ಆಹ್ಲಾದಕರ ಸಮಯ ಕಳೆಯಿರಿ.

**ಮಕರ** ಈ ರಾಶಿಚಕ್ರದ ಉದ್ಯಮಿಗಳು, ಇಂದು ನಿಮ್ಮ ಬಳಿ ಹಣವನ್ನು ಕೇಳುತ್ತಾರೆ ಮತ್ತು ನಂತರ ಮರುಪಾವತಿ ಮಾಡದೇ ಇರುವಂತಹ ನಿಮ್ಮ ಮನೆಯ ಸದಸ್ಯರಿಂದ ದೂರವಿರಬೇಕು.

**ಕುಂಭ** ನಿಮ್ಮ ನಗು ಖಿನ್ನತೆಯ ವಿರುದ್ಧ ಕೆಲಸ ಮಾಡುತ್ತದೆ. ಆಹ್ವಾನಿಸದ ಯಾವುದೇ ಅತಿಥಿ ಇಂದು ಮನೆಗೆ ಬರಬಹುದು ಆದರೆ ಈ ಅತಿಥಿಯ ಅದೃಷ್ಟದ ಕಾರಣದಿಂದ ಇಂದು ನೀವು ಆರ್ಥಿಕ ಲಾಭವನ್ನು ಪಡೆಯಬಹುದು.

**ಮೀನ** ನೀವು ಕೆಲವು ಆಘಾತಗಳನ್ನು ಎದುರಿಸುವುದರಿಂದ ನೀವು ಬಹಳ ಧೈರ್ಯ ಹಾಗೂ ಶಕ್ತಿಯನ್ನು ಪ್ರದರ್ಶಿಸುವ ಅಗತ್ಯವಿದೆ. ನೀವು ನಿಮ್ಮ ಆಶಾವಾದಿ ನಿಲುವಿನಿಂದ ಇವುಗಳಿಂದ ಸುಲಭವಾಗಿ ಹೊರಬರಬಹುದು.

# ವಿಕಲಚೇತನರಿಗೆ ಅನುಕಂಪಕ್ಕಿಂತ, ಅವಕಾಶ ನೀಡಿ: ಬಿ.ಟಿ.ಕುಮಾರಸ್ವಾಮಿ

## ವಿಕಲಚೇತನರಿಗೆ ಅವಕಾಶ ಕೊಡದೇ ವಂಚಿತರನ್ನಾಗಿ ಮಾಡಬಾರದು, ಯಾವುದೇ ಕಾರಣಕ್ಕೂ ಎದೆಗುಂದಬಾರದು

• ಉದಯವಾಹಿನಿ ಚಿತ್ರದುರ್ಗ

ವಿಕಲಚೇತನರಿಗೆ ಅನುಕಂಪ ತೋರಿಸುವುದಕ್ಕಿಂತ ಮುಖ್ಯವಾಗಿ ನಾವು ಅವಕಾಶ ಕಲ್ಪಿಸಿಕೊಡಬೇಕು. ಆಗ ಮಾತ್ರ ವಿಕಲಚೇತನರು ಸಮಾಜದ ಮುಖ್ಯವಾಹಿನಿಗೆ ಬರಲು ಸಾಧ್ಯವಾಗುವುದು ಎಂದು ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹೇಳಿದರು.

ತರಾಸು ರಂಗಮಂದಿರದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರೀಕರ ಸಬಲೀಕರಣ ಇಲಾಖೆ, ಯುವ ಸಬಲೀಕರಣ ಇಲಾಖೆ, ವಿಕಲಚೇತನರ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಘ ಸಂಸ್ಥೆಗಳು ಹಾಗೂ ವಿವಿದೋದ್ದೇಶ ನಗರ, ಗ್ರಾಮೀಣ ಪುನರ್ವಸತಿ ಕಾರ್ಯ ಕರ್ತರ ಸಹಯೋಗದಲ್ಲಿ ಸಮಗ್ರ ಮತ್ತು ಸುಸ್ಥಿರ ಭವಿಷ್ಯಕ್ಕಾಗಿ ವಿಕಲಚೇತನ ವ್ಯಕ್ತಿಗಳಲ್ಲಿ ನಾಯಕತ್ವಕ್ಕೆ ಉತ್ತೇಜನ ಎಂಬ ಘೋಷವಾಕ್ಯದೊಂದಿಗೆ "ವಿಶ್ವ ವಿಕಲಚೇತನರ ದಿನಾಚರಣೆ" ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ವಿಕಲಚೇತನರನ್ನು ಮುಖ್ಯವಾಹಿನಿಗೆ ತರುವ ನಿಟ್ಟಿನಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರ ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಹಾಗೂ ಉದ್ಯೋಗದಲ್ಲಿಯೂ ಮೀಸಲಾತಿ ಮತ್ತು ಅವಕಾಶಗಳನ್ನು ಕಲ್ಪಿಸಿದ್ದು, ಅವುಗಳನ್ನು ಸದುಪಯೋಗ ಪಡಿಸಿಕೊಂಡು ಸಮಾಜದ ಮುಖ್ಯವಾಹಿನಿಗೆ ಬರಬೇಕು ಎಂದು ಸಲಹೆ ನೀಡಿದರು. ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ವಿಕಲಚೇತನರು ತಮ್ಮ ದೈಹಿಕ ನ್ಯೂನತೆಗಳ ಬಗ್ಗೆ ಕೀಳರಿಮೆಯನ್ನು ಮನಸ್ಸಿನಿಂದ ತೊರೆದು, ನಾವು ಯಾರಿಗೂ ಕಮ್ಮಿ ಇಲ್ಲ ಎಂಬ ಭಾವನೆ ಹೊಂದಿರಬೇಕು. ವಿಕಲಚೇತನರಲ್ಲಿ ವಿಶೇಷ ಗುಣಗಳಿದ್ದು, ಕೌಶಲ್ಯಗಳಿದ್ದು, ಎಲ್ಲಾ ಕ್ಷೇತ್ರಗಳಲ್ಲಿಯೂ ಪಾಲ್ಗೊಳ್ಳಬೇಕು ಎಂದು ಕಿವಿಮಾತು ಹೇಳಿದರು.

> ವಿಕಲಚೇತನರಿಗೆ ಅವಕಾಶ ಕೊಡದೇ ವಂಚಿತರನ್ನಾಗಿ ಮಾಡಬಾರದು. ಯಾವುದೇ ಕಾರಣಕ್ಕೂ ವಿಕಲಚೇತನರು ಎದೆಗುಂದಬಾರದು. ಉತ್ಸಾಹ, ಛಲ, ಧೈರ್ಯ, ಕಠಿಣ ಪರಿಶ್ರಮವಿದ್ದರೆ ಸಾಧನೆ ಮಾಡುವುದು ಕಷ್ಟವೇನಲ್ಲ. ಪ್ಯಾರಾ ಒಲಂಪಿಕ್, ಕ್ರೀಡೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ವಿಕಲಚೇತನರು ನಾವು ಯಾರಿಗೂ ಕಮ್ಮಿ ಇಲ್ಲ ಎಂಬಂತೆ ಸಾಧನೆ ಮಾಡಿರುವ ಉದಾಹರಣೆಗಳಿವೆ
> -ಬಿ.ಟಿ.ಕುಮಾರಸ್ವಾಮಿ, ಜಿಲ್ಲಾಧಿಕಾರಿ

ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಜೆ.ವೈಶಾಲಿ ಮಾತನಾಡಿ, 2011ರ ಜನಗಣತಿ ಪ್ರಕಾರ ಜಿಲ್ಲೆಯಲ್ಲಿ ಒಟ್ಟು 35,971 ಜನ ವಿಕಲಚೇತನರು ಇದ್ದಾರೆ. ವಿಕಲಚೇತನರು ಮುಖ್ಯವಾಹಿನಿಗೆಯಲ್ಲಿ ಸಾಮಾನ್ಯರಂತೆ ಜೀವಿಸಲು ಅನುಕೂಲವಾಗುವಂತೆ ಎಲ್ಲಾ ರೀತಿಯ ಅಡೆತಡೆರಹಿತ ಸೌಲಭ್ಯ ಮತ್ತು ನೆರವು ನೀಡುವುದು ಸರ್ಕಾರ ಹಾಗೂ ಸಮುದಾಯದ ಜವಾಬ್ದಾರಿಯಾಗಿರುತ್ತದೆ. ಕೇಂದ್ರ ಮತ್ತು ರಾಜ್ಯ ಸರ್ಕಾರದ ವಿವಿಧ ಯೋಜನೆಗಳ ಮೂಲಕ ಸೌಲಭ್ಯಗಳನ್ನು ಒದಗಿಸುವ ಮೂಲಕ ಎಲ್ಲಾ ವಿಕಲಚೇತನರು ಮುಖ್ಯವಾಹಿನಿಗೆ ಬರುವಲ್ಲಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ಹೇಳಿದರು.


ಉದಯವಾಹಿನಿ ಚಿತ್ರ

> ವಿಕಲಚೇತನರು ಮನೋಸ್ಥೈರ್ಯವನ್ನು ಬೆಳೆಸಿಕೊಳ್ಳುವ ಮೂಲಕ ಉನ್ನತ ಗುರಿ ಇರಿಸಿಕೊಂಡು ಅದರ ಸಾಕಾರಕ್ಕೆ ಯತ್ನಿಸಬೇಕು. ಅಂಗವಿಕಲರು ಪ್ರತಿಭಾವಂತರಾಗಿದ್ದು, ಮಾನಸಿಕವಾಗಿ ಸಬಲರಾಗುವ ಮೂಲಕ ದೈಹಿಕ ನ್ಯೂನತೆಗಳನ್ನು ಮೆಟ್ಟಿನಿಂತು ಸಾಧನೆ ಮಾಡಬೇಕು
> -ಸುಮಿತಾ ಬಿ.ಎನ್ ರಾಘವೇಂದ್ರ, ನಗರಸಭೆ ಅಧ್ಯಕ್ಷೆ

ವಿಕಲಚೇತನರಿಗೆ ಮಾಸಿಕ ನಿರ್ವಹಣಾ ಭತ್ಯೆ, ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ, ಸಾಧನ ಸಲಕರಣೆಗಳು, ಆಧಾರ ಸ್ವಯಂ ಉದ್ಯೋಗ ಯೋಜನೆ, ವಿಕಲಚೇತನ ವ್ಯಕ್ತಿಯನ್ನು ಸಾಮಾನ್ಯ ವ್ಯಕ್ತಿ ವಿವಾಹವಾದಲ್ಲಿ ಪ್ರೋತ್ಸಾಹಧನ, ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ, ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಶಿಶುಪಾಲನಾ ಭತ್ಯೆ, ದೈಹಿಕ ವಿಕಲಚೇತನರಿಗೆ ಯಂತ್ರಚಾಲಿತ ವಾಹನ ಯೋಜನೆ, ಅಂಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್‌ಟಾಪ್, ಬ್ರೈಲ್ ಕಿಟ್ ಯೋಜನೆ, ಶ್ರವಣದೋಷ ವಿಕಲಚೇತನರಿಗೆ ಹೊಲಿಗೆಯಂತ್ರ ಯೋಜನೆ, ಆರೈಕೆದಾರರ ಪ್ರೋತ್ಸಾಹಧನ ಯೋಜನೆ, ವಿಕಲಚೇತನರಿಗೆ ರಿಯಾಯಿತಿ ಬಸ್‌ಪಾಸ್ ವ್ಯವಸ್ಥೆ, ಉದ್ಯೋಗದಲ್ಲಿ ಮೀಸಲಾತಿ ಎ ಮತ್ತು ಬಿ ವೃಂದಕ್ಕೆ ಶೇ.4ರಷ್ಟು ಹಾಗೂ ಸಿ ಮತ್ತು ಡಿ ವೃಂದಕ್ಕೆ ಶೇ.5ರಷ್ಟು ಮೀಸಲಾತಿ ಕಲ್ಪಿಸಲಾಗಿದೆ ಎಂದು ಹೇಳಿದರು.

> ಅಂಗವಿಕಲರು ಕ್ರೀಡಾ ಮತ್ತು ಸಾಂಸ್ಕೃತಿಕ, ಶೈಕ್ಷಣಿಕ ಕ್ಷೇತ್ರಗಳು ಸೇರಿದಂತೆ ಎಲ್ಲಾ ಕ್ಷೇತ್ರಗಳಲ್ಲಿಯೂ ವಿಶೇಷವಾದ ಸಾಧನೆ ತೋರಿದ್ದಾರೆ. ವಿಶೇಷ ಚೇತನರಿಗೆ ಅನುಕಂಪ, ತಾತ್ಸಾರಕ್ಕಿಂತ ಅವಕಾಶ ಕಲ್ಪಿಸಬೇಕು. ಸಾಮಾನ್ಯ ಮನುಷ್ಯರಿಗಿಂತ ಅಂಗವಿಕಲರಲ್ಲಿ ವಿಶೇಷವಾದ ಶಕ್ತಿ ಇರುತ್ತದೆ
> -ಭಾರತಿ ಆರ್ ಬಣಕಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ

**ವಿಶ್ವ ವಿಕಲಚೇತನರ ದಿನಾಚರಣೆ**


ಇದೇ ಸಂದರ್ಭದಲ್ಲಿ ವಿಶ್ವ ವಿಕಲಚೇತರ ದಿನಾಚರಣೆ ಅಂಗವಾಗಿ 2023-24ನೇ ಸಾಲಿನಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕಗಳನ್ನು ಪಡೆದ ವಿಕಲಚೇತನ ವಿದ್ಯಾರ್ಥಿಗಳನ್ನು ಹಾಗೂ ಕ್ರೀಡಾ ಕ್ಷೇತ್ರದಲ್ಲಿ ಉತ್ತಮ ಸಾಧನೆ ತೋರಿದ ವಿಕಲಚೇತನ ವಿದ್ಯಾರ್ಥಿ ಈ ಶ್ರೀಹರಿ ಅವರನ್ನು ಗೌರವಿಸಲಾಯಿತು. ನಂತರ ವಿಶ್ವ ವಿಕಲಚೇತನರ ದಿನಾಚರಣೆ ಅಂಗವಾಗಿ ಜಿಲ್ಲಾಮಟ್ಟದಲ್ಲಿ ವಿಕಲಚೇತನರಿಗೆ ಹಮ್ಮಿಕೊಂಡಿದ್ದ ಕ್ರೀಡಾ ಮತ್ತು ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ವಿಜೇತರಾದ ವಿಕಲಚೇತನರಿಗೆ ಬಹುಮಾನ ವಿತರಿಸಲಾಯಿತು. ನಂತರ ವಿಕಲಚೇತನ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ನಗರಸಭೆ ಉಪಾಧ್ಯಕ್ಷೆ ಶ್ರೀದೇವಿ, ಚಿತ್ರದುರ್ಗ ಉಪವಿಭಾಗದ ಪೊಲೀಸ್ ಉಪಾಧೀಕ್ಷಕ ದಿನಕರ್, ವಿಕಲಚೇತನರ ನೌಕರರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಹೆಚ್. ಶ್ರೀನಿವಾಸ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿ ಪವಿತ್ರ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ ಸೇರಿದಂತೆ ವಿವಿದೋದ್ದೇಶ, ನಗರ, ಗ್ರಾಮೀಣ ಪುನರ್ವಸತಿ ಕಾರ್ಯಕರ್ತರು ಹಾಗೂ ವಿಕಲಚೇತನರು ಇದ್ದರು.

# ಉತ್ತಮ ಆರೋಗ್ಯಕ್ಕಾಗಿ ಉತ್ತಮ ಮಾರ್ಗ ಅನುಸರಿಸಿರುವುದು ಅಗತ್ಯ

• ಉದಯವಾಹಿನಿ, ಚಿತ್ರದುರ್ಗ

ಸರಿಯಾದ ಹಾದಿಯನ್ನು ಹಿಡಿಯಿರಿ, ನನ್ನ ಆರೋಗ್ಯ, ನನ್ನ ಹಕ್ಕು ಎಂಬ ಧ್ಯೇಯ ವಾಕ್ಯದೊಂದಿಗೆ ಆಚರಿಸಲಾಗುತ್ತಿರುವ 2024ರ ವಿಶ್ವ ಏಡ್ಸ್ ದಿನಾಚರಣೆ ನಿಜಕ್ಕೂ ಅರ್ಥಪೂರ್ಣವಾಗಿದೆ ಕೆಟ್ಟ ಅಭ್ಯಾಸವನ್ನು ಉತ್ತಮ ಅಭ್ಯಾಸದೊಂದಿಗೆ ಬದಲಾಯಿಸಲು ಸಮಯ ಮತ್ತು ತಾಳ್ಮೆ ಬೇಕಾಗುತ್ತದೆ ನಿಮ್ಮ ಒಳ್ಳೆಯ ಮತ್ತು ಸರಿಯಾದ ಆರೋಗ್ಯವಂತ ಹಾದಿಯನ್ನು ಹಿಡಿಯಲು ಆರೋಗ್ಯ ಇಲಾಖೆ ಸದಾ ನಿಮಗೆ ಬೆಂಬಲ ಮತ್ತು ಪ್ರೋತ್ಸಾಹ ನೀಡುತ್ತದೆ ಏಡ್ಸ್ ರೋಗಿಗಳು ಈಗ ಭಯಪಡುವ ಅಗತ್ಯವಿಲ್ಲ ಸರಿಯಾದ ಸಮಯಕ್ಕೆ ಚಿಕಿತ್ಸೆ ಪಡೆದರೆ ಉತ್ತಮ ಜೀವನ ನಡೆಸಬಹುದುಎಂದು ಹಿರೇಗುಂಟನೂರು ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಧಿಕಾರಿ ಡಾ. ಜಯಶ್ರೀ ಅಭಿಪ್ರಾಯಪಟ್ಟಿದ್ದಾರೆ.



ಉದಯವಾಹಿನಿ ಚಿತ್ರ

**ಏಡ್ಸ್ ರೋಗಿಗಳು ಭಯಪಡುವ ಅಗತ್ಯವಿಲ್ಲ**

ವಿಶ್ವ ದಿನದ ಅಂಗವಾಗಿ ಚಿತ್ರದುರ್ಗ ತಾಲ್ಲೂಕು ಹಿರೇಗುಂಟನೂರು ಗ್ರಾಮದ ಸರ್ಕಾರಿ ಪ್ರಾಥಮಿ ಆರೋಗ್ಯ ಮತ್ತು ಕ್ಷೇಮ ಕೇಂದ್ರದಲ್ಲಿ ಮಂಗಳವಾರ ಹಮ್ಮಿಕೊಳ್ಳಲಾಗಿದ್ದ ಏಡ್ಸ್ ಜಾಗೃತಿ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡುತ್ತಾ ಎಚ್ ಐವಿ ಯೊಂದಿಗೆ ವಾಸಿಸುವ ಜನರು ಕಳಂಕ ಅಥವಾ ಸಮಾಜದಲ್ಲಿ ತಾರತಮ್ಯವನ್ನು ಎದುರಿಸುತ್ತಿರುವ ಏಡ್ಸ್ ರೋಗಿಗಳಿಗೆ ಮಾನಸಿಕ ಬೆಂಬಲ ನೀಡುವ ಸಲುವಾಗಿ ಹಾಗೂ ವಿಶ್ವದಾದ್ಯಂತ ಏಡ್ಸ್ ತಡೆಗಟ್ಟುವ ಕ್ರಮಗಳು, ಚಿಕಿತ್ಸೆ ನೀಡುವುದು ಹಾಗೂ ಆರೈಕೆಯ ಮಹತ್ವದ ಬಗ್ಗೆ ಪ್ರತಿಪಾದಿಸುವ ಸಲುವಾಗಿ ಪ್ರತಿ ವರ್ಷ ಡಿಸೆಂಬರ್ ಒಂದನೇ ತಾರೀಕು ವಿಶ್ವ ದಿನವನ್ನಾಗಿ ಆಚರಿಸಲಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಹಿರಿಯ ಪ್ರಾಥಮಿಕ ಸುರಕ್ಷಣಾಧಿಕಾರಿ ಶ್ರೀಮತಿ ಶಾಂತಮ್ಮ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ಪುಟ್ಟಸ್ವಾಮಿ, ನಾಗರಾಜ್, ಅಜಯಕುಮಾರ್, ಯೋಗಗುರು ರವಿ ಕೆ. ಅಂಬೇಕರ್, ಆರೋಗ್ಯ ಸುರಕ್ಷಣಾಧಿಕಾರಿಗಳಾದ ಗಂಗಮ್ಮ ಪರ್ವೀನ್, ಸುಶೀಲಮ್ಮ, ವೀರಮ್ಮ, ಸಮುದಾಯ ಆರೋಗ್ಯ ಅಧಿಕಾರಿಗಳಾದ ಪ್ರಿಯಾ, ಪುನೀತ್ ಇನ್ನಿತರರು ಭಾಗವಹಿಸಿದ್ದರು.

# ಅಪ್ರಾಪ್ತ ಬಾಲಕಿ ಆತ್ಮಹತ್ಯೆ : ಮೂವರು ಅರೆಸ್ಟ್

• ಉದಯವಾಹಿನಿ, ವಿಜಯಪುರ

ಯುವಕ ಚುಡಾಯಿಸಿದ್ದಕ್ಕೆ ಮನನೊಂದು ಬಾಲಕಿ ಆತ್ಮಹತ್ಯೆ ಮಾಡಿಕೊಂಡಿದ್ದು ಮನೆಯಲ್ಲಿ ನೇಣು ಬಿಗಿದುಕೊಂಡು ಅಪ್ರಾಪ್ತ ಬಾಲಕಿ ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ವಿಜಯಪುರ ಜಿಲ್ಲೆಯ ಮುದ್ದೇಬಿಹಾಳ ತಾಲ್ಲೂಕಿನಲ್ಲಿ ನಡೆದಿದೆ. ಕಳೆದ ಹಲವಾರು ದಿನಗಳಿಂದ ಅಪ್ರಾಪ್ತೆಯ ಹಿಂದೆ ಯುವಕ ಬಿದ್ದಿದ್ದ. ಪ್ರೀತಿ ಪ್ರೇಮದ ಹೆಸರಿನಲ್ಲಿ ಬಾಲಕಿಗೆ ಸಂಗಮೇಶ್ ಜಂಜವಾರ್ ಕಿರುಕುಳ ನೀಡಿದ್ದಾನೆ. ಕಾಲೇಜಿಗೆ ತೆರಳುತ್ತಿದ್ದ ವೇಳೆ ಹಿಂಬಾಲಿಸಿ ಸಂಗಮೇಶ್ ಬಾಲಕಿಗೆ ಚುಡಾಯಿಸುತ್ತಿದ್ದ. ಅಲ್ಲದೇ ಅಪ್ರಾಪ್ತಿಯ ಜೊತೆಗೆ ಅಸಭ್ಯವಾಗಿ ವರ್ತಿಸಿ ಕಿರುಕುಳ ನೀಡಿರುವ ಆರೋಪ ಕೇಳಿ ಬಂದಿದೆ. ನನ್ನ ಪ್ರೀತಿಸು ಎಂದು ಬಾಲಕಿಗೆ ಸಂಗಮೇಶ್ ಬಲವಂತ ಮಾಡುತ್ತಿದ್ದ. ಸಂಗಮೇಶನನ್ನು ಪ್ರಶ್ನಿಸಿದ್ದ ಬಾಲಕಿಯ ಸಹೋದರಿಯ ಮೇಲೆ ಕೂಡ ಆತ ಹಲ್ಲೆ ಮಾಡಿದ್ದ. ಅಲ್ಲದೆ ಸಂಗಮೇಶ ವಿರುದ್ಧ ಜೀವ ಬೆದರಿಕೆ ಹಾಕಿ ಹಲ್ಲೆ ಮಾಡಿದ್ದ ಆರೋಪ ಕೇಳಿ ಬಂದಿದೆ. ಈ ಕುರಿತಂತೆ ನವೆಂಬರ್ 27ರಂದು ಮುದ್ದೇಬಿಹಾಳ ಠಾಣೆಯಲ್ಲಿ ಅಪ್ರಾಪ್ತ ಬಾಲಕಿ ದೂರು ನೀಡಿದ್ದಾಳೆ.

ಸಂಗಮೇಶ್, ಮೌನೇಶ್ ಮಾದರ ಹಾಗೂ ಚಿದಾನಂದ ಕಟ್ಟಿಮನಿ ವಿರುದ್ಧ ದೂರು ಸಲ್ಲಿಸಿದ್ದಾಳೆ. ಮೂವರ ವಿರುದ್ಧ ಪೊಲೀಸರು ಇದೀಗ ಪೋಕ್ಸೋ ಪ್ರಕರಣವನ್ನು ದಾಖಲಿಸಿಕೊಂಡಿದ್ದಾರೆ. ಪ್ರಕರಣ ಸಂಬಂಧ ಮೂವರನ್ನು ಬಂಧಿಸಿದ್ದಾರೆ. ಅಪ್ರಾಪ್ತ ಬಾಲಕಿ ಸಾವಿಗೆ ಯುವಕರ ಕಿರುಕುಳಗೆ ಕಾರಣ ಎಂದು ಆರೋಪಿಸಲಾಗಿದೆ. ಮುದ್ದೇಬಿಹಾಳ ಠಾಣೆಯ ಮುಂದೆ ಸದ್ಯ ಬಾಲಕಿಯ ಪೋಷಕರು ಗ್ರಾಮಸ್ಥರು ಆರೋಪ ಮಾಡುತ್ತಿದ್ದಾರೆ.

# ನೀರಿನ ಟ್ರ್ಯಾಕ್ಟರ್ ಹರಿದು ಪಾದಚಾರಿ ಸಾವು ಮಾಲೀಕ ಸೇರಿ ಇಬ್ಬರ ವಿರುದ್ಧ 'ಎಫ್‌ಐಆರ್'

• ಉದಯವಾಹಿನಿ, ಹಾವೇರಿ

ಹಾವೇರಿಯಲ್ಲಿ ಗೌರವದ ದುರಂತ ಒಂದು ನಡೆದಿದ್ದು ನೀರಿನ ಟ್ರ್ಯಾಕ್ಟರ್ ಒಂದು ನಿಯಂತ್ರಣ ತಪ್ಪಿ ಪಾದಚಾರಿಯ ಮೇಲೆ ಹರಿದ ಪರಿಣಾಮ ಸ್ಥಳದಲ್ಲೇ ಷಣ್ಮುಖ ಬಣಗಾರ್ (38) ಎನ್ನುವ ಪಾದಚಾರಿಯೊಬ್ಬರು ಸಾವನಪ್ಪಿರುವ ಘಟನೆ ಹಾವೇರಿ ಜಿಲ್ಲೆಯ ರಾಣೇಬೆನ್ನೂರು ತಾಲ್ಲೂಕಿನ ಅರೆ ಮಲ್ಲಾಪುರ ಗ್ರಾಮದಲ್ಲಿ ನಡೆದಿದೆ. ಹಾವೇರಿ ಜಿಲ್ಲೆಯ ರಾಣೆಬೆನ್ನೂರು ತಾಲ್ಲೂಕಿನ ಅರೆಮಲ್ಲಾಪುರದಲ್ಲಿ ಈ ಒಂದು ಘಟನೆ ನಡೆದಿದೆ. ಚಾಲಕನ ಟ್ರ್ಯಾಕ್ಟರ್ ನಿಯಂತ್ರಣ ತಪ್ಪಿ ಪಾದಾಚಾರಿ ಮೇಲೆ ಹರಿದು ಸಾವನ್ನಪ್ಪಿದ್ದಾರೆ. ಸ್ಥಳಕ್ಕೆ ರಾಣೆಬೆನ್ನೂರು ಗ್ರಾಮೀಣ ಠಾಣೆಯ ಪೊಲೀಸರು ಭೇಟಿ ನೀಡಿದ್ದು, ಪರಿಶೀಲನೆ ನಡೆಸುತ್ತಿದ್ದಾರೆ. ಟ್ರ್ಯಾಕ್ಟರ್ ಮಾಲೀಕ ಮಾಲತೇಶ್ ಹಾಗೂ ಚಾಲಕ ಮಾರುತಿ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

# ಬಸವಣ್ಣನವರಿಗಷ್ಟೇ ಅಲ್ಲ, ಮಹಿಳೆಯರಿಗೂ ಯತ್ನಾಳ ಅಪಮಾನ: ಅಕ್ಕ ಗಂಗಾಂಬಿಕೆ

• ಉದಯವಾಹಿನಿ, ಹುಲಸೂರ

12ನೇ ಶತಮಾನದಲ್ಲಿ ಬಸವಣ್ಣನವರ ನೇತೃತ್ವದಲ್ಲಿ ನಡೆದ ವಚನ ಚಳವಳಿ ಯಲ್ಲಿ ಮಹಿಳೆಯರೂ ಪಾಲ್ಗೊಂಡಿದ್ದರು. ವಿಜಯಪುರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರು ಬಸವಣ್ಣನವರ ವಿರುದ್ಧ ಹಗುರವಾಗಿ ಮಾತನಾಡುವ ಮೂಲಕ ಅವರಿಗಷ್ಟೇ ಅಲ್ಲ, ಮಹಿಳೆಯರಿಗೂ ಅಪಮಾನ ಮಾಡಿದ್ದಾರೆ. ಅವರು ಕೂಡಲೇ ಕ್ಷಮೆ ಯಾಚಿಸಬೇಕು ಎಂದು ಬಸವ ಸೇವಾ ಪ್ರತಿಷ್ಠಾನದ ಅಕ್ಕ ಗಂಗಾಂಬಿಕೆ ಒತ್ತಾಯಿಸಿದ್ದಾರೆ.

ಇಲ್ಲಿ ಏರ್ಪಡಿಸಿದ್ದ ಶರಣ ಸಂಸ್ಕೃತಿ ಉತ್ಸವದಲ್ಲಿ ಮಾತನಾಡಿದ ಅವರು, ಬಸವಣ್ಣನವರ ಚರಿತ್ರೆ, ಸಿದ್ಧಾಂತ ಯತ್ನಾಳ ಅವರಿಗೆ ಸರಿಯಾಗಿ ಗೊತ್ತಿಲ್ಲದಿರುವುದು ವಿಷಾದನೀಯ ಸಂಗತಿ. ಬಸವಣ್ಣನವರ ಬಗ್ಗೆ ಅವರು ಆಡಿರುವ ಮಾತುಗಳು ಖಂಡನಾರ್ಹ. ಅವರ ವರ್ತನೆ ಮೂರ್ಖರ ರೀತಿಯಿದೆ' ಎಂದು ಹೇಳಿದ್ದಾರೆ.

# ಸಿಎಂಗೆ ಕುಲಾಧಿಪತಿ ಹುದ್ದೆ ನೀಡಬೇಡಿ

• ಉದಯವಾಹಿನಿ ಚಿತ್ರದುರ್ಗ

ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕುಲಾಧಿಪತಿ ಹುದ್ದೆಯನ್ನು ರಾಜ್ಯಪಾಲರ ಬದಲು ಮುಖ್ಯಮಂತ್ರಿಗೆ ನೀಡುತ್ತಿರುವ ಸರ್ಕಾರದ ನಡೆಯನ್ನು ಖಂಡಿಸಿ ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ಜಿಲ್ಲಾ ಘಟಕ ಪ್ರತಿಭಟನೆ ನಡೆಸಿತು.

ನಗರದ ಒನಕೆ ಓಬವ್ವ ವೃತ್ತದಲ್ಲಿ ಜಮಾಯಿಸಿದ ಪ್ರತಿಭಟನಾಕರರು, ವಿಶ್ವವಿದ್ಯಾಲಯಗಳು ಶಿಕ್ಷಣದ ಭಾಗವಾಗಬೇಕೇ ಹೊರತು ರಾಜಕಾರಣದ ಕೇಂದ್ರವಾಗಬಾರದು ಎಂಬ ಉದ್ದೇಶದಿಂದ ಕುಲಾಧಿಪತಿ ಹುದ್ದೆ ರಾಜ್ಯಪಾಲರ ಬಳಿ ಇರುತ್ತದೆ. ಆದರೆ, ಸಂಪುಟ ಸಭೆಯಲ್ಲಿ ಕುಲಾಧಿಪತಿ ಅಧಿಕಾರವನ್ನು ರಾಜ್ಯಪಾಲರಿಂದ ಮುಖ್ಯಮಂತ್ರಿ ಅವರಿಗೆ ನೀಡಲು ಕೈಗೊಂಡಿರುವ ನಿರ್ಧಾರವನ್ನು ಕೂಡಲೇ ಕೈಬಿಡಬೇಕು' ಎಂದು ಆಗ್ರಹಿಸಿದರು. ವಿಭಾಗ ಸಹ ಸಂಚಾಲಕ ಗೋಪಿ, ಜಿಲ್ಲಾ ಸಂಚಾಲಕರಾದ ಕನಕರಾಜ್ ಕೋಡಿಹಳ್ಳಿ, ನಗರ ಸಹ ಕಾರ್ಯದರ್ಶಿ ಸಂಜಯ್, ಚಂದನ, ಜಿಲ್ಲಾ ಸಾಮಾಜಿಕ ಜಾಲತಾಣದ ಆದರ್ಶ, ಕಾರ್ಯಕರ್ತರಾದ ತಿಪ್ಪೇಶ್, ರಾಜು, ಧನಂಜಯ್, ಶ್ರೇಯಸ್, ಜೀವನ್, ಸಂಜು, ರಘು ಇದ್ದರು.



ಉದಯವಾಹಿನಿ ಚಿತ್ರ

# ತಂದೆ ತಾಯಿ ಸ್ಮರಣಾರ್ಥವಾಗಿ ಪತ್ರಕರ್ತ ಮಿತ್ರರಿಗೆ ಹೆಲ್ಮೆಟ್ ವಿತರಣೆ

• ಉದಯವಾಹಿನಿ, ಸಿಂಧನೂರು

ಬೈಕ್ ಸಂಚರಿಸುವ ಪ್ರತಿಯೊಬ್ಬರೂ ಜೀವ ಉಳಿಸಿಕೊಳ್ಳುವ ನಿಟ್ಟಿನಲ್ಲಿ ಹೆಲ್ಮೆಟ್ ಕಡ್ಡಾಯವಾಗಿ ಪಾಲಿಸಬೇಕು ಎಂದು ಡಿವೈಎಸ್ಪಿ ಬಿ.ಎಸ್.ಅವರು ತಳವಾರ ಹೇಳಿದರು.

ನಗರದ ಪಿಡಬ್ಲ್ಯುಡಿ ಕ್ಯಾಂಪ್‌ನ ನೀರಾವರಿ ಇಲಾಖೆಯ ಅವರಣದಲ್ಲಿರುವ ಅಮರಶ್ರೀ ಆಲದ ಮರದ ಹತ್ತಿರ ಪರಿಸರ ರಾಜ್ಯ ಪ್ರಶಸ್ತಿ ಪುರಸ್ಕೃತರು, ವನಸಿರಿ ಪೌಂಡೇಷನ್ ಸಂಸ್ಥಾಪಕ ಅಧ್ಯಕ್ಷ ಅಮರೇಗೌಡ ಮಲ್ಲಾಪೂರ ಅವರು ತಂದೆ ತಾಯಿಯರ ಸವಿನೆನಪಿಗಾಗಿ ಸಿಂಧನೂರಿನ ಎಲ್ಲಾ ಪತ್ರಕರ್ತ ಸ್ನೇಹಿತರಿಗೆ ಜೀವ ರಕ್ಷಕ ಹೆಲ್ಮೆಟ್ ವಿತರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು ಬೈಕ್ ಸಂಚರಿಸುವ ಪ್ರಯಾಣಿಕರು ಪ್ರತಿಯೊಬ್ಬರೂ ಜೀವ ಉಳಿಸಿಕೊಳ್ಳುವ ನಿಟ್ಟಿನಲ್ಲಿ ಹೆಲ್ಮೆಟ್ ಕಡ್ಡಾಯವಾಗಿ ಪಾಲಿಸಬೇಕು ಎಂದು ಅವರು ಹೇಳಿದರು. ಡಿವೈಎಸ್ಪಿ ಬಿ ಎಸ್ ತಳವಾರ, ಸಂಚಾರಿ ಪೊಲೀಸ್ ಠಾಣೆಯ ಪಿಎಸ್‌ಐ ವೆಂಕಟೇಶ ಚವಾಣ್, ಮಾಜಿ ಜಿಲ್ಲಾ ಪಂಚಾಯತಿ ಸದಸ್ಯರು ಶಿವನಗೌಡ ಗೊರೆಬಾಳ, ಭೀಮಣ್ಣ ಬೆಳಗುರ್ಕಿ, ಸಂತೋಷ ಅಂಗಡಿ, ಸಿದ್ದನಗೌಡ ಗೋನ್ವರ್, ಗಿರಿ ಸ್ವಾಮಿ ಹೆಡಿಗಿನಾಳ, ವೀರಭದ್ರಯ್ಯ ಸ್ವಾಮಿ ತಿಮ್ಮಾಪುರ, ರಾಜು ಪತ್ತಾರ, ಮುದಿಯಪ್ಪ ಹೊಸಳ್ಳಿ ಕ್ಯಾಂಪ್, ಚಂದ್ರಶೇಖರ ಪವಾಡಶೆಟ್ಟಿ, ಶರಣಬಸವ ಅರಳಳ್ಳಿ, ಸಾಮಾಜಿಕ ಜಾಲತಾಣದ ಅಧ್ಯಕ್ಷ ಚನ್ನಪ್ಪ ಕೆ ಹೊಸಹಳ್ಳಿ ಹಾಗೂ ಎಲ್ಲಾ ಪತ್ರಕರ್ತ ಮಿತ್ರರು ಇದ್ದರು.


ಉದಯವಾಹಿನಿ ಚಿತ್ರ

**ಜೀವ ಉಳಿಸಿಕೊಳ್ಳಲು ಹೆಲ್ಮೆಟ್ ಕಡ್ಡಾಯ**

# ಅಧಿವೇಶನದಲ್ಲಿ ಆಡಳಿತಾತ್ಮಕ ಸಮಸ್ಯೆಗಳನ್ನು ಗಮನಕ್ಕೆ ತರಲಾಗುತ್ತದೆ

• ಉದಯವಾಹಿನಿ, ಮುದ್ದೇಬಿಹಾಳ

ಸ್ಥಳೀಯ ಸಂಸ್ಥೆಗಳಲ್ಲಿ ಆಡಳಿತಾತ್ಮಕವಾದ ಯಾವುದೇ ಸಮಸ್ಯೆ ಇದ್ದರೂ, ನನ್ನ ಗಮನಕ್ಕೆ ತನ್ನಿ ಅದನ್ನು ಚಳಿಗಾಲದ ಅಧಿವೇಶನದಲ್ಲಿ ಸರ್ಕಾರದ ಗಮನ ಸೆಳೆದು ಪರಿಹರಿಸಲಾಗುವುದು' ಎಂದು ವಿಧಾನ ಪರಿಷತ್ ಸದಸ್ಯ ಸುನೀಲಗೌಡ ಪಾಟೀಲ ಹೇಳಿದರು . ಪಟ್ಟಣದ ಎಪಿಎಂಸಿ ಸಭಾ ಭವನದಲ್ಲಿ ಆಡಳಿತಾತ್ಮಕ ಅಹವಾಲು ಸ್ವೀಕಾರ ಸಭೆಯನ್ನು ಉದ್ದೇಶಿಸಿ ಮಾತನಾಡಿದರು.

ಕೇರಳ ಮಾದರಿಯಲ್ಲಿ ಗ್ರಾಮ ಪಂಚಾಯಿತಿ ಸದಸ್ಯರಿಗೆ ಗೌರವಧನ, ಉತ್ತರಪ್ರದೇಶ ಮಾದರಿಯಲ್ಲಿ ಜಲಜೀವನ್ ಯೋಜನೆಗೆ ಸರ್ಕಾರವೇ ಹಣ ಭರಿಸುವಂತೆ ಮಾಡಲಾಗಿದೆ ಅಂತಯೇ ನಮ್ಮ ರಾಜ್ಯದ ಸದಸ್ಯರಿಗೆ ಎಲ್ಲಾ ಸೌಲಭ್ಯ ಕೊಡಿಸುವ ನಿಟ್ಟಿನಲ್ಲಿ ಹೋರಾಟ ನಿರಂತರವಾಗಿರುತ್ತದೆ' ನಿಮ್ಮ ಯಾವುದೇ ಆಡಿಳಿತಾತ್ಮಕ ಸಮಸ್ಯೆಗಳಿದ್ದರೆ ವಾಟ್ಸಪ್ ನಂಬರ್ ( 76191287771 ) ಗೆ ಲಿಖಿತ ರೂಪದಲ್ಲಿ ಸಮಸ್ಯೆ ಬರೆದು ಕಳಿಸಲು ತಿಳಿಸಿದರು. ವಿವಿಧ ಗ್ರಾಪಂ ಸೇರಿದಂತೆ ಪುರಸಭೆ ಸದಸ್ಯರು ವಿಧಾನ ಪರಿಷತ್ ಸದಸ್ಯ ಸುನಿಲಗೌಡ ಪಾಟೀಲ್ ಅವರಿಗೆ ಸಲ್ಲಿಸಿದರು ಈ ವೇಳೆ ತಾಳಿಕೋಟೆ ಪುರಸಭೆ ಸದಸ್ಯರು ಸಭೆಯಲ್ಲಿ ಕೇವಲ ಪಂಚಾಯತ ಸದಸ್ಯರ ಸಮಸ್ಯೆ ಬಗೆ ಚರ್ಚಿಸಿದಿರಿ ಆದರೆ ಪುರಸಭೆ ಸದಸ್ಯರ ಅಧ್ಯಕ್ಷರ ಸಮಸ್ಯೆ ಕೇಳಲ್ಲಿಲ್ಲವೆಂದು ಸುನಿಲಗೌಡರಿಗೆ ಕೇಳಿದಾಗ ಮಧ್ಯೆ ಪ್ರವೇಶಿಸಿದ ಶಾಸಕ ನಾಡಗೌಡರು ಪುರಸಭೆ ಸೇರಿದಂತೆ ಎಲ್ಲರ ಸಮಸ್ಯೆಗಳನ್ನು ಸಹ ಅಧಿವೇಶನದಲ್ಲಿ ಚರ್ಚಿಸಲಾಗುತ್ತದೆ ಎಂದು ಪರಿಸ್ಥಿತಿ ತಿಳಿಗೂಳಿಸಿದರು.


ಉದಯವಾಹಿನಿ ಚಿತ್ರ

ಸಭೆಯಲ್ಲಿ ಪುರಸಭೆ ಅಧ್ಯಕ್ಷ ಮಹಿಬೂಬ ಗೊಳಸಂಗಿ ಉಪಾಧ್ಯಕ್ಷೆ ಪ್ರೀತಿ ದೇಗಿನಾಳ, ನಾಲತವಾಡ ಪಟ್ಟಣ ಪಂಚಾಯತ ಉಪಾಧ್ಯಕ್ಷ ಬಸವರಾಜ ಗಡ್ಡಿ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಗುರು ತಾರನಾಳ, ಮಹಿಬೂಬ ಚೋರಗಸ್ತಿ ಕಾಂಗ್ರೆಸ್ ಮಹಿಳಾ ಘಟಕದ ಶೋಭಾ ಶೆಳ್ಳಿಗಿ ಕಸಾಪ ಅಧ್ಯಕ್ಷ ಕಾಮರಾಜ ಬಿರಾದಾರ, ಗ್ಯಾರಂಟಿ ಯೋಜನೆ ತಾಲ್ಲೂಕ ಅಧ್ಯಕ್ಷ ಶಿವಶಂಕರಗೌಡ ಹಿರೇಗೌಡರ, ಪಿಎಲ್ಡಿ ಬ್ಯಾಂಕ್ ಅಧ್ಯಕ್ಷ ಬಿ ಕೆ ಬಿರಾದಾರ, ತಾಪಂ ಇಒ ನಿಂಗಪ್ಪ ಮಸಳಿ ಬಾಪುಗೌಡ ದೇಸಾಯಿ ಸೇರಿದಂತೆ ಎಲ್ಲಾ ಗ್ರಾಪಂ ಸದಸ್ಯರು ಪಿಡಿಓಗಳು ಸಭೆಯಲ್ಲಿ ಭಾಗವಹಿಸಿದ್ದರು.

> 1973/74 ರಲ್ಲಿ ಸಂವಿಧಾನ ತಿದ್ದುಪಡಿ ನಂತರ ಪಂಚಾಯತ ಹಾಗೂ ಸ್ಥಳೀಯ ಸಂಸ್ಥೆಗಳಿಗೆ ಅಧಿಕಾರ ವಹಿಸಿಕೊಳ್ಳುವಂತೆ ಮಾಡಿದ್ದು ಅಂದಿನ ಪ್ರಧಾನಿ ರಾಜೀವ್ ಗಾಂಧಿಜೀ ಅವರು ಇಂದಿಗೂ ಜನರಿಗೆ ಮಾಹಿತಿಯ ಕೊರತೆ ಇದೆ ಪಂಚಾಯತಿ ಮಟ್ಟದ ಯಾವುದೇ ಮೂಲಭೂತ ಸಮಸ್ಯೆಗಳು ಇದ್ದರೆ ಅದನ್ನು ಪಿಡಿಒ ಅಥವಾ ಅಧ್ಯಕ್ಷರ ಗಮನಕ್ಕೆ ತರಬೇಕು ಅದಕ್ಕೂ ನಮಗೆ ಫೋನ್ ಮಾಡಿ ಕೇಳ್ತಿರಾ? ನಾವು ಪಿಡಿಒ ಅವರಿಗೆ ಫೋನ್ ಮಾಡಬೇಕು ಅಂದರೆ ಅವರು ಮೂರು ನಂಬರ್ ಇಟ್ಟಿದ್ದಾರೆ ಯಾವ ನಂಬರ್ ಗೆ ಸಿಗ್ತಾರೆ ತಿಳಿಯುವುದಿಲ್ಲ ಪಂಚಾಯತಿಯ ಅಧ್ಯಕ್ಷರು ಸದಸ್ಯರು ಪಂಚಾಯತಿ ಪ್ರಪಂಚ ಪುಸ್ತಕ ತರಿಸಿಕೊಂಡು ಓದಿ ಅದರಲ್ಲಿ ಸಂಪೂರ್ಣ ಮಾಹಿತಿ ಯಾವ ರೀತಿಯ ಅಧಿಕಾರ ಮಾಡಬೇಕು ಇಲಾಖಾವಾರು ಸೌಲಭ್ಯಗಳನ್ನು ಹೇಗೆ ಪಡೆಯಬೇಕು ಇದೆ ಗ್ರಾಪಂ ಅಧ್ಯಕ್ಷರು ಸಾಮಾನ್ಯ ಸಭೆ ಕಡ್ಡಾಯವಾಗಿ ಮಾಡಬೇಕು ಮಾಡದೆ ಇದ್ರೆ ಅವರಿಗೆ ಪಿಡಿಒ 1 ಸಾವಿರ ವಸೂಲಿ ಮಾಡಬಹುದು -ಸಿ.ಎಸ್ ನಾಡಗೌಡ, ಕೆಎಸ್‌ಡಿ ನಿಗಮ ಅಧ್ಯಕ್ಷ ಶಾಸಕ

# 15 ದಿನಗಳ ಬಳಿಕ ಮನೆ ಸೇರಿದ ಪೀತುಬೈಲು ನಿವಾಸಿಗಳು

• ಉದಯವಾಹಿನಿ, ಹೆಬ್ರಿ

ನಕ್ಸಲ್ ನಾಯಕ ಕೂಡ್ಲು ವಿಕ್ರಂ ಗೌಡನ ಎನ್‌ಕೌಂಟರ್‌ಗೂ ಮುನ್ನ ಮನೆ ಖಾಲಿ ಮಾಡಿದ್ದ ನಾಡಾಲಿನ ಪೀತುಬೈಲಿನ ಮೂರು ಮಲೆಕುಡಿಯ ಕುಟುಂಬಗಳು ಮತ್ತೆ ಮನೆ ಸೇರಿವೆ. ನಕ್ಸಲ್ ನಿಗ್ರಹ ಪಡೆಯ ಭದ್ರತೆಯೊಂದಿಗೆ ಅವರು ಮನೆಗೆ ಮರಳಿದ್ದಾರೆ ಎಂದು ಮೂಲಗಳು ತಿಳಿಸಿವೆ. ಪೀತುಬೈಲಿನ ನಾರಾಯಣ ಗೌಡ, ಜಯಂತ್ ಗೌಡ ಹಾಗೂ ಸುಧಾಕರ ಗೌಡ ಎಂಬ ಮೂವರು ಸಹೋದರರ ಕುಟುಂಬದವರು ಈ ಮನೆಗಳಲ್ಲಿ ವಾಸವಿದ್ದಾರೆ. ವಿಕ್ರಂ ಗೌಡನ ಎನ್‌ಕೌಂಟರ್ ನವೆಂಬರ್ 18ರಂದು ನಡೆದಿತ್ತು. 15 ದಿನಗಳಿಂದ ಈ ಮನೆಗಳು ಖಾಲಿಯಾಗಿದ್ದವು. ಅನೇಕ ದಿನ ಸಾಕುಪ್ರಾಣಿಗಳು ಉಪವಾಸವಿದ್ದವು. ನಂತರ ದಿನಗಳಲ್ಲಿ ಎಎನ್‌ಎಫ್‌ನವರು ಸಾಕು ಪ್ರಾಣಿಗಳಿಗೆ ಆಹಾರ ನೀಡುತ್ತಿದ್ದರು. ಈ ಕುಟುಂಬಗಳವರು ಸಂಬಂಧಿಕರ ಮನೆಯಲ್ಲಿ ವಾಸ್ತವ್ಯ ಹೂಡಿದ್ದರು.

**ಎಎನ್‌ಎಫ್ ಭದ್ರತೆ:** ಮಲೆಕುಡಿಯ ಸಮುದಾಯದ ಮುಖಂಡರ ಒತ್ತಾಯದಂತೆ ಮೂರು ತಿಂಗಳ ಕಾಲ ಎಎನ್‌ಎಫ್ ಪೊಲೀಸರು ಎನ್‌ಕೌಂಟರ್ ನಡೆದ ಜಯಂತ ಗೌಡ ಅವರ ಮನೆ ಸುತ್ತಮುತ್ತ ಭದ್ರತೆ ಒದಗಿಸಲಿದ್ದಾರೆ. ನಕ್ಸಲ್ ನಾಯಕನಾಗಿದ್ದ ವಿಕ್ರಂ ಗೌಡನಿಗೆ ಅವನ ತಂಡದವರು ಸ್ಥಳಕ್ಕೆ ಬಂದು ಶ್ರದ್ಧಾಂಜಲಿ ಸಲ್ಲಿಸುವುದು, ಮೃತನ ಪ್ರತಿಮೆ ನಿರ್ಮಾಣ, ನಕ್ಸಲ್ ಹುತಾತ್ಮರ ದಿನಾಚರಣೆ ಮಾಡುವುದು ಹೀಗೆ ನಕ್ಸಲ್ ಸಂಘಟನೆಯ ಚಟುವಟಿಕೆ ನಡೆಯಬಹುದು ಎಂದು ಸ್ಥಳದಲ್ಲಿ ಬಿಗಿ ಭದ್ರತೆ ಇದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ನಕ್ಸಲರು ಹುತಾತ್ಮರ ದಿನವನ್ನು ಆಚರಿಸುವುದು ಸಾಮಾನ್ಯ.

# ಬಾಣಂತಿಯರ ಸಾವು ಪ್ರಕರಣ: ಐವಿ ದ್ರಾವಣ ಗುಣಮಟ್ಟದ ಪರೀಕ್ಷೆ ಬೆಂಗಳೂರಿಗೆ

## ಜಿಲ್ಲೆಗೆ ಪೂರೈಸಿದ ಐವಿ ದ್ರಾವಣದ ಗುಣಮಟ್ಟದ ಪರಿಶೀಲನೆಗೆ ಧಾರವಾಡ ಜಿಲ್ಲಾ ಔಷಧ ನಿಯಂತ್ರಣ ಘಟಕವೂ ಮುಂದು

• ಉದಯವಾಹಿನಿ, ಹುಬ್ಬಳ್ಳಿ

ಬಳ್ಳಾರಿಯಲ್ಲಿ ಬಾಣಂತಿಯರ ಸಾವಿಗೆ ಕಾರಣವಾಗಿದೆ ಎನ್ನಲಾದ ಪಶ್ಚಿಮ ಬಂಗಾಳ ಫಾರ್ಮಸ್ಯುಟಿಕಲ್ ಕಂಪನಿ ಧಾರವಾಡ ಜಿಲ್ಲೆಗೆ ಪೂರೈಸಿದ ಐವಿ ದ್ರಾವಣದ ಗುಣಮಟ್ಟದ ಪರಿಶೀಲನೆಗೆ ಧಾರವಾಡ ಜಿಲ್ಲಾ ಔಷಧ ನಿಯಂತ್ರಣ ಘಟಕವೂ ಮುಂದಾಗಿದೆ.

ಈಗಾಗಲೇ ದ್ರಾವಣದ ಮಾದರಿ ಸಂಗ್ರಹಿಸಿ ಬೆಂಗಳೂರು ಪ್ರಯೋಗಾಲಯಕ್ಕೆ ಕಳುಹಿಸಿದೆ. ಧಾರವಾಡ ಜಿಲ್ಲಾಸ್ಪತ್ರೆ ಸೇರಿದಂತೆ ತಾಲ್ಲೂಕು ಆಸ್ಪತ್ರೆಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ಪಾಲಿಕೆಯ ಚಿಟಗುಪ್ಪಿ ಆಸ್ಪತ್ರೆ ಇದೇ ಕಂಪನಿ ಪೂರೈಸಿದ ಐವಿ ದ್ರಾವಣವನ್ನು ರೋಗಿಗಳಿಗೆ ಬಳಸುತ್ತಿದ್ದವು.

ಬಳ್ಳಾರಿಯಲ್ಲಿ ಪ್ರಕರಣ ಬೆಳಕಿಗೆ ಬರುತ್ತಿದ್ದಂತೆ ರಾಜ್ಯದಾದ್ಯಂತ ಆ ಕಂಪನಿಯ ಐವಿ ದ್ರಾವಣ ಬಳಕೆಗೆ ಸರ್ಕಾರ ನಿಷೇಧ ಹೇರಿದೆ. ಇದೀಗ ಪರ್ಯಾಯವಾಗಿ ಬೇರೆ ಕಂಪನಿಯ ದ್ರಾವಣ ಬಳಸಲಾಗುತ್ತಿದೆ. ಸರ್ಕಾರಿ ಆಸ್ಪತ್ರೆಗಳಿಗೆ ಪೂರೈಕೆಯಾದ ದ್ರಾವಣದ ಮಾದರಿಯನ್ನು ಜಿಲ್ಲಾ ಆರೋಗ್ಯ ಇಲಾಖೆ ಮತ್ತು ಔಷಧ ನಿಯಂತ್ರಣ ಘಟಕ ಸಂಗ್ರಹಿಸಿ ಪ್ರಯೋಗಾಲಯಕ್ಕೆ ಕಳುಹಿಸಿದೆ.

> ಸಾರಂಗಿ 'ಧಾರವಾಡ ಜಿಲ್ಲೆಗೆ ಕಳಪೆ ಗುಣಮಟ್ಟದ ದ್ರಾವಣ ಪೂರೈಕೆಯಾದ ಬಗ್ಗೆ ಯಾವುದೇ ಮಾಹಿತಿಯಿಲ್ಲ. ಆದರೂ ಪಶ್ಚಿಮ ಬಂಗಾಳ ಫಾರ್ಮಸ್ಯಾಟಿಕ್ ಕಂಪನಿ ಪೂರೈಸಿರುವ ಐವಿ ದ್ರಾವಣದ ಮಾದರಿ ಸಂಗ್ರಹಿಸಿ ಬೆಂಗಳೂರಿನ ಪ್ರಯೋಗಾಲಯಕ್ಕೆ ಕಳುಹಿಸಲಾಗಿದೆ. ಧಾರವಾಡ ಜಿಲ್ಲೆಯ ಸರ್ಕಾರಿ ಆಸ್ಪತ್ರೆಯಲ್ಲಿ ರೋಗಿಗಳಿಗೆ ಆ ದ್ರಾವಣ ಬಳಸಿದ್ದರಿಂದ ಮೃತಪಟ್ಟಿರುವ ಕುರಿತು ಯಾವುದೇ ಪ್ರಕರಣ ದಾಖಲಾಗಿಲ್ಲ. ಸರ್ಕಾರದ ಆದೇಶದಂತೆ ಅಗತ್ಯ ಕ್ರಮ ಕೈಗೊಳ್ಳಲಾಗಿದೆ' ಎಂದು ಧಾರವಾಡ ಜಿಲ್ಲಾ ಔಷಧ ನಿಯಂತ್ರಣ ಘಟಕದ ಉಪ ನಿಯಂತ್ರಕ ಬಸವರಾಜ ಸಾರಂಗಿ ತಿಳಿಸಿದರು.


ಉದಯವಾಹಿನಿ ಚಿತ್ರ

ಕಳೆದ ಎರಡು ತಿಂಗಳಲ್ಲಿ ಸರ್ಕಾರಿ ಆಸ್ಪತ್ರೆಯಲ್ಲಿ ಒಳರೋಗಿಯಾಗಿ ದಾಖಲಾಗಿ ಮೃತಪಟ್ಟವರ ಮಾಹಿತಿಯನ್ನು ಆರೋಗ್ಯ ಇಲಾಖೆ ಸಂಗ್ರಹಿಸುತ್ತಿದೆ. ಯಾವ ಕಾರಣಕ್ಕೆ ಮೃತಪಟ್ಟಿದ್ದಾರೆ ಎನ್ನುವ ನಿಖರ ಮಾಹಿತಿಯನ್ನು ದಾಖಲೆ ಸಮೇತ ನೀಡುವಂತೆ ಆಸ್ಪತ್ರೆಯ ವೈದ್ಯಾಧಿಕಾರಿಗಳಿಗೆ ಸೂಚಿಸಿದ್ದಾರೆ. ಮೃತಪಟ್ಟ ಬಾಣಂತಿಯರ ಹಾಗೂ ಗರ್ಭಿಣಿಯರ ಮಾಹಿತಿ ಸ್ಪಷ್ಟವಾಗಿ ನೀಡಬೇಕೆಂದು ಮೇಲಧಿಕಾರಿಗಳು ಹೇಳಿರುವುದಾಗಿ' ಆಸ್ಪತ್ರೆ ಮೂಲಗಳು ತಿಳಿಸಿವೆ.

ಸರ್ಕಾರದ ಆದೇಶದಂತೆ ಪಶ್ಚಿಮ ಬಂಗಾಳ ಫಾರ್ಮಸ್ಯುಟಿಕಲ್ ಕಂಪನಿ ಪೂರೈಕೆ ಮಾಡಿರುವ ಐವಿ ದ್ರಾವಣವನ್ನು ರೋಗಿಗಳಿಗೆ, ಬಾಣಂತಿಯರಿಗೆ ಹಾಗೂ ಗರ್ಭಿಣಿಯರಿಗೆ ನೀಡುವುದನ್ನು ಬಂದ್ ಮಾಡಿದ್ದೇವೆ. ಆಸ್ಪತ್ರೆಗಳಿಗೆ ಪೂರೈಕೆಯಾದ ಆ ಎಲ್ಲಾ ದ್ರಾವಣಗಳನ್ನು ವಾಪಸ್ ತರಸಿಕೊಳ್ಳಲಾಗುತ್ತಿದೆ' ಎಂದು ಜಿಲ್ಲಾ ಆರೋಗ್ಯಾಧಿಕಾರಿ ಡಾ. ಶಶಿ ಪಾಟೀಲ ತಿಳಿಸಿದರು. 'ಸರ್ಕಾರವೇ ಟೆಂಡರ್ ಕರೆದು ಸರ್ಕಾರಿ ಆಸ್ಪತ್ರೆಗಳಿಗೆ ಪೂರೈಕೆ ಮಾಡಿದ ದ್ರಾವಣ ಅದಾಗಿದೆ. ನಮ್ಮದು ಸ್ವಾಯತ್ತ ಸಂಸ್ಥೆಯಾಗಿರುವುದರಿಂದ ಪ್ರತ್ಯೇಕ ಕಂಪನಿಯಿಂದ ನಾವು ಟೆಂಡರ್ ಮಾಡಿಕೊಂಡಿದ್ದೇವೆ. ಅಗತ್ಯವಿದ್ಯಾಗ ಮಾತ್ರ ಜಿಲ್ಲಾ ಆರೋಗ್ಯ ಇಲಾಖೆಯಿಂದ ಜಿಲ್ಲಾ ಆಸ್ಪತ್ರೆಗೆ ಪೂರೈಕೆಯಾಗಿರುವ ದ್ರಾವಣವನ್ನು ಪಡೆಯುತ್ತೇವೆ. ಸೆಪ್ಟೆಂಬರ್ ತಿಂಗಳಲ್ಲಿ 3,000 ಬಾಟಲ್ ದ್ರಾವಣ ಪಡೆಯಲಾಗಿತ್ತು' ಎಂದು ಕೆಎಂಸಿ- ಆರ್‌ಐ ನಿರ್ದೇಶಕ ಎಸ್. ಎಫ್ ಕಮ್ಮಾರ್ ತಿಳಿಸಿದರು.

### ದ್ರಾವಣ ಬಳಸದಂತೆ ವಿಭಾಗದ ಮುಖ್ಯಸ್ಥರಿಗೆ ಸೂಚನೆ

ಗರ್ಭಿಣಿಯರಿಗೆ, ಬಾಣಂತಿಯರಿಗೆ ಮಾತ್ರ ಆ ದ್ರಾವಣ ನೀಡುವುದಿಲ್ಲ. ಅಗತ್ಯವಿದ್ದಾಗ ಎಲ್ಲಾ ರೋಗಿಗಳಿಗೂ ನೀಡಲಾಗುತ್ತದೆ. ಜಿಲ್ಲಾಸ್ಪತ್ರೆಯಿಂದ ತರಸಿಕೊಂಡಿರುವ ದ್ರಾವಣವನ್ನು ಕೆಎಂಸಿ-ಆರ್‌ಐನ ವಿವಿಧ ವಿಭಾಗಳಿಗೆ ಪೂರೈಕೆ ಮಾಡಲಾಗಿದೆ. ಅದನ್ನು ಬಳಸದಂತೆ ಈಗಾಗಲೇ ವಿಭಾಗದ ಮುಖ್ಯಸ್ಥರಿಗೆ ಸೂಚನೆ ನೀಡಲಾಗಿದೆ. ಆದರೂ ವಿಶೇಷ ತಂಡ ರಚಿಸಿ, ಪರಿಶೀಲನೆ ನಡೆಸಲಾಗುತ್ತಿದೆ. ಆ ದ್ರಾವಣ ಬಳಸಿ ಮೃತಪಟ್ಟ ಪ್ರಕರಣ ನಮ್ಮಲ್ಲಿ ದಾಖಲಾಗಿಲ್ಲ' ಎಂದು ಅವರು ಹೇಳಿದರು. ಅಗತ್ಯ ಕ್ರಮ ಕೈಗೊಳ್ಳಲಾಗಿದೆ.


**ಐವಿ ದ್ರಾವಣ ಬಳಕೆಗೆ ಸರ್ಕಾರ ನಿಷೇಧ**

# ಇಸ್ಕಾನ್ ಸಂತರ ಪರವಾಗಿ ವಾದ ಮಂಡಿಸಲು ಯಾವ ವಕೀಲರೂ ಇಲ್ಲ

## ಇಸ್ಲಾಮಿಸ್ಟ್ ಅಟ್ಟಹಾಸ, ಇಸ್ಕಾನ್ ಪರ ವಾದ ಮಂಡಿಸಲು ಸಜ್ಜಾಗಿದ್ದ ವಕೀಲನ ಮೇಲೆ ಮಾರಣಾಂತಿಕ ಹಲ್ಲೆ

**ಢಾಕಾ:** ರಾಜಕೀಯ ಅರಾಜಕತೆಯನ್ನು ಎದುರಿಸುತ್ತಿರುವ ಬಾಂಗ್ಲಾದೇಶದಲ್ಲಿ, ಇಸ್ಲಾಮಿಸ್ಟ್ ಅಟ್ಟಹಾಸ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದೆ. ಬಂಧಿತರಾಗಿರುವ ಇಸ್ಕಾನ್ ಸಂತ ಚಿನ್ಮಯ ಕೃಷ್ಣದಾಸ ಬ್ರಹ್ಮಚಾರಿ ಪರ ವಾದ ಮಂಡಿಸಲು ಮುಂದಾಗಿದ್ದ ವಕೀಲರೊಬ್ಬರ ಮೇಲೆ, ಮಾರಣಾಂತಿಕ ಹಲ್ಲೆ ನಡೆದಿದೆ. ಇಸ್ಕಾನ್ ಪರ ವಾದ ಮಂಡಿಸಲು ಮುಂದಾಗಿದ್ದ ಸುಮಾರು 70 ಹಿಂದೂ ವಕೀಲರ ಮೇಲೆ, ಸುಳ್ಳು ದಾಖಲೆಗಳನ್ನು ಹಾಕುವ ಮೂಲಕ, ನ್ಯಾಯಾಲಯಕ್ಕೆ ಹಾಜರಾಗದಂತೆ ಮಾಡಲಾಗಿದೆ ಎಂದು ಚಿನ್ಮಯ ಕೃಷ್ಣದಾಸ ಆರೋಪಿಸಿದ್ದಾರೆ.

ಇಸ್ಕಾನ್ ಸಂತರ ಪರವಾಗಿ ವಾದ ಮಂಡಿಸಲು ಯಾವ ವಕೀಲರೂ ಬರದ ಹಿನ್ನಲೆಯಲ್ಲಿ ಇವರ ಕೇಸಿನ ವಿಚಾರಣೆಯನ್ನು ಮುಂದಿನ ತಿಂಗಳಿಗೆ ಮುಂದೂಡಲಾಗಿದೆ. ಇವರ ಪರವಾಗಿ ವಾದ




**ವಿಚಾರಣೆ 2025ಕ್ಕೆ ಮುಂದೂಡಿಕೆ**

ಮಂಡಿಸಲು ಮುಂದಾಗಿದ್ದ ವಕೀಲರೊಬ್ಬರ ಮೇಲೆ ಮಂಗಳವಾರ ಮಾರಣಾಂತಿಕ ಹಲ್ಲೆ ನಡೆದಿದೆ.

ಇಸ್ಕಾನ್ ಪರ ವಾದ ಮಂಡಿಸಲು ಯಾರೂ ಹಾಜರಾಗದ ಹಿನ್ನಲೆಯಲ್ಲಿ ಚಿತ್ತೋಗ್ರಾಮ ನ್ಯಾಯಾಲಯ, ಮುಂದಿನ ವಿಚಾರಣೆಯನ್ನು ಜನವರಿ 2, 2025ಕ್ಕೆ ಮುಂದೂಡಿದೆ ಎಂದು ಬಾಂಗ್ಲಾದೇಶದ ದೈನಿಕವೊಂದು ವರದಿ ಮಾಡಿದೆ. ಚಿನ್ಮಯ ಕೃಷ್ಣದಾಸ ಬ್ರಹ್ಮಚಾರಿ ಪರ ವಾದ ಮಂಡಿಸಲು ಮುಂದಾಗಿದ್ದ ಹಿಂದೂ ವಕೀಲ ರಮನ್ ರಾಯ್ ಅವರ ಮೇಲೆ ಹಲ್ಲೆ ನಡೆಸಿ, ಮನೆಯನ್ನು ಧ್ವಂಸಗೊಳಿಸಿದ್ದಾರೆ. ಇವರು, ಜೀವನ್ಮರಣ ಹೋರಾಟ ನಡೆಸುತ್ತಿದ್ದಾರೆಂದು ವರದಿಯಾಗಿದೆ. ಆದರೆ, ಇಂತಹ ಯಾವುದೇ ಘಟನೆಗಳು ನಡೆದಿಲ್ಲ ಎಂದು ಬಾಂಗ್ಲಾದ ಕೆಲವು ವಕೀಲರು ವಾದಿಸಿದ್ದಾರೆ. ಕಳೆದ ತಿಂಗಳು ಕೂಡಾ, ಇಸ್ಕಾನ್ ಸಂತರ ಪರವಾಗಿ ವಾದ ಮಂಡಿಸಲು ಮುಂದಾಗಿದ್ದ ವಕೀಲರನ್ನೂ ಹತ್ಯೆಗೈಯಲಾಗಿತ್ತು ಎಂದು ಸಾಮಾಜಿಕ ಜಾಲತಾಣದಲ್ಲಿ ಭಾರೀ ಸುದ್ದಿಯಾಗಿತ್ತು.

**ವಕೀಲರು ನಿರಾಕರಣೆ**

**ರಾಜಕೀಯ ಅರಾಜಕತೆಯಿಂದ ತತ್ತರಿಸಿ ಹೋಗಿರುವ ಬಾಂಗ್ಲಾದೇಶದಲ್ಲಿ ಇಸ್ಕಾನ್ ಸಂತ ಚಿನ್ಮಯ ಕೃಷ್ಣದಾಸ ಬ್ರಹ್ಮಚಾರಿ ಪರ ವಾದ ಮಂಡಿಸಲು ಯಾರೂ ಇಲ್ಲದಂತಾಗಿದೆ. ಇವರ ಪರವಾಗಿ ವಾದ ಮಂಡಿಸಲು ಮುಂದಾಗಿದ್ದ ವಕೀಲರೊಬ್ಬರ ಮೇಲೆ ಮಾರಣಾಂತಿಕ ಹಲ್ಲೆ ಮಾಡಲಾಗಿದೆ ಎಂದು ಆರೋಪಿಸಲಾಗಿದೆ. ಆದರೆ, ಇದನ್ನು ಸ್ಥಳೀಯ ವಕೀಲರು ನಿರಾಕರಿಸಿದ್ದಾರೆ.**

- **ಇಸ್ಕಾನ್ ಸಂತರ ಪರವಾಗಿ ವಾದ ಮಂಡಿಸಲು ಮುಂದಾಗಿದ್ದ ವಕೀಲರನ್ನೂ ಹತ್ಯೆಗೈಯಲಾಗಿತ್ತು**
- **ಬಾಂಗ್ಲಾದೇಶದಲ್ಲಿ ಇಸ್ಕಾನ್ ಸಂತ ಚಿನ್ಮಯ ಕೃಷ್ಣದಾಸ ಬ್ರಹ್ಮಚಾರಿ ಬಂಧನ**

ಬಾಂಗ್ಲಾದೇಶದಲ್ಲಿರುವ ಅಲ್ಪಸಂಖ್ಯಾತರಿಗೆ ಭದ್ರತೆ ನೀಡಬೇಕೆಂದು ಒತ್ತಾಯಿಸಿ, ಹಿಂದೂ ಪರ ಸಂಘಟನೆಗಳು ಭಾರೀ ಪ್ರತಿಭಟನೆಯನ್ನು ನಡೆಸಿದ್ದವು. ಇದರ ಮುಂದಾಳತ್ವವನ್ನು ಚಿನ್ಮಯ ಕೃಷ್ಣದಾಸ ವಹಿಸಿಕೊಂಡಿದ್ದರು. ಇವರ ಮೇಲೆ ದೇಶದ್ರೋಹದ ಆರೋಪವನ್ನು ಹೊರಿಸಿ ಬಂಧಿಸಲಾಗಿದೆ. ನ. 26ಕ್ಕೆ ಇಸ್ಕಾನ್ ಸಂತರ ಜಾಮೀನು ಅರ್ಜಿ ವಜಾಗೊಂಡ ಹಿನ್ನಲೆಯಲ್ಲಿ ಭಾರೀ ಹಿಂಸಾಚಾರ ನಡೆದಿತ್ತು.

ಇದರಲ್ಲಿ, ಸೈಫುಲ್ ಇಸ್ಲಾಂ ಆಲಿಫ್ ಎನ್ನುವ ವಕೀಲ ಮೃತ ಪಟ್ಟಿದ್ದ. ಮೃತ ವ್ಯಕ್ತಿಯ ಸಹೋದರ, 116 ಜನರ ವಿರುದ್ಧ ಕೇಸ್ ದಾಖಲಿಸಿದ್ದ. ಬಾಂಗ್ಲಾದೇಶದಲ್ಲಿ ನಡೆಯುತ್ತಿರುವ ಹಿಂದೂಗಳ ಮೇಲಿನ ಹಲ್ಲೆಗೆ ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ತೀವ್ರ ಕಳವಳ ವ್ಯಕ್ತ ಪಡಿಸಿದ್ದಾರೆ. ವಿಶ್ವ ಸಂಸ್ಥೆಯ ಶಾಂತಿ ಪಾಲನಾ ಪಡೆ, ಅಲ್ಲಿ ನಿಯೋಜನೆಗೆ ಮೋದಿ ಸರ್ಕಾರ ಒತ್ತಾಯಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.

---

# ಟ್ಯಾಕ್ಸ್ ವಿಧಿಸಿದರೆ ಅಮೆರಿಕನ್ನರೂ ಸಹ ತೊಂದರೆ ಅನುಭವಿಸುತ್ತಾರೆ: ಕೆನಡಾ

**ಟೊರೊಂಟೊ:** ಕೆನಡಾದ ಉತ್ಪನ್ನಗಳ ಮೇಲೆ ವ್ಯಾಪಕವಾದ ಸುಂಕಗಳನ್ನು ವಿಧಿಸುವ ಯೋಜನೆಯನ್ನು ಅನುಸರಿಸಿದರೆ ಅಮೆರಿಕನ್ನರು ಸಹ ತೊಂದರೆ ಅನುಭವಿಸುತ್ತಾರೆ ಎಂದು ಪ್ರಧಾನಿ ಜಸ್ಟಿನ್ ಟ್ರುಡೊ ಎಚ್ಚರಿಸಿದ್ದಾರೆ. ವಲಸಿಗರುಮತ್ತು ಡ್ರಕ್ಸ್ ಕೋರರನ್ನು ತಡೆಗಟ್ಟದಿದ್ದರೆ ಕೆನಡಾ ಮತ್ತು ಮೆಕ್ಸಿಕೋದ ಉತ್ಪನ್ನಗಳ ಮೇಲೆ ಸುಂಕವನ್ನು ಹೇರುವುದಾಗಿ ಡೊನಾಲ್ಡ್ ಟ್ರಂಪ್‌ಗೆ ಬೆದರಿಕೆ ಹಾಕಿದ್ದರು.

ಮೆಕ್ಸಿಕೋದಂತೆ ನಮ ಗಡಿ ಸರಕ್ಷಿತವಾಗಿದೆ ಎಂದು ಟ್ರಂಪ್‌ಗೆ ಮನವರಿಕೆ ಮಾಡುವ ಮೂಲಕ ಸುಂಕವನ್ನು ತಪ್ಪಿಸಲು ಟ್ರೂಡೊ ಸಚಿವರ ಸಭೆಯಲ್ಲಿ ವಿನಂತಿಸಿದರು. ಪ್ರಧಾನಿ ಸಹಜವಾಗಿ ಕೆನಡಾದ ಆರ್ಥಿಕತೆ ಮತ್ತು ಕಾರ್ಮಿಕರನ್ನು ಸುಂಕಗಳಿಂದ ರಕ್ಷಿಸುವ ಪ್ರಾಮುಖ್ಯತೆಯ ಬಗ್ಗೆ ಮಾತನಾಡಿದ್ದಾರೆ ಆದರೆ ನಾವು ನಮ ಅಮೇರಿಕನ್ ಸ್ನೇಹಿತರೊಂದಿಗೆ ಆ ಸುಂಕಗಳು ಅವರ ಆರ್ಥಿಕತೆಯ ಮೇಲೆ ಬೀರಬಹುದಾದ ಋಣಾತಕ ಪರಿಣಾಮವನ್ನು



ಚರ್ಚಿಸಿದ್ದೇವೆ ಎಂದು ಸಾರ್ವಜನಿಕ ಸುರಕ್ಷತಾ ಸಚಿವ ಡೊಮಿನಿಕ್ ಲೆಬ್ಲಾಂಕ್ ಹೇಳಿದರು.

ನಾವು ಬರಿಗೈಯಲ್ಲಿ ಹಿಂತಿರುಗಿದ್ದೇವೆ ಎಂಬ ಕಲ್ಪನೆಯು ಸಂಪೂರ್ಣವಾಗಿ ಸುಳ್ಳು . ಟ್ರಂಪ್ ಮತ್ತು ಅವರ ಭವಿಷ್ಯದ ಕ್ಯಾಬಿನೆಟ್ ಕಾರ್ಯದರ್ಶಿಗಳೊಂದಿಗೆ ನಾವು ಬಹಳ ಉತ್ಪಾದಕ ಚರ್ಚೆ ಯನ್ನು ನಡೆಸಿದ್ದೇವೆ. ನಮ್ಮೊಂದಿಗೆ ಕೆಲಸ ಮಾಡುವುದನ್ನು ಮುಂದುವರಿಸಲು ಟ್ರಂಪ್ ಅವರ ಬದ್ಧತೆಯು ದೂರವಿತ್ತು ಎಂದಿದ್ದಾರೆ.

ಪ್ರಸ್ತುತ ಆಹಾರ, ಬಟ್ಟೆ, ವಾಹನಗಳು, ಆಲ್ಕೋಹಾಲ್ ಮತ್ತು ಇತರ ಸರಕುಗಳ ಬೆಲೆಗಳನ್ನು ಹೆಚ್ಚಿಸುವುದರಿಂದ ವೆಚ್ಚಗಳು ಹೆಚ್ಚಾಗಬಹುದು ಅರ್ಥಶಾಸ್ತ್ರಜ್ಞರು ಹೇಳುತ್ತಾರೆ. ಮೆಕ್ಸಿಕನ್ ಗಡಿಗಿಂತ ನಮ ಗಡಿಯು ತುಂಬಾ ವಿಭಿನ್ನವಾಗಿದೆ ಎಂಬ ಸಂದೇಶವನ್ನು ನಿಜವಾಗಿಯೂ ಅರ್ಥಮಾಡಿಕೊಳ್ಳಲಾಗಿದೆ ಎಂದು ಯುಎಸ್‌ಗೆ ಕೆನಡಾದ ರಾಯಭಾರಿ ಕರ್ಸ್ಟನ್ ಹಿಲ್‌ಮನ್ ತಿಳಿಸಿದರು.

> **ಟ್ರುಡೊ ಮತ್ತು ಟ್ರಂಪ್‌ಗೆ ಪಕ್ಕದ ಟೇಬಲ್‌ನಲ್ಲಿ ಕುಳಿತ ಹಿಲ್‌ಮನ್ ಡ್ರಗ್ಸ್ ಮತ್ತು ವಲಸಿಗರಿಗೆ ಕೆನಡಾ ಸಮಸ್ಯೆಯಲ್ಲ ಎಂದು ಹೇಳಿದರು.ಆದರೆ ಮೆಕ್ಸಿಕೋ ಅಧ್ಯಕ್ಷರು ಈ ಹೇಳಿಕೆಯನ್ನು ತಿರಸ್ಕರಿಸಿದೆ ಮೆಕ್ಸಿಕೋವನ್ನು ವಿಶೇಷವಾಗಿ ಅದರ ವ್ಯಾಪಾರ ಪಾಲುದಾರರು ಗೌರವಿಸಬೇಕು**
>
> **-ಕ್ಲೌಡಿಯಾ ಶೀನ್‌ಬಾಮ್ , ಅಧ್ಯಕ್ಷ**

# ತ್ರಿಪುರಾದಲ್ಲಿರುವ ಬಾಂಗ್ಲಾದೇಶೀಯರಿಗೆ ಸೇವೆ ಬಂದ್ ಮಾಡಿದ ಹೋಟೆಲ್‌ಗಳು, ರೆಸ್ಟೋರೆಂಟ್‌ಗಳು

**ಅಗರ್ತಲಾ:** ಭಾರತದ ಧ್ವಜಕ್ಕೆ ಅವಮಾನ ಮಾಡಿರುವುದರಿಂದ ಬಾಂಗ್ಲಾದೇಶದ ಅತಿಥಿಗಳಿಗೆ ಇಲ್ಲಿ ಸೇವೆ ಸಿಗುವುದಿಲ್ಲ ಎಂದು ಆಲ್ ತ್ರಿಪುರಾ ಹೋಟೆಲ್ ಮತ್ತು ರೆಸ್ಟೋರೆಂಟ್ ಮಾಲೀಕರ ಸಂಘ ಹೇಳಿದೆ. ತುರ್ತು ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಪ್ರಧಾನ ಕಾರ್ಯದರ್ಶಿ ಸೈಕತ್ ಬಂಡೋಪಾಧ್ಯಾಯ ತಿಳಿಸಿದ್ದಾರೆ. ನಮದು ಜಾತ್ಯತೀತ ದೇಶ ಮತ್ತು ಎಲ್ಲಾ ಧರ್ಮಗಳಿಗೆ ಗೌರವವಿದೆ.

ನಮ ರಾಷ್ಟ್ರಧ್ವಜವನ್ನು ಅಪವಿತ್ರಗೊಳಿಸಲಾಗಿದೆ ಮತ್ತು ಅಲ್ಪಸಂಖ್ಯಾ ಹಿಂದೂಗಳು ಬಾಂಗ್ಲಾದೇಶ ದಲ್ಲಿ ಮೂಲಭೂತವಾದಿಗಳಿಂದ ದಬ್ಬಾಳಿಕೆಯನ್ನು ಎದುರಿಸುತ್ತಿದ್ದಾರೆ. ಈ ಹಿಂದೆಯೂ ಇಂತಹ ಘಟನೆಗಳು ನಡೆಯುತ್ತಿದ್ದವು ಆದರೆ ಈಗ ಅದು ಮಿತಿ ಮೀರಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಬಾಂಗ್ಲಾದೇಶದಲ್ಲಿ ಈಗಿರುವ ಪರಿಸ್ಥಿತಿ ನಿಜವಾಗಿಯೂ ಚಿಂತಾಜನಕವಾಗಿದೆ



ಎಂದು ಕಳವಳ ವ್ಯಕ್ತಪಡಿಸಿ ,ವಿವಿಧ ಉದ್ದೇಶಗಳಿಗಾಗಿ ತ್ರಿಪುರಾಕ್ಕೆ ಬರುವ ಬಾಂಗ್ಲಾ ಜನರಿಗೆ ನಾವು ಸೇವೆ ಸಲ್ಲಿಸುವುದಿಲ್ಲ ಬಾಂಗ್ಲಾದೇಶದಲ್ಲಿ ಅಲ್ಪಸಂಖ್ಯಾತರನ್ನು ನಡೆಸುತ್ತಿರುವುದನ್ನು ನಾವು ಖಂಡಿಸುತ್ತೇವೆ ಎಂದು ಅವರು ಹೇಳಿದರು.

ಈ ಹಿಂದೆ, ಮಲ್ಟಿ-ಸ್ಪೆಷಾಲಿಟಿ ಖಾಸಗಿ ಆಸ್ಪತ್ರೆಯು ಬಾಂಗ್ಲಾದೇಶದಲ್ಲಿ ಅಲ್ಪಸಂಖ್ಯಾತರ ಮೇಲಿನ ದೌರ್ಜನ್ಯವನ್ನು ವಿರೋಧಿಸಿ ಬಾಂಗ್ಲಾದೇಶದ ಯಾವುದೇ ರೋಗಿಗಳಿಗೆ ಚಿಕಿತ್ಸೆನೀಡುವುದಿಲ್ಲ ಎಂದು ಘೋಷಿಸಿತು

# ಮನೆಯ ಮೇಲೆ ಬಂಡೆ ಬಿದ್ದು ಐದು ಮಕ್ಕಳು 7 ಮಂದಿ ಸಾವು : ಸಿಎಂ ಪರಿಹಾರ ಘೋಷಣೆ

**ತಿರುವಣ್ಣಾಮಲೈ:** ಜಿಲ್ಲೆಯ ಅಣ್ಣಾಮಲೈಯಾರ್‌ನಲ್ಲಿ ಮಳೆಯಿಂದ ಬೆಟ್ಟದಿಂದ ಬಂಡೆಗಳು ಮನೆ ಮೇಲೆ ಬಿದ್ದು ಐವರು ಮಕ್ಕಳು ಸೇರಿದಂತೆ ಏಳು ಮಂದಿ ಸಾವನ್ನಪ್ಪಿರುವ ಬಗ್ಗೆ ತಮಿಳುನಾಡು ಮುಖ್ಯಮಂತ್ರಿ ಎಂ ಕೆ ಸ್ಟಾಲಿನ್ ಸಂತಾಪ ವ್ಯಕ್ತಪಡಿಸಿ ತಲಾ 5 ಲಕ್ಷ ರೂ ಪರಿಹಾರ ಘೋಷಿಸಿದ್ದಾರೆ. ಧಾರಾಕಾರ ಮಳೆಗೆ ಗುಡ್ಡದ ತುದಿಯಿಂದ ಬಂಡೆಯೊಂದು ಉರುಳಿಬಿಂದು ವಿಒಸಿ ನಗರದಲ್ಲಿ ವಸತಿ ಕಟ್ಟಡ ಮೇಲೆ ಬಿದ್ದು ಅದರಡಿ 7 ಮಂದಿ ಹೂತುಹೋದರು.

ಎನ್‌ಡಿಆರ್‌ಎಫ್‌ತಂಡ, ಪೊಲೀಸರು ಮತ್ತು ಅಗ್ನಿಶಾಮಕ ಮತ್ತು ರಕ್ಷಣಾ ಸೇವೆಯ ಸಿಬ್ಬಂದಿಗಳ ತೀವ್ರ ಶೋಧದ ನಂತರ ನಿನ್ನೆ ಸಂಜೆ ಪತ್ತೆ ಮಾಡಲಾಯಿತು.

ಫೆಂಗಲ್ ಚಂಡಮಾರುತದಿಂದ ಉಂಟಾದ ಭಾರೀ ಮಳೆಗೆ ಬೆಟ್ಟದ ತುದಿಯಲ್ಲಿ ಕೆಸರು ಜಾರಿದ್ದರಿಂದ ಬಂಡೆ ಉರುಳಿ ಬಿದ್ದಿದ್ದು, ಮನೆ ನುಜ್ಜುಗುಜ್ಜಾಗಿದೆ. ಇದರಿಂದಾಗಿ ಮನೆ ಸಂಪೂರ್ಣ ಮಣ್ಣಿನಡಿಯಲ್ಲಿ ಹೂತು ಹೋಗಿದೆ ಎಂದು ತಿರುವಣ್ಣಾಮಲೈ ಜಿಲ್ಲಾಧಿಕಾರಿ ಡಿ ಭಾಸ್ಕರ್ ಪಾಂಡಿಯನ್ ಹೇಳಿದ್ದಾರೆ.

ಮೃತರ ಕುಟುಂಬಗಳಿಗೆ ನನ್ನ ತೀವ್ರ ಸಂತಾಪ ಮತ್ತು ಸಹಾನುಭೂತಿಗಳನ್ನು ವ್ಯಕ್ತಪಡಿಸುತ್ತೇನೆ. ಮುಖ್ಯಮಂತ್ರಿಗಳ ಸಾರ್ವಜನಿಕ ಪರಿಹಾರ ನಿಧಿಯಿಂದ ಮೃತರ ಕುಟುಂಬಕ್ಕೆ ತಲಾ ಐದು ಲಕ್ಷ ರೂಪಾಯಿ ನೀಡಲು



ಆದೇಶಿಸಿದ್ದೇನೆ ಎಂದು ತಿಳಿಸಿದ್ದಾರೆ. ಮೃತರನ್ನು ರಾಜ್‌ಕುಮಾರ್ (32), ಅವರ ಪತ್ನಿ ಮೀನಾ (27), ಅವರ ಮಗ ಮತ್ತು ಮಗಳು, ನೆರೆಹೊರೆಯ ಮೂವರು ಹುಡುಗಿಯರು ಎಂದು ಗುರುತಿಸಲಾಗಿದೆ. ಎಲ್ಲಾ ಐವರು ಮಕ್ಕಳು 14 ವರ್ಷಕ್ಕಿಂತ ಕಡಿಮೆ ವಯಸ್ಸಿನವರು ಎಂದು ಪೊಲೀಸರು ತಿಳಿಸಿದ್ದಾರೆ.

ಡಿ.1ರ ಸಂಜೆ 4 ಗಂಟೆಗೆ ಭಾರೀ ಮಳೆಗೆ ಮನೆ ಮೇಲೆ ಮರ ಬಿದ್ದಿರುವುದನ್ನು ಮನಗಂಡ ರಾಜ್‌ಕುಮಾರ್, ಮನೆಯ ಬಾಗಿಲು ತೆರೆಯಲು ಯತ್ನಿಸಿದಾಗ ಬೆಟ್ಟದಿಂದ ಉರುಳಿಬಿದ್ದ ದೊಡ್ಡ ಬಂಡೆಯೊಂದು ಮನೆಯ ಮೇಲೆ ಬಿದ್ದು ಮನೆ ಆವರಿಸಿತ್ತು. ದುರಂತದ ಬಗ್ಗೆ ತಿಳಿದ ಜಿಲ್ಲಾಡಳಿತವು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ ಮತ್ತು ಅವರ ಕಮಾಂಡಿಂಗ್ ಅಧಿಕಾರಿ ಸೇರಿದಂತೆ 39 ಸಿಬ್ಬಂದಿ ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿದೆ.

# ಸಂಸತ್ ಲೈಬ್ರರಿಯಲ್ಲಿ ‘ಸಾಬರಮತಿ ರಿಪೋರ್ಟ್’ ಸಿನಿಮಾ ವೀಕ್ಷಿಸಿದ ಮೋದಿ

**ನವದೆಹಲಿ:** ಪ್ರಧಾನಿ ನರೇಂದ್ರ ಮೋದಿಯವರು ಗುಜರಾತ್‌ನಲ್ಲಿ ನಡೆದಿದ್ದ ಗೋಧ್ರಾ ರೈಲು ದುರಂತ ಹಿಂದಿನ ಕತೆ ಆಧಾರಿತ ‘ಸಾಬರಮತಿ ರಿಪೋರ್ಟ್’ ಸಿನಿಮಾವನ್ನು ಸಂಸತ್‌ನ ಲೈಬ್ರರಿಯ ಬಾಲಯೋಗಿ ಸಭಾಂಗಣದಲ್ಲಿ ವೀಕ್ಷಿಸಿದ್ದಾರೆ.

ಸಿನಿಮಾ ವೀಕ್ಷಿಸುತ್ತಿರುವ ಫೋಟೋಗಳನ್ನು ಪ್ರಧಾನಿ ಎಕ್ಸ್ ಖಾತೆಯಲ್ಲಿ ಹಂಚಿಕೊಂಡಿದ್ದಾರೆ. ಅಲ್ಲದೇ ಚಿತ್ರದ ನಿರ್ಮಾಣಕ್ಕಾಗಿ ಉತ್ತಮ ಪ್ರಯತ್ನ ಮಾಡಿದ ನಿರ್ಮಾಪಕರನ್ನು ಹಾಗೂ ಚಿತ್ರ ತಂಡವನ್ನು ಶ್ಲಾಘಿಸಿದ್ದಾರೆ.

ಮೋದಿಯವರ ಜೊತೆ ಕೇಂದ್ರ ಸಚಿವರಾದ ಅಮಿತ್ ಶಾ, ರಾಜನಾಥ್ ಸಿಂಗ್, ಕಿರಣ್ ರಿಜಿಜು, ಜಿತನ್ ರಾಮ್ ಮಾಂಝಿ, ಅಶ್ವಿನಿ ವೈಷ್ಣವ್ ಸೇರಿದಂತೆ ಎನ್‌ಡಿಎ ಸಂಸದರು ಸಹ ಸಿನಿಮಾ ವೀಕ್ಷಿಸಿದ್ದಾರೆ. ಅಲ್ಲದೇ ನಟ ವಿಕ್ರಾಂತ್ ಮಾಸ್ಸೆ ಮತ್ತು ಜಿತೇಂದ್ರ ಕೂಡ ಈ ವೇಳೆ ಉಪಸ್ಥಿತರಿದ್ದರು.

ವಿಕ್ರಾಂತ್ ಮಾಸ್ಸೆ ಪ್ರಮುಖ ಪಾತ್ರದಲ್ಲಿ ನಟಿಸಿರುವ ಈ ಚಲನಚಿತ್ರವು 2002 ರಲ್ಲಿ ಗುಜರಾತ್‌ನಲ್ಲಿ ನಡೆದಿದ್ದ ಗೋಧ್ರಾ ರೈಲು ದುರಂತದ ಕಥೆಯನ್ನು ಒಳಗೊಂಡಿದೆ. ಈ ಸಿನಿಮಾವನ್ನು ಶೋಭಾ ಕಪೂರ್, ಏಕ್ತಾ ಆರ್ ಕಪೂರ್, ಅಮುಲ್ ವಿ ಮೋಹನ್, ಅನ್ಶುಲ್ ಮೋಹನ್ ನಿರ್ಮಿಸಿದ್ದು, ಧೀರಜ್ ಸರ್ನಾ ನಿರ್ದೇಶಿಸಿದ್ದಾರೆ. ಪ್ರಮುಖ



ಪಾತ್ರದಲ್ಲಿ ರಾಶಿ ಖನ್ನಾ ಮತ್ತು ರಿಧಿ ಡೋಗ್ರಾ ಕೂಡ ಕಾಣಿಸಿಕೊಂಡಿದ್ದಾರೆ. ಈ ಹಿಂದೆ ಸಿನಿಮಾ ಬಗ್ಗೆ ಎಕ್ಸ್‌ನಲ್ಲಿ ಪೋಸ್ಟ್ ಮಾಡಿದ್ದ ಮೋದಿ, ಈ ಘಟನೆಯ ಸತ್ಯ ಹೊರಬರುತ್ತಿರುವುದು ಒಳ್ಳೆಯದು. ಸಾಮಾನ್ಯ ಜನರು ಇದನ್ನು ಸಿನಿಮಾ ಮೂಲಕ ನೋಡಬಹುದು. ಈ ಚಲನಚಿತ್ರವನ್ನು ಜನರು ನೋಡಲೇಬೇಕು. ದುರಂತದ ಹಿಂದಿನ ಸತ್ಯವನ್ನು ಬಹಿರಂಗಪಡಿಸುವಲ್ಲಿ ಚಿತ್ರತಂಡ ಶ್ರಮಿಸಿದೆ ಎಂದು ಕೊಂಡಾಡಿದ್ದರು.

ಈ ದುರಂತದ ಘಟನೆಯನ್ನು ಪಟ್ಟಭದ್ರ ಹಿತಾಸಕ್ತಿಯ ಗುಂಪುಗಳು ರಾಜಕೀಯಗೊಳಿಸಿವೆ. ಇದನ್ನು ಒಬ್ಬ ನಾಯಕನ ಪ್ರತಿಷ್ಠೆಗೆ ಕಳಂಕ ತರುವ ಅವಕಾಶವಾಗಿ ಬಳಸಿಕೊಂಡಿವೆ ಎಂದು ಬರೆದುಕೊಂಡಿದ್ದರು. ಒಡಿಶಾ, ಉತ್ತರ ಪ್ರದೇಶ, ಹರಿಯಾಣ, ರಾಜಸ್ಥಾನ, ಛತ್ತೀಸ್‌ಗಢ, ಮಧ್ಯಪ್ರದೇಶ ಮತ್ತು ಗುಜರಾತ್ ಸೇರಿದಂತೆ ಬಿಜೆಪಿ ಆಡಳಿತವಿರುವ ಏಳು ರಾಜ್ಯಗಳು ‘ದಿ ಸಬರಮತಿ ರಿಪೋರ್ಟ್’ ಸಿನಿಮಾಗೆ ತೆರಿಗೆ ವಿನಾಯಿತಿ ನೀಡಿವೆ.


**ಏನಿದು ಗೋಧ್ರಾ ರೈಲು ದುರಂತ?:** ಬಿಹಾರದ ಮುಜಾಫರ್‌ಪುರದಿಂದ ಗುಜರಾತ್‌ನ ಅಹಮದಾಬಾದ್‌ಗೆ ಹೊರಟಿದ್ದ ಸಾಬರಮತಿ ಎಕ್ಸ್‌ಪ್ರೆಸ್ ರೈಲು 2002ರ ಫೆ.27.ರ ಬೆಳಗ್ಗೆ ತನ್ನ ನಿಗದಿತ ಸಮಯಕ್ಕೆ ಗುಜರಾತ್‌ನ ಗೋಧ್ರಾ ರೈಲು ನಿಲ್ದಾಣಕ್ಕೆ ತೆರಳಿತ್ತು. ಇದರಲ್ಲಿ ಕರಸೇವಕರು, ಹಿಂದೂ ಸ್ವಯಂಸೇವಕರು ಅಯೋಧ್ಯೆಯಲ್ಲಿ ಧಾರ್ಮಿಕ ಸಭೆಯಲ್ಲಿ ಪಾಲ್ಗೊಂಡು ಹಿಂದಿರುಗುತ್ತಿದ್ದರು. ರೈಲಿಗೆ ಸುಮಾರು 2,000 ಜನರಿದ್ದ ಗುಂಪು ಕಲ್ಲು ತೂರಿ ನಾಲ್ಕು ಕೋಚ್‌ಗಳಿಗೆ ಬೆಂಕಿ ಹಚ್ಚಿತ್ತು.

ಈ ದುರಂತದಲ್ಲಿ 27 ಮಹಿಳೆಯರು, 10 ಮಕ್ಕಳು ಸೇರಿದಂತೆ 59 ಜನರು ಸಾವನ್ನಪ್ಪಿದ್ದರು. ದಾಳಿಯಲ್ಲಿ 48 ಪ್ರಯಾಣಿಕರು ಗಾಯಗೊಂಡಿದ್ದರು. ಇದರಿಂದ ಆದ ಗಲಭೆ ಮೂರು ತಿಂಗಳವರೆಗೆ ಮುಂದುವರೆದಿತ್ತು. ಈ ಗಲಭೆಗೆ ಆಗಿನ ಸಿಎಂ ಆಗಿದ್ದ ಮೋದಿ ಕಾರಣ ಎಂಬ ಆರೋಪ ಕೇಳಿಬಂದಿತ್ತು. ಈ ದುರಂತದ ತನಿಖೆ ನಡೆಸಿದ್ದ ಸುಪ್ರೀಂ ಕೋರ್ಟ್ ನೇಮಿಸಿದ್ದ ತನಿಖಾ ತಂಡ ವರದಿಯಲ್ಲಿ ಈ ಗಲಭೆಗೆ ಮೋದಿ ಕಾರಣ ಎಂಬುಕ್ಕೆ ಯಾವುದೇ ಪುರಾವೆಗಳು ಇಲ್ಲ ಎಂದು ಉಲ್ಲೇಖಿಸಿತ್ತು.

# ವುಹಾನ್‌ನಿಂದ ಕೊರೋನಾ ಸೋಂಕು ಸೋರಿಕೆ

**ವಾಷಿಂಗ್ಟನ್:** ಜಗತ್ತಿಗೆ ಆವರಿಸಿಕೊಂಡಿದ್ದ ಮಾರಕ ಕೋವಿಡ್ ಸೋಂಕು ಚೀನಾದ ವುಹಾನ್ ಪ್ರ ಯೋಗಾಲದಿಂದ ಸೋರಿಕೆಯಾಗಿದೆ ಎಂಬ ಸಂಗತಿಯನ್ನು ಅಮೆರಿ ಕಾದ ವಿಚಾರಣಾ ಸಮಿತಿ ಬಹಿರಂಗ ಪಡಿಸಿದೆ. ಜಗತ್ತನ್ನು ತಲ್ಲಣಗೊಳಿಸಿದ ಸಾಂಕ್ರಾಮಿಕ ರೋಗದ ಎರಡು ವರ್ಷ ಗಳ ನಂತರ, ಕರೋನವೈರಸ್ ಚೀನಾದ ಪ್ರಯೋಗಾಲಯದಿಂದ ಸೋರಿಕೆಯಾಗಿದೆ ಎಂದು ಸಾಂಕ್ರಾಮಿಕ ರೋಗದ ರಿಪಬ್ಲಿಕನ್ ನೇತೃತ್ವದ ಹೌಸ್ ಸೆಲೆಕ್ಟ್ ಉಪಸಮಿತಿ ಬಹಿರಂಗಪಡಿಸಿದೆ.

ಬರೋಬ್ಬರಿ 11 ಲಕ್ಷ ಅಮೆರಿಕಾ ಮಂದಿಯನ್ನು ಬಲಿ ತೆಗೆದುಕೊಂಡಿದ್ದ ಕೋವಿಡ್ ಸೋಂಕು ಕುರಿತು ಎರಡು ವರ್ಷಗಳ ಕಲಾ ಸುದೀರ್ಘ ತನಿಖೆ ನಡೆಸಿದ ಅಮೇರಿಕಾ ಸೋಂಕು ಜಗತ್ತಿಗೆ ಹರಡಲು ಚೀನಾದ ಪ್ರಯೋಗಾಲ ಕಾರಣ ಎನ್ನುವ ಸಂಗತಿಯನ್ನು ಬಹಿರಂಗ ಮಾಡಿದೆ.



520-ಪುಟಗಳ ವರದಿಯಲ್ಲಿ ಫೆಡರಲ್ ಮತ್ತು ರಾಜ್ಯ ಮಟ್ಟದ ಪ್ರತಿಕ್ರಿಯೆಗಳು, ವೈರಸ್‌ನ ಮೂಲಗಳು ಮತ್ತು ವ್ಯಾಕ್ಸಿನೇಷನ್ ಪ್ರಯತ್ನಗಳನ್ನು ಪರಿಶೀಲಿಸಿ ಅಂತಿಮವಾಗಿ ಈ ವರದಿಯನ್ನು ಬಹಿರಂಗ ಪಡಿಸಿದೆ.

ಅಮೆರಿಕಾದ ಕಾಂಗ್ರೆಸ್‌ಗೆ ಬರೆದ ಪತ್ರದಲ್ಲಿ ಪ್ಯಾನೆಲ್ ಅಧ್ಯಕ್ಷ ಬ್ರಾಡ್ ವೆನ್‌ಸ್ಟ್ರಪ್ ಈ ವಿಷಯ ತಿಳಿಸಿದ್ದು ಜಗತ್ತಿನಲ್ಲಿ ಕಾಣಿಸಿಕೊಂಡ ಕೋವಿಡ್ ಸೋಂಕು ಹರಡಲು ಚೀನಾವೇ ಕಾರಣ. ಚೀನಾದ ವುಹಾನ್ ಪ್ರಯೋಗಾಲದಿಂದ ಸಾಂಕ್ರಾಮಿಕ ರೋಗ ಜಗತ್ತಿನಲ್ಲೆಡೆ ಹರಡಿದೆ ಎಂದು ಆರೋಪಿಸಿದ್ದಾರೆ.

ಕೋವಿಡ್ 19 ಸೋಂಕು ವುಹಾನ್ ಇನ್ಸ್ಟಿಟ್ಯೂಟ್ ಆಫ್ ವೈರಾಲಜಿಯಿಂದ ತಪ್ಪಿಸಿಕೊಂಡಿದೆ ಎಂದು ಹೇಳುವ ಪ್ರಯೋಗಾಲಯದ ಸೋರಿಕೆ ವರದಿಯು ಬೆಂಬಲಿಸುತ್ತದೆ.

> **ರಿಪಬ್ಲಿಕನ್ ವರದಿಯು ಲಸಿಕೆ ಅಭಿವೃದ್ಧಿಯನ್ನು ವೇಗದ ಟ್ರ್ಯಾಕ್ ಮಾಡಲು ಟ್ರಂಪ್-ಯುಗದ ಉಪ ಕ್ರಮವಾದ ಆಪರೇಷನ್ ವಾರ್ಪ್ ಸ್ಪೀಡ್ ಪ್ರಚಂಡ ಯಶಸ್ಸು ಎಂದು ಹೇಳಿದೆ.**

ಸಮಿತಿಯು 25 ಸಭೆಗಳು, 30 ಕ್ಕೂ ಹೆಚ್ಚು ಸಂದರ್ಶನಗಳು ಮತ್ತು ಒಂದು ಮಿಲಿಯನ್ ಗಿಂತಲೂ ಹೆಚ್ಚು ದಾಖಲೆಗಳ ಪರಿಶೀಲನೆಯ ನಂತರ ತನ್ನ ತೀರ್ಮಾನಕ್ಕೆ ಬಂದಿದ ಎಂದು ಹೇಳಿದ್ದಾರೆ. ಅಮೆರಿಕಾದ ಅಧ್ಯಕ್ಷರ ಮಾಜಿ ಮುಖ್ಯ ವೈದ್ಯಕೀಯ ಸಲಹೆಗಾರ ಡಾ ಆಂಥೋನಿ ಫೌಸಿಯವರ ಸಾಕ್ಷ್ಯವನ್ನು ಒಳಗೊಂಡಿತ್ತು. ರಿಪಬ್ಲಿಕನ್ನರು 83 ವರ್ಷದ ಇಮ್ಯುನೊಲೊಜಿಸ್ಟ್ ಅನ್ನು ಸಾಂಕ್ರಾಮಿಕ ರೋಗಕ್ಕೆ ದೂಷಿಸುತ್ತಾರೆ ಮತ್ತು ಅವರು ವೈರಸ್ ಅನ್ನು ವಿನ್ಯಾಸಗೊಳಿಸಿದ ಚೀನಾದ ವಿಜ್ಞಾನಿಗಳಿಗೆ ಧನಸಹಾಯ ನೀಡಿದ್ದಾರೆ ಎಂದು ಆರೋಪಿಸಿದ್ದಾರೆ.

# ಇಸ್ರೇಲ್ ದಾಳಿ 11 ಮಂದಿ ಹತ್ಯೆ

**ಟೆಲ್ ಅವೀವಾ:** ಇಸ್ರೇಲ್ ಮತ್ತು ಲೆಬನಾನ್ ನಡುವೆ 60 ದಿನಗಳ ಕದನವಿರಾಮ ಘೋಷಣೆ ಮಾಡಿದ್ದರೂ ಹಿಜ್ಬುಲ್ಲಾ ಸಂಘಟನೆ ನಡೆಸಿದ ದಾಳಿಗೆ ಪ್ರತಿಯಾಗಿ ಇಸ್ರೇಲ್ ಸೇನೆ ದಾಳಿ ನಡೆಸಿ 11 ಮಂದಿಯನ್ನು ಹತ್ಯೆ ಮಾಡಿದೆ.

ಇದರಿಂದ ಎರಡೂ ಕಡೆಯಲ್ಲಿ ಕದನ ವಿರಾಮ ಎನ್ನುವುದು ಕೇವಲ ಕಾಗದಕ್ಕೆ ಸೀಮಿತವಾಗಿದ್ದು ಮತ್ತಷ್ಟು ಬಿಗುವಿನ ವಾತಾವರಣ ನಿರ್ಮಾಣ, ಸಂಘರ್ಷಕ್ಕೆ ದಾರಿ ಮಾಡಿಕೊಟ್ಟಿದೆ. ಕದನ ವಿರಾಮದ ಘೋಷಣೆಯಾದ ಒಂದು ವಾರದೊಳಗೆ, ಇಸ್ರೇಲ್ ಲೆಬನಾನ್‌ನಾದ್ಯಂತ ಅತಿದೊಡ್ಡ ವೈಮಾನಿಕ ದಾಳಿ ನಡೆಸಿದ 11 ಮಂದಿ ಹಿಬ್ಜುಲ್ಲಾ ಸಂಘಟನೆಯ ಸದಸ್ಯರನ್ನು ಹತ್ಯೆ ಮಾಡಿದೆ. ಇಸ್ರೇಲಿ ದಾಳಿಯಿಂದ ಕಂಗಾಲಾಗಿರುವ ಇಸ್ರೇಲಿ ಹಿಜ್ಬುಲ್ಲಾಹ್ ಪ್ರತಿದಾಳಿಗೆ ಸಜ್ಜಾಗಿದೆ. ಲೆಬನಾನಿನ ಆರೋಗ್ಯ ಸಚಿವಾಲಯದ ಪ್ರಕಾರ, ದಕ್ಷಿಣದ ಹಳ್ಳಿಯಾದ ಹ್ಯಾರಿಸ್‌ನ ಮೇಲೆ ಒಂದು ವೈಮಾನಿಕ ದಾಳಿಯು ಐದು ಜನರನ್ನು ಕೊಂದಿತು ಮತ್ತು ಇಬ್ಬರು ಗಾಯಗೊಂಡರು ಮತ್ತು ತಲ್ಲೌಸಾ ಗ್ರಾಮದ ಮೇಲೆ ನಡೆದ ಮತ್ತೊಂದು ವೈಮಾನಿಕ ದಾಳಿಯಲ್ಲಿ ನಾಲ್ವರು ಸಾವನ್ನಪ್ಪಿದರು ಮತ್ತು ಇಬ್ಬರು ಗಾಯಗೊಂಡಿದ್ದಾರೆ ಎಂದು ಮಾಹಿತಿ ನೀಡಿದೆ. ಕಳೆದ ಬುಧವಾರ 60 ದಿನಗಳ ಕದನ ವಿರಾಮ ಜಾರಿಗೆ ಬಂದ ನಂತರ ಲೆಬನಾನಿನ ಉಗ್ರಗಾಮಿ ಗುಂಪು ಇಸ್ರೇಲಿ ಪಡೆಗಳ ಮೇಲೆ ಗುರಿ ಇಟ್ಟಿರುವುದು ಸ್ಪಷ್ಟವಾಗಿ ಈ ಸ್ಫೋಟ ನಡೆದಿದೆ.

ಇಸ್ರೇಲ್ ರಕ್ಷಣಾ ಪಡೆ ಪ್ರಕಾರ ಲೆಬನಾನ್‌ನಾದ್ಯಂತ ಹಿಜ್ಬುಲ್ಲಾ ಹೋರಾಟಗಾರರು, ಮೂಲಸೌಕರ್ಯ ಮತ್ತು ರಾಕೆಟ್ ಲಾಂಚರ್‌ಗಳು ದಾಳಿ ಮಾಡಿದ್ದು ಅದಕ್ಕೆ ಪ್ರತಿಯಾಗಿ ದಾಳಿ ನಡೆಸಲಾಗಿದೆ. ಇಸ್ರೇಲ್ ತಂಟೆಗೆ ಬಂದರೆ ಸುಮ್ಮನೆ ಬಿಡುವುದಿಲ್ಲ ಎನ್ನುವ ಎಚ್ಚರಿಕೆ ಸಂದೇಶ ರವಾನೆ ಮಾಡಿದೆ. ಲೆಬನಾನ್‌ನಲ್ಲಿನ ಶೆಬಾ ಫಾರ್ಮ್ಸ್ ಎಂದು ಕರೆಯಲ್ಪಡುವ ವಿವಾದಿತ ಇಸ್ರೇಲಿ ಹಿಡಿತದ ಪ್ರದೇಶ ಇದು ಲೆಬನಾನ್, ಸಿರಿಯಾ, ಇಸ್ರೇಲ್ ಗಡಿಗಳ ತ್ರಿ-ಜಂಕ್ಷನ್ ಆಗಿದೆ ಭೇಟಿಯಾಗುತ್ತಾರೆ. ಸ್ಫೋಟಕಗಳು ತೆರೆದ ಪ್ರದೇಶಗಳಲ್ಲಿ ಬಿದ್ದಿವೆ ಮತ್ತು ಯಾವುದೇ ಹಾನಿಯಾಗಿರುವ ವರದಿಯಾಗಿಲ್ಲ.


ಲೆಬನಾನ್‌ನಾದ್ಯಂತ ಹಿಜ್ಬುಲ್ಲಾ ಭಯೋತ್ಪಾದಕರು, ಡಜನ್ ಗಟ್ಟಲೆ ಲಾಂಚರ್‌ಗಳು, ಭಯೋತ್ಪಾದಕ ಮೂಲಸೌಕರ್ಯಗಳನ್ನು ಗುರಿಯಾಗಿಸಿಕೊಂಡು ದಾಳಿ ನಡೆದಿದೆ. ಮೌಂಟ್ ಡೋವ್ ಕಡೆಗೆ ಎರಡು ಸ್ಫೋಟಕಗಳನ್ನು ಉಡಾವಣೆ ಮಾಡಿದ ಸ್ವಲ್ಪ ಸಮಯದ ನಂತರ ದಕ್ಷಿಣ ಲೆಬನಾನ್‌ನ ಬರ್ಘೋಜ್ ಪ್ರದೇಶದಲ್ಲಿ ಹಿಜ್ಬುಲ್ಲಾ ದಾಳಿ ನಡೆಸಿದೆ.

# ಭೂಪಟದಿಂದ ಕಣ್ಮರೆಯಾಗುವ ಭೀತಿಯಲ್ಲಿದೆ ದ.ಕೊರಿಯಾ!

## 5.2 ಕೋಟಿ ಜನರಿದ್ದು, ಜನನ ಪ್ರಮಾಣದಲ್ಲಿ ಸುಧಾರಣೆಯಾಗದಿದ್ದರೆ ಕೆಲವೇ ವರ್ಷಗಳಲ್ಲಿ 1.7 ಕೋಟಿಗೆ ಇಳಿಯಬಹುದು

**ಸಿಯೋಲ್:** ಜಗತ್ತಿನ ಜನಸಂಖ್ಯೆ 800 ಕೋಟಿಯನ್ನು ದಾಟಿ ದಾಂಗುಡಿಯಿಡುತ್ತಿದ್ದರೆ, ದಕ್ಷಿಣ ಕೊರಿಯಾ ಮಾತ್ರ ಜನಸಂಖ್ಯೆ ಕೊರತೆಯಿಂದ ಬಳಲುತ್ತಿದೆ. ದೇಶದಲ್ಲಿ ಜನನ ಪ್ರಮಾಣವು ಐತಿಹಾಸಿಕವಾಗಿ ಕನಿಷ್ಠ ಮಟ್ಟಕ್ಕೆ ಇಳಿದಿದ್ದು, ಹೀಗೆ ಮುಂದುವರಿದರೆ ಇನ್ನು ನೂರು ವರ್ಷದಲ್ಲಿ ಇಲ್ಲಿ ಜನರೇ ಇಲ್ಲವಾಗಬಹುದು ಎನ್ನಲಾಗಿದೆ. ಪ್ರಸ್ತುತ ದಕ್ಷಿಣ ಕೊರಿಯಾದಲ್ಲಿ 5.2 ಕೋಟಿ ಜನರಿದ್ದಾರೆ. ಜನನ ಪ್ರಮಾಣ ಸುಧಾರಿಸದೇ ಹೋದಲ್ಲಿ ದೇಶದ ಜನಸಂಖ್ಯೆಯು 1.7 ಕೋಟಿಗೆ ಕುಸಿಯಬಹುದು ಎಂದು ತಜ್ಞರು ಎಚ್ಚರಿಸಿದ್ದಾರೆ.

**ಜನಸಂಖ್ಯೆ ಹೆಚ್ಚಿಸಲು ಸರಕಾರದ ಪ್ರೋತ್ಸಾಹ:** ದಕ್ಷಿಣ ಕೊರಿಯಾದ ಸರಕಾರವು ಜನನ ದರವನ್ನು ಹೆಚ್ಚಿಸಲು ಹಲವಾರು ನೀತಿಗಳನ್ನು ಪರಿಚಯಿಸಿದೆ. ಹೆಚ್ಚು ಮಕ್ಕಳಿದ್ದವರಿಗೆ ತೆರಿಗೆ ವಿನಾಯಿತಿ, ಶಿಶುಪಾಲನೆಗೆ



**ಕುಟುಂಬದಲ್ಲಿ ಮೂರು ಮಕ್ಕಳಿರುವಂತೆ ನೋಡಿಕೊಳ್ಳಬೇಕು**

ಸಹಾಯಧನ, ಪುರುಷರಿಗೆ ಮಿಲಿಟರಿ ಸೇವೆಗಳಲ್ಲಿ ವಿನಾಯಿತಿ ನೀಡಲಾಗಿದೆ.

ಆದಾಗ್ಯೂ, ಈ ಕ್ರಮಗಳು ಗಮನಾರ್ಹ ಫಲಿತಾಂಶಗಳನ್ನು ನೀಡಿಲ್ಲ. ದಕ್ಷಿಣ ಕೊರಿಯಾದ ಅನೇಕ ಮಹಿಳೆಯರು, ವಿಶೇಷವಾಗಿ ನಗರ ಪ್ರದೇಶಗಳಲ್ಲಿ, ಕುಟುಂಬ ಜವಾಬ್ದಾರಿಗಳನ್ನು ನಿಭಾಯಿಸಲು ಹಿಂದೇಟು ಹಾಕುತ್ತಿದ್ದಾರೆ. ವೃತ್ತಿ ಜೀವನವೇ ಅನುಕೂಲಕರ ಎಂಬ ಮನೋಭಾವನೆಯನ್ನು ಹೊಂದಿದ್ದು, ಬಹುತೇಕರು ಉದ್ಯೋಗ ಕ್ಷೇತ್ರವನ್ನು ಆರಿಸಿಕೊಳ್ಳುತ್ತಿದ್ದಾರೆ. 2023ರಲ್ಲಿ ನಡೆಸಿದ ಸರಕಾರಿ ಸಮೀಕ್ಷೆಯಲ್ಲೂ ಇದೇ ರೀತಿಯ ಅಂಶಗಳು ಬಹಿರಂಗಗೊಂಡಿವೆ. 2024ರ ಸಮೀಕ್ಷೆಯಲ್ಲಿ, ಮೂರನೇ ಒಂದು ಭಾಗದಷ್ಟು ಮಹಿಳೆಯರು ಮದುವೆಯಾಗಲು ಬಯಸುವುದಿಲ್ಲಎಂದಿದ್ದಾರೆ. ಶೇ.93 ಪ್ರತಿಶತ ಮಹಿಳೆಯರು ಮನೆಗೆಲಸದ ಹೊರೆ ಮತ್ತು ಮಕ್ಕಳ ಪೋಷಣೆಗಿಂತ ಸ್ವತಂತ್ರ ಜೀವನವೇ ಲೇಸು ಎಂದಿದ್ದಾರೆ.

> **ದಕ್ಷಿಣ ಕೊರಿಯಾ ರಾಷ್ಟ್ರದಲ್ಲಿ ಜನಸಂಖ್ಯೆಯ ಬೆಳವಣಿಗೆಯ ವೇಗ ಅತಿ ಕಡಿಮೆಯಾಗಿದ್ದು, ಅದರಿಂದ ಅಲ್ಲಿ ಮುಂದಿನ ನೂರು ವರ್ಷಗಳಲ್ಲಿ ಜನರೇ ಇಲ್ಲದಂತಾಗಬಹುದು ಎಂದು ತಜ್ಞರು ಅಂದಾಜಿಸಿದ್ದಾರೆ. ಸದ್ಯಕ್ಕೆ ಆ ದೇಶದಲ್ಲೀಗ 5.2 ಕೋಟಿ ಜನರಿದ್ದಾರೆ. ಜನನ ಪ್ರಮಾಣ ಕುಸಿಯದೇ ಹೋದಲ್ಲಿ ಇನ್ನು ಕೆಲವೇ ವರ್ಷಗಳಲ್ಲಿ ಆ ದೇಶದ ಜನಸಂಖ್ಯೆ 1.7 ಕೋಟಿಗೆ ಇಳಿಯಬಹುದು ಎಂದು ತಜ್ಞರು ತಿಳಿಸಿದ್ದಾರೆ. ಹೀಗೆಯೇ ಮುಂದುವರಿದರೆ ಆ ದೇಶದಲ್ಲಿ ಯಾರೂ ಇಲ್ಲದಂತೆಯೂ ಆಗಬಹುದು ಎಂದು ಹೇಳಿದ್ದಾರೆ.**

- **ದಕ್ಷಿಣ ಕೊರಿಯಾ ರಾಷ್ಟ್ರದಲ್ಲಿ ಜನಸಂಖ್ಯೆಯ ಬೆಳವಣಿಗೆಯ ವೇಗ ಅತಿ ಕಡಿಮೆ.**
- **1960ರ ದಶಕದಲ್ಲಿ ಅಲ್ಲಿ ಜಾರಿಯಾಗಿದ್ದ ಜನಸಂಖ್ಯಾ ನಿಯಂತ್ರಣ ಕ್ರಮಗಳೇ ಈಗ ಜನನ ಪ್ರಮಾಣ ಕುಸಿತಕ್ಕೆ ಕಾರಣ ಎಂದಿರುವ ತಜ್ಞರು.**

**ಕುಟುಂಬ ನೀತಿಯ ಫಲ?:** 1960ರ ದಶಕದಲ್ಲಿ ಆರಂಭವಾದ ಕುಟುಂಬ ಯೋಜನಾ ನೀತಿಯೇ ಇದಕ್ಕೆಲ್ಲ ಕಾರಣ ಎನ್ನಲಾಗುತ್ತದೆ. ಜನನ ಪ್ರಮಾಣ ಕಡಿಮೆ ಮಾಡಲು ಸಾಕಷ್ಟು ಕ್ರಮಗಳನ್ನು ಕೈಗೊಳ್ಳಲಾಯಿತು.

ಆ ಸಮಯದಲ್ಲಿ ದಕ್ಷಿಣ ಕೊರಿಯಾದ ತಲಾ ಆದಾಯವು ಜಾಗತಿಕ ಸರಾಸರಿಯ ಕೇವಲ 20 ಪ್ರತಿಶತದಷ್ಟಿತ್ತು. ಪ್ರತಿ ಒಬ್ಬ ಮಹಿಳೆ 6ಕ್ಕಿಂತ ಹೆಚ್ಚು ಮಕ್ಕಳನ್ನು ಹೊಂದಿರುತ್ತಿದ್ದರು. 1982ರ ಹೊತ್ತಿಗೆ, ಆರ್ಥಿಕ ಬೆಳವಣಿಗೆಯೊಂದಿಗೆ ಫಲವತ್ತತೆಯ ದರವು 2.4ಕ್ಕೆ ಇಳಿಯಿತು.

**ಭಾರತದಲ್ಲಿಯೂ ಜನಸಂಖ್ಯೆ ಹೆಚ್ಚಿಸಿಕೊಳ್ಳುವ ಕೂಗು:** ಇತ್ತೀಚೆಗೆ, ಆರೆಸ್ಸೆಸ್ ಮುಖ್ಯಸ್ಥರಾದ ಮೋಹನ್ ಭಾಗವತ್ ಅವರು, ಭಾರತದಲ್ಲಿರುವ ಕೆಲವು ಸಮುದಾಯಗಳು ತಮ್ಮ ಜನಸಂಖ್ಯೆಯನ್ನು ಹೆಚ್ಚಿಸಿಕೊಳ್ಳುವಂತೆ ಕರೆ ನೀಡಿದ್ದಾರೆ. ಜನಸಂಖ್ಯಾ ತಜ್ಞರು, ಯಾವ ಸಮುದಾಯದಲ್ಲಿ ಜನನ ಪ್ರಮಾಣವು 2.1ಕ್ಕಿಂತ ಕಡಿಮೆ ಇರುತ್ತದೆಯೋ ಆ ಸಮುದಾಯ ಮುಂದೊಂದು ದಿನ ನಶಿಸಿ ಹೋಗುತ್ತದೆ. ಹಾಗಾಗಿ, ಭಾರತದಲ್ಲಿರುವ ಕೆಲವು ಸಮುದಾಯಗಳು ತಮ್ಮ ಪ್ರತಿಯೊಂದು ಕುಟುಂಬದಲ್ಲಿ ಮೂರು ಮಕ್ಕಳಿರುವಂತೆ ನೋಡಿಕೊಳ್ಳಬೇಕು ಎಂದು ಕರೆ ನೀಡಿದ್ದಾರೆ.

---

**ಉದಯ UV ವಾಹಿನಿ**

**ದೇಶ/ವಿದೇಶ**

ಬುಧವಾರ 04 ಡಿಸೆಂಬರ್ 2024



## ಮಿನಿ ನ್ಯೂಸ್

### ಬಸ್, ಕಾರಿನ ನಡುವೆ ಡಿಕ್ಕಿಯಾಗಿ ಐವರು ಎಂಬಿಬಿಎಸ್ ವಿದ್ಯಾರ್ಥಿಗಳ ಸಾವು

**ಕೇರಳ:** ಸರ್ಕಾರಿ ಬಸ್, ಕಾರಿನ ನಡುವೆ ಡಿಕ್ಕಿ ಸಂಭವಿಸಿ ಐವರು ಎಂಬಿಬಿಎಸ್ ವಿದ್ಯಾರ್ಥಿಗಳು ಸಾವನ್ನಪ್ಪಿರುವ ಘಟನೆ ಜಿಲ್ಲೆಯ ಕಲ್ಲರ್‌ಕೋಡ್ ಬಳಿ ಸಂಭವಿಸಿದೆ. ಮೃತರನ್ನು ಲಕ್ಷದ್ವೀಪದ ಅಂಟ್ರೋನಾದ ಮಹಮದ್ ಇಬ್ರಾಹಿಂ (19), ಪಾಲಕ್‌ಕಾಡ್‌ನ ಸೆಕ್ಕಾರ್‌ಪುರಂನ ಶ್ರೀದೇವವತ್ಸಂ (19), ಕಣ್ಣೂರು ಮಾಟ್ಟೈಲ್‌ನ ಮಹಮದ್ ಜಬ್ಬಾರ್ (19), ಮಲ್ಲುಪುರಂ ಕೊಟ್ಟಕಲ್‌ನ ದೇವಾ ನದಂ (19), ಅಲ್ಲುಪುಳದ ಆಯುಷ್ ಷಾಜಿ (19) ಎಂದು ಗುರುತಿಸಲಾಗಿದೆ. ಕಾರಿನಲ್ಲಿ 11 ವೈದ್ಯಕೀಯ ವಿದ್ಯಾರ್ಥಿಗಳು ಪ್ರಯಾಣಿಸುತ್ತಿದ್ದು, ಐವರು ಸಾವನ್ನಪ್ಪಿದ್ದು, ಆರು ವಿದ್ಯಾರ್ಥಿಗಳು ಗಂಭೀರವಾಗಿ ಗಾಯಗೊಂಡಿದ್ದಾರೆ. ಇಬ್ಬರ ಸ್ಥಿತಿ ಚಿಂತಾಜನಕವಾಗಿದೆ. ಗಾಯಗೊಂಡಿರುವ ವಿದ್ಯಾರ್ಥಿಗಳನ್ನು ವಂದನಂ ವೈದ್ಯಕೀಯ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗಿದೆ. ನಿನ್ನೆ ರಾತ್ರಿ ಕಲರ್‌ಕೋಡ್ ರಾಷ್ಟ್ರೀಯ ಹೆದ್ದಾರಿಯಲ್ಲಿ ವಿದ್ಯಾರ್ಥಿಗಳು ಪ್ರಯಾಣಿಸುತ್ತಿದ್ದ ಕಾರು ಗುರುವಾಯುರ್‌ನಿಂದ ಕಾಯಂಕುಲಕ್ಕೆ ತೆರಳುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್‌ಗೆ ಡಿಕ್ಕಿ ಹೊಡೆದಿದೆ. ಡಿಕ್ಕಿ ಹೊಡೆದ ಪರಿಣಾಮ ಓರ್ವ ವಿದ್ಯಾರ್ಥಿ ಸ್ಥಳದಲ್ಲೇ ಸಾವನ್ನಪ್ಪಿದ್ದು, ನಾಲ್ವರು ಚಿಕಿತ್ಸೆ ಫಲಕಾರಿಯಾಗದೆ ಆಸ್ಪತ್ರೆಯಲ್ಲಿ ಸಾವನ್ನಪ್ಪಿದ್ದಾರೆ. ಭಾರೀ ಮಳೆ ಸುರಿಯುತ್ತಿರುವ ಕಾರಣ ಓವರ್‌ಟೇಕ್ ಮಾಡಲು ಚಾಲಕ ಮುಂದಾಗಿದ್ದ. ಈ ವೇಳೆ ಈ ಅಪಘಾತ ಸಂಭವಿಸಿದೆ ಎಂದು ಪೊಲೀಸರು ಮಾಹಿತಿ ನೀಡಿದ್ದಾರೆ. ಡಿಕ್ಕಿಯ ರಭಸಕ್ಕೆ ಕಾರು ಸಂಪೂರ್ಣ ಜಖಂಗೊಂಡಿದ್ದು, ಕಾರಿನ ಮೇಲ್ಭಾಗ ಕತ್ತರಿಸಿ ವಿದ್ಯಾರ್ಥಿಗಳನ್ನು ಹೊರತೆಗೆಯಲಾಗಿದೆ. ಬಸ್‌ನಲ್ಲಿದ್ದ 12 ಮಂದಿಗೂ ಸಣ್ಣಪುಟ್ಟ ಗಾಯಗಳಾಗಿದ್ದು, ಅವರನ್ನು ಚಿಕಿತ್ಸೆಗೆ ದಾಖಲಿಸಲಾಗಿದೆ.

### ಶೇ.98ರಷ್ಟು 2000 ಮುಖ ಬೆಲೆಯ ನೋಟುಗಳು ವಾಪಸ್

**ಮುಂಬೈ:** ಡಿ.3-2,000 ಮುಖಬೆಲೆಯ 98.08% ನೋಟುಗಳು ಬ್ಯಾಂಕಿಂಗ್ ವ್ಯವಸ್ಥೆಗೆ ಮರಳಿದೆ ಮತ್ತು 6,839 ಕೋಟಿ ರೂ. ಮೌಲ್ಯದ ನೋಟುಗಳು ಇನ್ನೂ ಸಾರ್ವಜನಿಕರ ಬಳಿ ಇವೆ ಎಂದು ರಿಸರ್ವ್ ಬ್ಯಾಂಕ್ ಮಾಹಿತಿ ನೀಡಿದೆ. 2023ರ ಮೇ 19ರಂದು ಭಾರತೀಯ ರಿಸರ್ವ್ ಬ್ಯಾಂಕ್ 2,000ರೂ. ಮುಖಬೆಲೆಯ ನೋಟುಗಳನ್ನು ಚಲಾವಣೆಯಿಂದ ಹಿಂತೆಗೆದುಕೊಳ್ಳುವುದಾಗಿ ಘೋಷಿಸಿತ್ತು. 2023ರ ಮೇ 19ರಂದು ವ್ಯವಹಾರದ ಮುಕ್ತಾಯದ ವೇಳೆಗೆ ಚಲಾವಣೆಯಲ್ಲಿರುವ 2,000 ರೂ. ಮುಖಬೆಲೆಯ ನೋಟುಗಳ ಒಟ್ಟು ಮೌಲ್ಯವು 3.56 ಲಕ್ಷ ಕೋಟಿ ಎಂದು ಹೇಳಿತ್ತು. 2024ರ ನವೆಂಬರ್ 29ರಂದು ವ್ಯವಹಾರದ ಮುಕ್ತಾಯದ ವೇಳೆಗೆ ಇದು 6,839 ಕೋಟಿ ರೂ.ಗೆ ಇಳಿಕೆಯಾಗಿದೆ ಎಂದು ಆರ್ ಬಿಐ ತಿಳಿಸಿದೆ.

ಬ್ಯಾಂಕ್‌ಗಳಲ್ಲಿ ಠೇವಣಿ ಇಡುವ ಹಾಗೂ ಬೇರೆ ಮುಖಬೆಲೆಯ ನೋಟುಗಳೊಂದಿಗೆ ಬದಲಾಯಿಸಿಕೊಳ್ಳುವುದಕ್ಕೆ ಆರ್ ಬಿ ಐ ಅವಕಾಶ ಕಲ್ಪಿಸಿತ್ತು. ಮೇ 19, 2023ರಲ್ಲಿ ಚಲಾವಣೆಯಲ್ಲಿದ್ದ 2,000 ರೂ. ಮುಖಬೆಲೆಯ ನೋಟುಗಳಲ್ಲಿ 98.08 ಪ್ರತಿಶತವನ್ನು ಹಿಂತಿರುಗಿಸಲಾಗಿದೆ ಎಂದು ಆರ್ ಬಿ ಐ ಹೇಳಿಕೆಯಲ್ಲಿ ತಿಳಿಸಿದೆ.

### ಸೊಲ್ಲಾಪುರದಲ್ಲಿ ಅನಧಿಕೃತ ಮತದಾನಕ್ಕೆ ಬ್ಯಾಲೆಟ್ ಪೇಪರ್ ಬಳಕೆ

**ಪುಣೆ:** ಹೆಚ್ಚಿನ ಮತದಾರರು ಎಂವಿಎ ಬೆಂಬಲಿಗರಾಗಿರುವ ಮಹಾರಾಷ್ಟ್ರದ ಸೊಲ್ಲಾಪುರದ ಮಾರ್ಕಡ್ವಾಡಿಯಲ್ಲಿ ಅನಧಿಕೃತವಾಗಿ ಮತದಾನ ನಡೆಯಲಿದ್ದು, ಈ ಬಾರಿ ಚುನಾವಣಾ ಆಯೋಗದ ಅಂಕಿಅಂಶಗಳನ್ನು ಪ್ರಶ್ನಿಸಲು ಬ್ಯಾಲೆಟ್ ಪೇಪರ್‌ಗಳನ್ನು ಬಳಸಲಾಗಿದೆ. ಮರ್ಕಡವಾಡಿ ಸೊಲ್ಲಾಪುರದ ಮಲ್ಶಿರಾಸ್ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಗೆ ಬರುತ್ತದೆ, ಇಲ್ಲಿ ಎನ್‌ಸಿಪಿ (ಎಸ್‌ಪಿ) ನ ಉತ್ತಮರಾವ್ ಜನ್ಕರ್ ಅವರು ಬಿಜೆಪಿಯ ಮಾಜಿ ಶಾಸಕ ರಾಮ್ ಸತ್ಪುಟೆ ಅವರನ್ನು ಸೋಲಿಸಿದ್ದರರು ಜನಕರ್ ಗೆಲುವು ಸಾಧಿಸಿದ್ದಾರೆ. ಆದರೆ ಗ್ರಾಮದ ಎಂವಿಎ ಬೆಂಬಲಿಗರು ಇವಿಎಂ ಎಣಿಕೆಯ ಅಂಕಿಅಂಶಗಳನ್ನು ಚುನಾವಣಾ ಬಿಡುಗಡೆ ಮಾಡಿದ್ದು ಅದು ಬಿಜೆಪಿ ಅಭ್ಯರ್ಥಿ ಮುನ್ನಡೆ ಸಾಧಿಸಿದೆ ಎಂದು ತೋರಿಸಿದೆ.

ಸೊಲ್ಲಾಪುರ ಆಡಳಿತ ಕೆಲವು ಗ್ರಾಮಸ್ಥರಿಗೆ ‘‘ಮರು ಮತದಾನ’’ದಿಂದ ದೂರವಿರಲು ನೋಟಿಸ್ ನೀಡಿತ್ತು, ಏಕೆಂದರೆ ಇದು ಪ್ರದೇಶದಲ್ಲಿ ಉದ್ವಿಗ್ನತೆಗೆ ಕಾರಣವಾಗಬಹುದು ಎನ್ನಲಾಗಿದೆ. ಈ ಹಿನ್ನೆಲೆಯಲ್ಲಿ ಪೊಲೀಸ್ ಪಡೆ ನಿಯೋಜಿಸಲಾಗಿದೆ.

ಸೊಲ್ಲಾಪುರ ಪೊಲೀಸ್ ವರಿಷ್ಠಾಧಿಕಾರಿ ಅತುಲ್ ಕುಲಕರ್ಣಿ ಮಾತನಾಡಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಮುಂಜಾಗ್ರತಾ ಕ್ರಮವಾಗಿ ನೋಟಿಸ್ ಜಾರಿ ಮಾಡಿದ್ದೇವೆ, ಕಾನೂನು ಸುವ್ಯವಸ್ಥೆಗೆ ಕಾರಣವಾಗುವ ಯಾವುದೇ ಹೆಜ್ಜೆಯನ್ನು ತಪ್ಪಿಸಲು ಗ್ರಾಮಸ್ಥರ ಮನವೊಲಿಸಲು ಆಡಳಿತವು ಗ್ರಾಮಸ್ಥರೊಂದಿಗೆ ಮಾತುಕತೆ ನಡೆಸುತ್ತಿದೆ ಎಂದಿದ್ದಾರೆ. ಗ್ರಾಮದವರಲ್ಲಿ ಒಬ್ಬರಾದ ರಂಜೀತ್ ಮರ್ಕಡ್ ಗ್ರಾಮದಲ್ಲಿ 2,000 ಕ್ಕೂ ಹೆಚ್ಚು ಅರ್ಹ ಮತದಾರರನ್ನು ಹೊಂದಿದ್ದೇವೆ, ಚುನಾವಣಾ ಡೇಟಾವನ್ನು ನಂಬುವುದಿಲ್ಲ. ಹಾಗಾಗಿ ಮತ ಹಂಚಿಕೆಯ ಸಾಕ್ಷ್ಯ ಪಡೆಯಲು ಡಿ.3ರಂದು ಮತಯಂತ್ರಗಳ ಮೇಲೆ ಮತದಾನ ಆಯೋಜಿಸಿದ್ದೇವೆ ಎಂದಿದ್ದಾರೆ


### ಮಸ್ಕ್‌ನ ಸ್ಟಾರ್‌ಲಿಂಕ್ ಮೊರೆ ಹೋದ ಅಂಡಮಾನ್ ಪೊಲೀಸರು

**ಪೋರ್ಟ್ ಬ್ಲೇರ್:** ಅಂಡಮಾನ್, ನಿಕೋಬಾರ್‌ನಲ್ಲಿ ಇತ್ತೀಚೆಗೆ ಪೊಲೀಸರು ವಶಪಡಿಸಿಕೊಂಡ 360 ಶತಕೋಟಿ ರೂ. ಮೌಲ್ಯದ ಮಾದಕ ವಸ್ತು ಕಳ್ಳಸಾಗಾಣಿಕೆ ಜಾಲದ ಮಾಹಿತಿ ಕಲೆ ಹಾಕಲು

ಅಂಡಮಾನ್ ಪೊಲೀಸರು ಎಲೋನ್ ಮಸ್ಕ್‌ನ ಸ್ಟಾರ್‌ಲಿಂಕ್ ಮೊರೆ ಹೋಗುವುದಾಗಿ ಅಧಿಕಾರಿಗಳು ತಿಳಿಸಿದ್ದಾರೆ. ಭಾರತೀಯ ಸಮುದ್ರ ಗಡಿಗೆ ಮಾದಕವಸ್ತು ತರಲು ಆರೋಪಿಗಳು ಉಪಗ್ರಹ ಆಧಾರಿತ ಇಂಟರ್ನೆಟ್ ಸಾಧನವನ್ನು ಬಳಸಿದ್ದಾರೆ. ಅವರ ಮಾಹಿತಿ ಕಲೆಹಾಕಲು ಪೊಲೀಸರು ಎಲೋನ್ ಮಸ್ಕ್‌ನ ಸ್ಟಾರ್‌ಲಿಂಕ್‌ನಿಂದ ವಿವರಗಳನ್ನು ಪಡೆಯಲಿದ್ದಾರೆ ಎಂದು ಅಂಡಮಾನ್ ದ್ವೀಪದ ಉನ್ನತ ಪೊಲೀಸ್ ಅಧಿಕಾರಿ ಹರಗೋಬಿಂದರ್ ಎಸ್. ಧಲಿವಾಲ್ ತಿಳಿಸಿದ್ದಾರೆ.

ಅಂಡಮಾನ್ ಮತ್ತು ನಿಕೋಬಾರ್ ದ್ವೀಪಗಳ ಸಮೀಪ ಮ್ಯಾನ್ಮಾರ್ ಬೋಟ್‌ನಲ್ಲಿ ಸಾಗಿಸುತ್ತಿದ್ದ 6,000 ಕೆಜಿ ಗಿಂತ ಹೆಚ್ಚಿನ ಮಾದಕ ವಸ್ತು ಮೆತ್‌ನ್ನು ವಶಪಡಿಸಿಕೊಂಡಿದ್ದರು. ಅಲ್ಲದೇ ಆರು ಮ್ಯಾನ್ಮಾರ್ ಪ್ರಜೆಗಳನ್ನು ಬಂಧಿಸಿದ್ದರು. ಈ ಪ್ರಕರಣದಲ್ಲಿ ಮೊದಲ ಬಾರಿಗೆ ಸ್ಟಾರ್‌ಲಿಂಕ್‌ನ ಸಾಧನವನ್ನು ಭಾರತೀಯ ಜಲಭಾಗವನ್ನು ತಲುಪಲು ಆರೋಪಿಗಳು ಬಳಸಿರುವುದು ತನಿಖೆ ವೇಳೆ ತಿಳಿದು ಬಂದಿದೆ.

ಸ್ಟಾರ್‌ಲಿಂಕ್ ಉಪಗ್ರಹ ಆಧಾರಿತ ಇಂಟರ್‌ನೆಟ್ ಒದಗಿಸುತ್ತದೆ. ಅಲ್ಲದೇ ಅಂತರರಾಷ್ಟ್ರೀಯ ಸಂಪರ್ಕವನ್ನು ಇದು ಒದಗಿಸುತ್ತದೆ. ಈ ಸಾಧನವನ್ನು ಯಾರು, ಯಾವಾಗ ಖರೀದಿಸಿದ್ದಾರೆ ಎಂದು ಸ್ಟಾರ್‌ಲಿಂಕ್‌ನಿಂದ ವಿವರಗಳನ್ನು ಪಡೆಯಲು ಪೊಲೀಸರು ಮುಂದಾಗಿದ್ದಾರೆ.



# ಕಂಟೆಂಟ್ ಇರುವ ಸಿನಿಮಾವನ್ನು ಜನ ಕೈಬಿಡಲ್ಲ

'ಯುಐ' ಟೀಮ್ ಜೊತೆ ನಟ ಉಪೇಂದ್ರ, ಇಂದು (ಡಿ.3) ಮಂಗಳೂರಿನ ಕಟೀಲು ದುರ್ಗಾಪರಮೇಶ್ವರಿ ದೇವಸ್ಥಾನ ಮತ್ತು ಕೊರಗಜ್ಜ ದೈವ ಸನ್ನಿಧಿಗೆ ಭೇಟಿ ನೀಡಿದ್ದಾರೆ.

ಕಂಟೆಂಟ್ ಇರುವ ಸಿನಿಮಾವನ್ನು ಜನ ಕೈಬಿಡೋದಿಲ್ಲ ಎಂದಿದ್ದಾರೆ. ಉಪೇಂದ್ರ ಮಾತನಾಡಿ, ಕಂಟೆಂಟ್ ಇರುವ ಸಿನಿಮಾವನ್ನು ಪ್ರೇಕ್ಷಕರು ಎಂದು ಕೈಬಿಡೋದಿಲ್ಲ. ಹಾಗಂತ ಓಡದೇ ಇರುವ ಸಿನಿಮಾವೆಲ್ಲ ಚೆನ್ನಾಗಿಲ್ಲ ಎಂದು ಕೂಡ ನಾನು ಹೇಳಲ್ಲ. ಅದಕ್ಕೆ ಹಲವಾರು ಕಾರಣವಿದೆ. ಕೆಲವರಿಗೆ ಪಬ್ಲಿಸಿಟಿ ಮಾಡಲು ಆಗದೇ ಇರಬಹುದು ಎಂದಿದ್ದಾರೆ.

ಲಹರಿ ಸಂಸ್ಥೆಯ ರೂವಾರಿ ಲಹರಿ ವೇಲು ಮಾತನಾಡಿ, ಇಷ್ಟು ವರ್ಷಗಳಲ್ಲಿ ಮೊದಲ ಬಾರಿಗೆ ಮಂಗಳೂರಿನಲ್ಲಿ ಪ್ರೆಸ್ ಮೀಟ್ ಮಾಡುತ್ತಿದ್ದೇವೆ. ಕಟೀಲು ದೇವಿ ಮತ್ತು ಕೊರಗಜ್ಜ ದೈವ ದರ್ಶನ ಪಡೆದಿದ್ದೇವೆ. ಮಂಗಳೂರಿನಲ್ಲಿ ಪಾಸಿಟಿವ್ ವೈಬ್ ಇದೆ. ಇಲ್ಲಿ ದೇವರ ದರ್ಶನ ಮಾಡಿದ್ಮೇಲೆ ಮತ್ತಷ್ಟು ಪಾಸಿಟಿವ್ ವೈಬ್ ಸಿಕ್ಕಿದೆ. ಇದೇ ಡಿ.20ರಂದು ಐದು ಭಾಷೆಗಳಲ್ಲಿ 'ಯುಐ' ಸಿನಿಮಾ ರಿಲೀಸ್ ಮಾಡುತ್ತಿದ್ದೇವೆ. ಬಹಳ ಕಷ್ಟಪಟ್ಟು ಸಿನಿಮಾ ಮಾಡಿದ್ದೇವೆ ಬೆಂಬಲಿಸಿ ಎಂದು ಮಾತನಾಡಿದರು. ಅಂದಹಾಗೆ, ಯುಐ'ಯುಗದಲ್ಲಿ ಯುಐ'ಮ್ಯಾಜಿಕ್, ಟ್ರೈಲರ್‌ನಲ್ಲಿ ಮಸ್ತ್ ಆಗಿ ಮೂಡಿ ಬಂದಿದೆ. ಪ್ರೇಕ್ಷಕರ ಬುದ್ಧಿವಂತಿಕೆಗೆ ಯುಐ'ವಾರ್ನರ್ (ಟ್ರೈಲರ್) ಸವಾಲು ಹಾಕುವಂತಿದೆ. ಹಸಿವಿಗಾಗಿ ಜನರ ಹೊಡೆದಾಟ, ರಕ್ತಪಾತ ಇದು ಯುಐ' ಟ್ರೈಲರ್‌ನಲ್ಲಿ ರೋಚಕವಾಗಿ ತೋರಿಸಲಾಗಿದೆ. ಜಾತಿ, ಅಧಿಕಾರ ಭಾರತಕ್ಕೆ ಮಾರಕವಾಗುತ್ತ? ಎಂಬ ಜಿದ್ದಾ ಜಿದ್ದಿಯ ನಡುವೆ ಧಿಕ್ಕಾರಕ್ಕಿಂತ ಅಧಿಕಾರಕ್ಕೆ ಬೆಲೆ ಜಾಸ್ತಿ ಎಂದು ಖಡಕ್ ಆಗಿ ಉಪೇಂದ್ರ ಡೈಲಾಗ್ ಹೊಡೆದಿದ್ದಾರೆ. ಗನ್ ಹಿಡಿದು ಜನಗಳ ಕಡೆ ಶೂಟ್ ಮಾಡುತ್ತ ಖಡಕ್ ಲುಕ್‌ನ 'ಲ್ಲಿ ಉಪ್ಪಿ ಕಾಣಿಸಿಕೊಂಡಿದ್ದಾರೆ. ಈ ಮೂಲಕ ಯುಐ' ಸಿನಿಮಾ ಕಥೆಯ ಬಗ್ಗೆ ಫ್ಯಾನ್ಸ್‌ಗೆ ಕೌತುಕ ಮೂಡುವಂತೆ ಮಾಡಿದ್ದಾರೆ. ಇನ್ನೂ 2040 ಭವಿಷ್ಯದ ಅಸಲಿ ಕಥೆ ಹೇಳಲು 'ಯುಐ' ಸಿನಿಮಾ ಮೂಲಕ ಉಪೇಂದ್ರ ಸಜ್ಜಾಗಿದ್ದಾರೆ.

# ಛತ್ರಪತಿ ಶಿವಾಜಿ ಮಹಾರಾಜ್ ಪಾತ್ರದಲ್ಲಿ ಡಿವೈನ್ ಸ್ಟಾರ್



'ಕಾಂತಾರ ಚಾಪ್ಟರ್ 1 ಸಿನಿಮಾ ಕೆಲಸದ ನಡುವೆಯೇ ಇತ್ತೀಚೆಗೆ ರಿಷಬ್ ಶೆಟ್ಟಿ ತೆಲುಗಿನ 'ಜೈ ಹನುಮಾನ್' ಸಿನಿಮಾಗೆ ಗ್ರೀನ್ ಸಿಗ್ನಲ್ ನೀಡಿದ್ದರು. ಇದೀಗ ಛತ್ರಪತಿ ಶಿವಾಜಿ ಮಹಾರಾಜ್ ಪಾತ್ರದಲ್ಲಿ ಡಿವೈನ್ ಸ್ಟಾರ್ ರಿಷಬ್ ಕಾಣಿಸಿಕೊಳ್ಳಲಿದ್ದಾರೆ. ಈ ಸಿನಿಮಾ ಬಗ್ಗೆ ಇದೀಗ ಅಧಿಕೃತವಾಗಿ ಮಾಹಿತಿ ಹೊರಬಿದ್ದಿದೆ.


ಡೈರೆಕ್ಟರ್ ಸಂದೀಪ್ ಸಿಂಗ್ ಅವರ ಹಿಸ್ಟೋರಿಕಲ್ ಡ್ರಾಮಾ ಸಿನಿಮಾದಲ್ಲಿ ರಿಷಬ್ ನಟಿಸಲಿದ್ದಾರೆ. ಸದ್ಯ ಶಿವಾಜಿ ಮಹಾರಾಜ್ ಲುಕ್‌ನಲ್ಲಿ ಖಡ್ಗ ಹಿಡಿದು ರಿಷಬ್ ಕಾಣಿಸಿಕೊಂಡಿರುವ ಲುಕ್ ರಿವೀಲ್ ಆಗಿದೆ. ಈ ಪೋಸ್ಟರ್ ನೋಡಿ ಫ್ಯಾನ್ಸ್ ಥ್ರಿಲ್ ಆಗಿದ್ದಾರೆ. ಅದಷ್ಟೇ ಅಲ್ಲ, ಛತ್ರಪತಿ ಶಿವಾಜಿ ಮಹಾರಾಜ್ ಕುರಿತಾದ ಈ ಬಯೋಪಿಕ್ ಸಿನಿಮಾವು 2027ರ ಜನವರಿ 21ರಂದು ಬಿಡುಗಡೆ ಯಾಗುವುದಾಗಿ ಕೂಡ ಚಿತ್ರತಂಡ ಅನೌನ್ಸ್ ಮಾಡಿದೆ.



# ಬುಡಕಟ್ಟು ಮಹಿಳೆಯರ ಜೊತೆ ರಮ್ಯಾ ಡಾನ್ಸ್

ಸ್ಯಾಂಡಲ್‌ವುಡ್ ಕ್ವೀನ್ ರಮ್ಯಾ ನ.29 ರಂದು ಅವರ ಹುಟ್ಟು ಹಬ್ಬದ ಹಿನ್ನೆಲೆ ಆಫ್ರಿಕಾಗೆ ತೆರಳಿದ್ದಾರೆ. ಅಲ್ಲಿನ ಸುಂದರ ಜಾಗಗಳಿಗೆ ನಟಿ ಭೇಟಿ ನೀಡಿದ್ದಾರೆ. ಇದೀಗ ಬುಡಕಟ್ಟು ಮಹಿಳೆಯರ ಜೊತೆ ನಟಿ ಹೆಜ್ಜೆ ಹಾಕಿದ್ದಾರೆ. ಈ ಕುರಿತ ಪೋಸ್ಟ್‌ವೊಂದನ್ನು ನಟಿ ಶೇರ್ ಮಾಡಿದ್ದಾರೆ. ನ.29ರಂದು ರಮ್ಯಾ ಆಫ್ರಿಕಾದಲ್ಲಿ ಜನ್ಮದಿನವನ್ನು ಸೆಲೆಬ್ರೇಟ್ ಮಾಡಿಕೊಂಡಿದ್ದಾರೆ. ಅದಷ್ಟೇ ಅಲ್ಲ, ಇಲ್ಲಿಯ ಹುಲಿ, ಆನೆ, ಸಿಂಹ, ಜಿರಾಫೆ ಹೀಗೆ ನಾನಾ ಪ್ರಾಣಿಗಳ ಫೋಟೋವನ್ನು ಸುಂದರವಾಗಿ ಸೆರೆಹಿಡಿದ್ದಾರೆ. ಬಳಿಕ ಬುಡಕಟ್ಟು ಜನಾಂಗದ ಮಹಿಳೆಯರ ಜೊತೆ ರಮ್ಯಾ ನೃತ್ಯ ಮಾಡಿರುವ ವಿಡಿಯೋ ಇದೀಗ ಅಭಿಮಾನಿಗಳ ಗಮನ ಸೆಳೆದಿದೆ. ಬುಡಕಟ್ಟು ಮಹಿಳೆಯರು ಕೆಂಪು ಬಣ್ಣದ ಉಡುಪು ತೊಟ್ಟಿದ್ದಾರೆ. ತಮ್ಮ ಸಂಪ್ರದಾಯದಂತೆ ಆಭರಣಗಳನ್ನು ಧರಿಸಿಕೊಂಡಿದ್ದಾರೆ. ಹಾಗೆ ಅದ್ಭುತ ಅನಿಸೋ ನೃತ್ಯವನ್ನು ಮಾಡಿದ್ದಾರೆ. ಈ ವಿಶೇಷ ನೃತ್ಯದಲ್ಲಿ ರಮ್ಯಾ ಕೂಡ ಭಾಗಿ ಆಗಿದ್ದಾರೆ. ಅಷ್ಟೇ ಖುಷಿಯಿಂದಲೇ ನೃತ್ಯ ಮಾಡಿ ಸಂಭ್ರಮಿಸಿದ್ದಾರೆ.

# ಮತ್ತೆ ಒಂದಾದ ಸಕ್ಸಸ್ ಜೋಡಿ ರಚಿತಾ, ಸತೀಶ್



ಅಯೋಗ್ಯ ಸಿನಿಮಾ ಮೂಲಕ ಮೋಡಿ ಮಾಡಿದ್ದ ಈ ಜೋಡಿ ಇದೀಗ 6 ವರ್ಷಗಳ ಬಳಿಕ ಮತ್ತೆ ಅಭಿಮಾನಿಗಳ ಮುಂದೆ ಬರಲು ಸಜ್ಜಾಗಿದೆ.

ಹಿಟ್ ಸಿನಿಮಾಗಳ ಸೀಕ್ವೆಲ್ ಅಥವಾ ಪ್ರೀಕ್ವೆಲ್ ಮಾಡುವ ಟ್ರೆಂಡ್ ಇತ್ತೀಚೆಗೆ ಹೆಚ್ಚಾಗಿದೆ. ಯಾವುದೇ ಸಿನಿಮಾ ಹಿಟ್ ಆದರೂ ಅದರ ಸೀಕ್ವೆಲ್ ಅಥವಾ ಪ್ರೀಕ್ವೆಲ್ ಗಳನ್ನು ಮಾಡಲಾಗುತ್ತಿದೆ. ಇದೀಗ ಇದೇ ಪಟ್ಟಿಗೆ ಸೇರಲಿದೆ ಸತೀಶ್ ನೀನಾಸಂ, ರಚಿತಾ ರಾಮ್ ನಟನೆಯ 'ಅಯೋಗ್ಯ' ಸಿನಿಮಾ. 2018 ರಲ್ಲಿ ಬಿಡುಗಡೆ ಆಗಿ ಹಿಟ್ ಆಗಿದ್ದ 'ಅಯೋಗ್ಯ' ಸಿನಿಮಾದ ಸೀಕ್ವೆಲ್ ನಿರ್ಮಾಣವಾಗುತ್ತಿದ್ದು, ಅದೇ ಜೋಡಿ ಈಗ ಮತ್ತೆ ಒಂದಾಗಿದೆ.

ಅಯೋಗ್ಯ ಸಿನಿಮಾ ಮೂಲಕ ಮೋಡಿ ಮಾಡಿದ್ದ ಈ ಜೋಡಿ ಇದೀಗ 6 ವರ್ಷಗಳ ಬಳಿಕ ಮತ್ತೆ ಅಭಿಮಾನಿಗಳ ಮುಂದೆ ಬರಲು ಸಜ್ಜಾಗಿದೆ. ಅಯೋಗ್ಯ ಸಿನಿಮಾದ ಪಾರ್ಟ್ 2 ಸೆಟ್ಟೇರುತ್ತಿದ್ದು, ಈಗಾಲೇ ಮುಹೂರ್ತಕ್ಕೆ ಡೇಟ್ ಫಿಕ್ಸ್ ಆಗಿದೆ.

6 ವರ್ಷದ ಹಿಂದೆ ಸಿದ್ದೇಗೌಡ ಹಾಗೂ ನಂದಿನಿ ಲವ್ ಸ್ಟೋರಿಗೆ ಕನ್ನಡ ಸಿನಿಮಾ ಪ್ರೇಮಿಗಳು ಶಹಬ್ಬಾಸ್ ಎಂದಿದ್ದರು. ಈಗ ಮತ್ತದೇ ತಂಡ 'ಅಯೋಗ್ಯ 2' ಸಿನಿಮಾ ಮೂಲಕ ಒಂದಾಗುತ್ತಿರುವುದು ಅಭಿಮಾನಿಗಳಲ್ಲಿ ಕುತೂಹಲ ಹೆಚ್ಚಾಗಿದೆ. ಇನ್ನು 'ಅಯೋಗ್ಯ 2' ಸಿನಿಮಾ ಡಿಸೆಂಬರ್ 11ರಂದು ಸೆಟ್ಟೇರಲಿದ್ದು, ಮಹೇಶ್ ಕುಮಾರ್ ನಿರ್ದೇಶನ ಮಾಡಲಿದ್ದಾರೆ.

ಎಂ ಮುನೇಗೌಡ 'ಅಯೋಗ್ಯ 2' ಸಿನಿಮಾಗೆ ಬಂಡವಾಳ ಹೂಡುತ್ತಿದ್ದಾರೆ. ಅರ್ಜುನ್ ಜನ್ಯ ಸಂಗೀತ ನಿರ್ದೇಶನ ಇರಲಿದೆ. 'ಅಯೋಗ್ಯ' ಸಿನಿಮಾಕ್ಕೆ ಸಂಗೀತ ನೀಡಿದ್ದ ಅರ್ಜುನ್ ಜನ್ಯ ಅವರೇ ಹೊಸ ಸಿನಿಮಾಕ್ಕೂ ಸಂಗೀತ ನೀಡಲಿದ್ದಾರೆ. ವಿಶ್ವಜಿತ್ ರಾವ್ ಅವರು ಕ್ಯಾಮೆರಾ ಕೆಲಸ ನಿರ್ವಹಿಸಲಿದ್ದಾರೆ. ಸುರೇಶ್ ಆರ್ಮುಗಂ ಎಡಿಟರ್. ಸಂಭಾಷಣೆಯನ್ನು ಮಾಸ್ತಿ ಬರೆಯಲಿದ್ದಾರೆ. ಭರ್ಜರಿ ಚೇತನ್ ಹಾಡುಗಳಿಗೆ ಸಾಹಿತ್ಯ ಒದಗಿಸಲಿದ್ದಾರೆ.

# ಟ್ವಿಸ್ಟ್ ಕೊಟ್ಟ 'ಬಿಗ್ ಬಾಸ್'

## ಈ ಬಾರಿ ಸ್ಪರ್ಧಿಗಳ ಭವಿಷ್ಯ ವೀಕ್ಷಕರ ಕೈಯಲ್ಲಿ

'ಬಿಗ್ ಬಾಸ್ ಕನ್ನಡ 11'ರ ಆಟ 70ನೇ ದಿನದತ್ತ ಮುನ್ನುಗ್ಗುತ್ತಿದೆ. ದಿನದಿಂದ ದಿನಕ್ಕೆ ತಿರುವು ಪಡೆದುಕೊಳ್ಳುತ್ತಿರುವ ದೊಡ್ಮನೆ ಆಟದಲ್ಲಿ 'ಬಿಗ್ ಬಾಸ್' ಹೊಸ ಟ್ವಿಸ್ಟ್ ಕೊಟ್ಟಿದ್ದಾರೆ. ಶೋಭಾ ಶೆಟ್ಟಿ ಎಲಿಮಿನೇಷನ್ ಬಳಿಕ ಇನ್ನೂಳಿದ ಸ್ಪರ್ಧಿಗಳು ಮನೆಯಲ್ಲಿ ಆಟ ಮುಂದುವರೆಸಲು ಹೊಸ ಟ್ವಿಸ್ಟ್ ಕೊಟ್ಟಿದ್ದಾರೆ. ಸ್ಪರ್ಧಿಗಳು ಭವಿಷ್ಯ ವೀಕ್ಷಕರ ಕೈಯಲ್ಲಿದೆ.




ದೊಡ್ಮನೆಯಲ್ಲಿ ಎರಡು ಚಾನೆಲ್‌ಗಳಾಗಿ ವಿಂಗಡಿಸಿದ್ದಾರೆ. ಮನೆಯಲ್ಲಿರುವ ಸ್ಪರ್ಧಿಗಳು ಎರಡು ತಂಡಗಳಾಗಿ ಡಿವೈಡ್ ಆಗಿದ್ದಾರೆ. ಪರಸ್ಪರ ಪೈಪೋಟಿಗೆ ಬಿದ್ದಿದ್ದಾರೆ. ಬ್ರೇಕಿಂಗ್ ನ್ಯೂಸ್ ಆಟವನ್ನು ಆಡಿದ್ದಾರೆ. 2 ತಂಡಗಳಿಗೂ ಕೊಡ್ತಿರುವ ಟಾಸ್ಕ್‌ಗಳನ್ನು ಪೈಪೋಟಿಗೆ ಬಿದ್ದು ಆಟ ಆಡುತ್ತಿದ್ದಾರೆ. ಈ ಎರಡು ತಂಡಗಳಲ್ಲಿ ಯಾರು ಹೆಚ್ಚು ಮನರಂಜನೆ ನೀಡಿದರು ಎಂಬುದನ್ನು ನಿರ್ಧರಿಸುವುದು ಮಾತ್ರ ವೀಕ್ಷಕರು. ಹೌದು, 'ಬಿಗ್ ಬಾಸ್ ಕನ್ನಡ' ಶೋನ ಇತಿಹಾಸದಲ್ಲೇ ಪ್ರಪ್ರಥಮ ಬಾರಿಗೆ ಇಂಥದ್ದೊಂದು ಟ್ವಿಸ್ಟ್ ನೀಡಲಾಗಿದೆ. ಈ ವಾರ ಅತೀ ಹೆಚ್ಚು ಮನರಂಜನೆ ಕೊಡುವ ವಾಹಿನಿಯ ತಂಡ ಯಾವುದು ಎಂದು ವೀಕ್ಷಕರೇ ನಿರ್ಧರಿಸಿ ವೋಟ್ ಮಾಡಬೇಕಿದೆ.


ಜಿಯೋ ಸಿನಿಮಾ ಆಪ್ ಮೂಲಕ ವೀಕ್ಷಕರು ವೋಟ್ ಮಾಡಲಿದ್ದಾರೆ. ಡಿ.2ರ ರಾತ್ರಿಯ ಬಿಗ್ ಬಾಸ್ ಕನ್ನಡ ಸಂಚಿಕೆ ಪ್ರಸಾರವಾದ ಬಳಿಕ ಜಿಯೋ ಸಿನಿಮಾ ಆಪ್‌ನಲ್ಲಿ ವೋಟಿಂಗ್ ಲೈನ್ ತೆರೆದುಕೊಳ್ಳಲಿವೆ.

# ದಾಖಲೆಗಳೊಂದಿಗೆ ಆರ್‌ಸಿಬಿಗೆ ಬಂದ ಭುವಿ ಮುಂದೇನು

ಐಪಿಎಲ್‌ನಲ್ಲಿ 176 ಪಂದ್ಯಗಳನ್ನಾಡಿರುವ ಭುವನೇಶ್ವರ್ ಕುಮಾರ್ ಈವರೆಗೆ 176 ಪಂದ್ಯಗಳನ್ನಾಡಿದ್ದಾರೆ. ಈ ವೇಳೆ 3910 ಎಸೆತಗಳನ್ನು ಎಸೆದಿರುವ ಅವರು ಒಟ್ಟು 181 ವಿಕೆಟ್‌ಗಳನ್ನು ಕಬಳಿಸಿದ್ದಾರೆ. ಈ ಮೂಲಕ ಐಪಿಎಲ್ ಇತಿಹಾಸದ ಅತ್ಯಂತ ಯಶಸ್ವಿ ಬೌಲರ್‌ಗಳಲ್ಲಿ ಗುರುತಿಸಿಕೊಂಡಿದ್ದಾರೆ. ಟೀಮ್ ಇಂಡಿಯಾದ ಸ್ವಿಂಗ್ ಕಿಂಗ್ ಎಂದೇ ಗುರುತಿಸಿಕೊಂಡಿರುವ ಭುವನೇಶ್ವರ್ ಕುಮಾರ್ ಈ ಬಾರಿಯ ಐಪಿಎಲ್‌ನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಪರ ಕಣಕ್ಕಿಳಿಯಲಿದ್ದಾರೆ. ಈ ಬಾರಿಯ ಐಪಿಎಲ್ ಮೆಗಾ ಹರಾಜಿನ ಮೂಲಕ ಆರ್‌ಸಿಬಿ ಫ್ರಾಂಚೈಸಿ ಭುವಿಯನ್ನು ಬರೋಬ್ಬರಿ 10.75 ರೂ.ಗೆ ಖರೀದಿಸಿದೆ. ಈ ಹಿಂದೆ ಪುಣೆ ವಾರಿಯರ್ಸ್ ಮತ್ತು ಸನ್‌ರೈಸರ್ಸ್ ಹೈದರಾಬಾದ್ ಪರ ಕಣಕ್ಕಿಳಿದಿದ್ದ ಭುವನೇಶ್ವರ್ ಕುಮಾರ್ ಹಲವು ದಾಖಲೆಗಳನ್ನು ನಿರ್ಮಿಸಿದ್ದರು. ಇದೀಗ ಈ ದಾಖಲೆಯೊಂದಿಗೆ ಆರ್‌ಸಿಬಿ ತಂಡಕ್ಕೆ ಎಂಟ್ರಿ ಕೊಟ್ಟಿದ್ದಾರೆ. ಅಲ್ಲದೆ ಈ ದಾಖಲೆಯನ್ನು ಮುಂದುವರೆಸಿದ ಆರ್‌ಸಿಬಿ ಪರ ಭರ್ಜರಿ ಪ್ರದರ್ಶನ ನೀಡುವ ವಿಶ್ವಾಸದಲ್ಲಿದ್ದಾರೆ. ಹಾಗಿದ್ರೆ, ಭುವಿ ಹೆಸರಿನಲ್ಲಿರುವ ಐಸಿಸಿ ರೆಕಾರ್ಡ್‌ಗಳಾವುವು ಎಂದು ನೋಡೋಣ ಪವರ್‌ಪ್ಲೇನಲ್ಲಿ ಅತ್ಯಧಿಕ ವಿಕೆಟ್ ಪಡೆದ ವೇಗಿ ಎಂಬ ದಾಖಲೆ ಭುವನೇಶ್ವರ್ ಕುಮಾರ್ ಹೆಸರಿನಲ್ಲಿದೆ. 173 ಪಂದ್ಯಗಳಲ್ಲಿ ಮೊದಲ 6 ಓವರ್‌ಗಳಲ್ಲಿ ಚೆಂಡೆಸೆದಿರುವ ಭುವಿ ಒಟ್ಟು 74 ವಿಕೆಟ್ ಕಬಳಿಸಿದ್ದಾರೆ. ಈ ಮೂಲಕ ಪವರ್‌ಪ್ಲೇನ ಅತ್ಯಂತ ಯಶಸ್ವಿ ಬೌಲರ್ ಎನಿಸಿಕೊಂಡಿದ್ದಾರೆ. ಐಪಿಎಲ್ ಇತಿಹಾಸದಲ್ಲಿ ಅತ್ಯಧಿಕ ಮೇಡನ್ ಓವರ್ ಎಸೆದ ಬೌಲರ್ ಎಂಬ ದಾಖಲೆ ಕೂಡ ಭುವನೇಶ್ವರ್ ಕುಮಾರ್ ಹೆಸರಿನಲ್ಲಿದೆ. 176 ಪಂದ್ಯಗಳಲ್ಲಿ ಬೌಲಿಂಗ್ ಮಾಡಿರುವ ಭುವಿ 14 ಮೇಡನ್ ಓವರ್ ಎಸೆದು ಈ ಭರ್ಜರಿ ದಾಖಲೆ ಬರೆದಿದ್ದಾರೆ. ಡೆತ್ ಓವರ್‌ಗಳಲ್ಲಿ ಅತ್ಯಧಿಕ ವಿಕೆಟ್ ಕಬಳಿಸಿದ ಭಾರತೀಯ ವೇಗಿ ಎಂಬ ದಾಖಲೆ ಕೂಡ ಭುವನೇಶ್ವರ್ ಕುಮಾರ್ ಹೆಸರಿನಲ್ಲಿದೆ. 139 ಪಂದ್ಯಗಳಲ್ಲಿ ಕೊನೆಯ 5 ಓವರ್‌ಗಳಲ್ಲಿ ಬೌಲಿಂಗ್ ಮಾಡಿರುವ ಭುವಿ ಒಟ್ಟು 85 ವಿಕೆಟ್ ಕಬಳಿಸಿದ್ದಾರೆ. ಈ ಮೂಲಕ ಯಶಸ್ವಿ ಡೆತ್ ಓವರ್ ಬೌಲರ್ ಎನಿಸಿಕೊಂಡಿದ್ದಾರೆ. ಇನ್ನು ಐಪಿಎಲ್ ಇತಿಹಾಸದಲ್ಲಿ ಅತ್ಯಧಿಕ ಡಾಟ್ ಬಾಲ್ ಎಸೆದ ದಾಖಲೆ ಕೂಡ ಭುವನೇಶ್ವರ್ ಕುಮಾರ್ ಹೆಸರಿನಲ್ಲಿದೆ. ಐಪಿಎಲ್‌ನಲ್ಲಿ ಈವರೆಗೆ 3910 ಎಸೆತಗಳನ್ನು ಎಸೆದಿರುವ ಭುವಿ 1670 ಎಸೆತಗಳಲ್ಲಿ ಯಾವುದೇ ರನ್ ನೀಡಿಲ್ಲ ಎಂಬುದು ವಿಶೇಷ. ಅಂದರೆ ಐಪಿಎಲ್ ಇತಿಹಾಸದಲ್ಲಿ ಅತ್ಯಧಿಕ ಡಾಟ್ ಬಾಲ್ ಎಸೆದ, ಪವರ್‌ಪ್ಲೇನಲ್ಲಿ ಅತ್ಯಧಿಕ ವಿಕೆಟ್ ಪಡೆದ, ಅತೀ ಹೆಚ್ಚು ಮೇಡನ್ ಓವರ್‌ಗಳನ್ನು ಎಸೆದ ದಾಖಲೆಗಳೊಂದಿಗೆ ಭುವನೇಶ್ವರ್ ಕುಮಾರ್ ಇದೀಗ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ಎಂಟ್ರಿ ಕೊಟ್ಟಿದ್ದಾರೆ. ಈ ದಾಖಲೆಗಳನ್ನು ಮುಂದುವರೆಸುವ ಮೂಲಕ ಅವರು ಆರ್‌ಸಿಬಿಗೆ ಚೊಚ್ಚಲ ಟ್ರೋಫಿ ಗೆದ್ದು ಕೊಡಲಿದ್ದಾರಾ ಕಾದು ನೋಡಬೇಕಿದೆ.



# ಟೀಮ್ ಇಂಡಿಯಾವನ್ನು ಹೀಯಾಳಿಸಿದ ಆಸ್ಟ್ರೇಲಿಯಾ ಆಟಗಾರ




ಬಾರ್ಡರ್ - ಗವಾಸ್ಕರ್ ಟೆಸ್ಟ್ ಸರಣಿಯ ಎರಡನೇ ಪಂದ್ಯ ಶುಕ್ರವಾರದಿಂದ ಶುರುವಾಗಲಿದೆ. ಹೊನಲು ಬೆಳಕಿನಲ್ಲಿ ನಡೆಯಲಿರುವ ಈ ಪಂದ್ಯದಲ್ಲಿ ಪಿಂಕ್ ಬಾಲ್ ಬಳಸಲಾಗುತ್ತದೆ. ಹಾಗಾಗಿಯೇ ಈ ಪಂದ್ಯವನ್ನು ಪಿಂಕ್ ಬಾಲ್ ಟೆಸ್ಟ್ ಎಂದು ಕರೆಯಲಾಗುತ್ತದೆ.

ಭಾರತ ಮತ್ತು ಆಸ್ಟ್ರೇಲಿಯಾ ನಡುವಣ ಪಿಂಕ್ ಬಾಲ್ ಟೆಸ್ಟ್ ಪಂದ್ಯಕ್ಕಾಗಿ ದಿನಗಣನೆ ಶುರುವಾಗಿದೆ. ಡಿಸೆಂಬರ್ 6 ರಂದು ಅಡಿಲೇಡ್‌ನ ಓವಲ್ ಮೈದಾನದಲ್ಲಿ ನಡೆಯಲಿರುವ ಹೊನಲು ಬೆಳಕಿನ ಈ ಪಂದ್ಯಕ್ಕಾಗಿ ಉಭಯ ತಂಡಗಳು ಭರ್ಜರಿ ಅಭ್ಯಾಸದಲ್ಲಿ ತೊಡಗಿಸಿಕೊಂಡಿದೆ. ಈ ಅಭ್ಯಾಸ ನಡುವೆ ಆಸ್ಟ್ರೇಲಿಯಾ ತಂಡ ವಿಕೆಟ್ ಕೀಪರ್ ಅಲೆಕ್ಸ್ ಕ್ಯಾರಿ ಸುದ್ದಿಗೋಷ್ಠಿಯಲ್ಲಿ ಕಾಣಿಸಿಕೊಂಡಿದ್ದರು. ಈ ವೇಳೆ ಮಾತನಾಡಿದ ಅಲೆಕ್ಸ್ ಕ್ಯಾರಿ, ಟೀಮ್ ಇಂಡಿಯಾ 36 ರನ್‌ಗಳಿಗೆ ಆಲೌಟ್ ಆಗಿರುವುದನ್ನು ನೆನಪಿಸಿದ್ದಾರೆ. 2020 ರಲ್ಲಿ ಅಡಿಲೇಡ್‌ನಲ್ಲಿ ಆಡಲಾದ ಪಂದ್ಯದಲ್ಲಿ ಭಾರತ ತಂಡವು ಕೇವಲ 36 ರನ್‌ಗಳಿಗೆ ಆಲೌಟ್ ಆಗಿತ್ತು. ಅದು ನನಗೆ ಇನ್ನೂ ನೆನಪಿದೆ ಎಂದು ಕ್ಯಾರಿ ವ್ಯಂಗ್ಯವಾಡಿದ್ದಾರೆ. ಅಲ್ಲದೆ ಟೀಮ್ ಇಂಡಿಯಾ 36 ರನ್‌ಗೆ ಆಲೌಟ್ ಆಗಿರುವುದು ಐತಿಹಾಸಿಕ ಘಟನೆ. ಅದು ಮತ್ತೊಮ್ಮೆ ಪುನರಾವರ್ತನೆಯಾಗುವುದಿಲ್ಲ. ಇದಾಗ್ಯೂ ಈ ಬಾರಿ ಕೂಡ ನಾವೇ ಪಿಂಕ್ ಬಾಲ್ ಟೆಸ್ಟ್ ಪಂದ್ಯವನ್ನು ಗೆಲ್ಲುತ್ತೇವೆ ಎಂದು ಅಲೆಕ್ಸ್ ಕ್ಯಾರಿ ಹೇಳಿದ್ದಾರೆ. ಏಕೆಂದರೆ ಆಸ್ಟ್ರೇಲಿಯಾ ತಂಡವು ತವರಿನಲ್ಲಿ ಆಡಿದ ಪಿಂಕ್ ಬಾಲ್ ಟೆಸ್ಟ್‌ನಲ್ಲಿ ಅತ್ಯುತ್ತಮ ದಾಖಲೆ ಹೊಂದಿದೆ. ಇದರ ಬಗ್ಗೆ ನಮಗೆಲ್ಲರಿಗೂ ಹೆಮ್ಮೆಯಿದೆ. ಹೀಗಾಗಿ ಈ ಪಂದ್ಯವನ್ನು ಗೆದ್ದು ನಾವು ಸರಣಿಯಲ್ಲಿ ಕಂಬ್ಯಾಕ್ ಮಾಡಲಿದ್ದೇವೆ ಎಂದು ಅಲೆಕ್ಸ್ ಕ್ಯಾರಿ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

**36 ರನ್‌ಗೆ ಆಲೌಟ್:**

2020-21ರ ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಯ ಮೊದಲ ಪಂದ್ಯದಲ್ಲಿ ಟೀಮ್ ಇಂಡಿಯಾ ಹೀನಾಯ ಪ್ರದರ್ಶನ ನೀಡಿತ್ತು. ಅಡಿಲೇಡ್‌ನ ಓವಲ್ ಮೈದಾನದಲ್ಲಿ ನಡೆದ ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಟೀಮ್ ಇಂಡಿಯಾ ಪ್ರಥಮ ಇನಿಂಗ್ಸ್‌ನಲ್ಲಿ 244 ರನ್‌ಗಳಿಸಿ ಆಲೌಟ್ ಆಗಿತ್ತು. ಇದಕ್ಕುತ್ತರವಾಗಿ ದ್ವಿತೀಯ ಇನಿಂಗ್ಸ್ ಆರಂಭಿಸಿದ ಆಸ್ಟ್ರೇಲಿಯಾ ತಂಡವನ್ನು 191 ರನ್‌ಗಳಿಗೆ ಆಲೌಟ್ ಮಾಡುವಲ್ಲಿ ಟೀಮ್ ಇಂಡಿಯಾ ಬೌಲರ್‌ಗಳು ಯಶಸ್ವಿಯಾದರು. 53 ರನ್‌ಗಳ ಮುನ್ನಡೆಯೊಂದಿಗೆ ದ್ವಿತೀಯ ಇನಿಂಗ್ಸ್ ಆರಂಭಿಸಿದ ಟೀಮ್ ಇಂಡಿಯಾ ಕೇವಲ 36 ರನ್‌ಗಳಿಗೆ ಆಲೌಟ್ ಆಗಿತ್ತು. ಇದು ಟೆಸ್ಟ್ ಕ್ರಿಕೆಟ್ ಇತಿಹಾಸದಲ್ಲೇ ಭಾರತ ತಂಡದ ಅತ್ಯಂತ ಕಡಿಮೆ ಮೊತ್ತ.

ಅಲ್ಲದೆ ಟೆಸ್ಟ್‌ನಲ್ಲಿ ಅತೀ ಕಡಿಮೆ ಸ್ಕೋರ್‌ಗಳಿಸಿದ ವಿಶ್ವದ 4ನೇ ತಂಡ ಎಂಬ ಅಪಖ್ಯಾತಿಗೂ ಟೀಮ್ ಇಂಡಿಯಾ ಒಳಗಾಗಿತ್ತು. ಈ ಹೀನಾಯ ಸೋಲನ್ನು ಪ್ರಸ್ತಾಪಿಸಿ ಇದೀಗ ಆಸ್ಟ್ರೇಲಿಯಾ ತಂಡದ ವಿಕೆಟ್ ಕೀಪರ್ ಬ್ಯಾಟರ್ ಅಲೆಕ್ಸ್ ಕ್ಯಾರಿ ಅಡಿಲೇಡ್ ಟೆಸ್ಟ್‌ನಲ್ಲಿ ಈ ಬಾರಿ ಕೂಡ ಆಸೀಸ್ ಪಡೆ ಗೆಲ್ಲಲಿದೆ ಎಂದು ಭವಿಷ್ಯ ನುಡಿದಿದ್ದಾರೆ.

# ಎಲ್ಲಾ ನಾಯಕರುಗಳಿಗೆ ಪಾಂಡ್ಯ ಕ್ಯಾಪ್ಟನ್

ಐಪಿಎಲ್‌ನ 18ನೇ ಆವೃತ್ತಿಯು ಮಾರ್ಚ್ 14 ರಿಂದ ಶುರುವಾಗಲಿದೆ. ಹಾಗೆಯೇ ಫೈನಲ್ ಪಂದ್ಯವು ಮೇ 25 ರಂದು ಆಯೋಜಿಸಲು ನಿರ್ಧಸಲಾಗಿದೆ. ಇನ್ನು ಈ ಬಾರಿ ಕೂಡ ಮುಂಬೈ ಇಂಡಿಯನ್ಸ್ ತಂಡದ ನಾಯಕರಾಗಿ ಹಾರ್ದಿಕ್ ಪಾಂಡ್ಯ ಕಾಣಿಸಿಕೊಳ್ಳಲಿದ್ದಾರೆ. ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್ 2025) ಸೀಸನ್-18 ರಲ್ಲಿ ಮುಂಬೈ ಇಂಡಿಯನ್ಸ್ ತಂಡವನ್ನು ಯಾರು ಮುನ್ನಡೆಸಲಿದ್ದಾರೆ ಎಂಬ ಪ್ರಶ್ನೆಗೆ ಸ್ಪಷ್ಟ ಉತ್ತರ ಸಿಕ್ಕಿದೆ. ಈ ಬಾರಿ ಕೂಡ ಹಾರ್ದಿಕ್ ಪಾಂಡ್ಯ ಮುಂದಾಳತ್ವದಲ್ಲೇ ಮುಂಬೈ ಇಂಡಿಯನ್ಸ್ ಕಣಕ್ಕಿಳಿಯಲಿದ್ದು, ನಾಯಕತ್ವವನ್ನು ಬದಲಿಸುವ ಯಾವುದೇ ಆಲೋಚನೆಯಿಲ್ಲ ಎಂಬುದನ್ನು ಎಂಐ ಫ್ರಾಂಚೈಸಿ ಸ್ಪಷ್ಟಪಡಿಸಿದೆ.

ಇದರೊಂದಿಗೆ ಟೀಮ್ ಇಂಡಿಯಾ ನಾಯಕರುಗಳು ಹಾರ್ದಿಕ್ ಪಾಂಡ್ಯ ನಾಯಕತ್ವದ ಅಡಿಯಲ್ಲಿ ಆಡುವುದು ಸಹ ಖಚಿತವಾಗಿದೆ. ಅಂದರೆ ಐಪಿಎಲ್ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಭಾರತ ತಂಡದ ಕ್ಯಾಪ್ಟನ್‌ಗಳು ಬರೋಬ್ಬ ನಾಯಕನ ಕೆಳಗೆ ಆಡಲು ಸಜ್ಜಾಗಿದ್ದಾರೆ. ಇಲ್ಲಿ ಟೀಮ್ ಇಂಡಿಯಾ ಟೆಸ್ಟ್ ಹಾಗೂ ಏಕದಿನ ತಂಡಗಳ ನಾಯಕರಾಗಿರುವ ರೋಹಿತ್ ಶರ್ಮಾ ಹಾರ್ದಿಕ್ ಪಾಂಡ್ಯ ನಾಯಕತ್ವದಲ್ಲಿ ಎರಡನೇ ಸೀಸನ್ ಆಡಲಿದ್ದಾರೆ. ಕಳೆದ ಬಾರಿ ಹಿಟ್‌ಮ್ಯಾನ್ ಬದಲಿಗೆ ಮುಂಬೈ ಇಂಡಿಯನ್ಸ್ ಫ್ರಾಂಚೈಸಿ ಪಾಂಡ್ಯಗೆ ಕ್ಯಾಪ್ಟನ್ ಪಟ್ಟ ನೀಡಿತ್ತು. ಇದಾಗ್ಯೂ ಮುಂಬೈ ಇಂಡಿಯನ್ಸ್ ತಂಡದಲ್ಲೇ ಉಳಿದಿರುವ ಭಾರತ ತಂಡದ ನಾಯಕ ರೋಹಿತ್ ಶರ್ಮಾ ಇದೀಗ ಮತ್ತೊಮ್ಮೆ ಪಾಂಡ್ಯ ನಾಯಕತ್ವದಡಿಯಲ್ಲಿ ಕೇವಲ ಬ್ಯಾಟರ್ ಆಗಿ ಕಣಕ್ಕಿಳಿಯಲು ಸಜ್ಜಾಗಿ ನಿಂತಿದ್ದಾರೆ. ಇನ್ನು ಟೀಮ್ ಇಂಡಿಯಾ ಟಿ20 ತಂಡದ ನಾಯಕರಾಗಿರುವ ಸೂರ್ಯಕುಮಾರ್ ಯಾದವ್ ಕೂಡ ಮುಂಬೈ ಇಂಡಿಯನ್ಸ್ ತಂಡದಲ್ಲಿದ್ದಾರೆ. ಭಾರತ ಟಿ20 ತಂಡದ ಕ್ಯಾಪ್ಟನ್ ಆದ ಬಳಿಕ ಇದೇ ಮೊದಲ ಬಾರಿಗೆ ಐಪಿಎಲ್ ಆಡಲು ಸಜ್ಜಾಗಿರುವ ಸೂರ್ಯ ಕೂಡ ಹಾರ್ದಿಕ್ ನಾಯಕತ್ವದಲ್ಲಿ ಕಣಕ್ಕಿಳಿಯಲಿರುವುದು ವಿಶೇಷ. ಹಾಗೆಯೇ ಭಾರತ ಟೆಸ್ಟ್ ತಂಡದ ಉಪನಾಯಕ ಜಸ್‌ಪ್ರೀತ್ ಬುಮ್ರಾ ಈ ಬಾರಿ ಕೂಡ ಮುಂಬೈ ಇಂಡಿಯನ್ಸ್ ಪರ ಕಣಕ್ಕಿಳಿಯುತ್ತಿದ್ದು, ಅವರು ಸಹ ಹಾರ್ದಿಕ್ ಪಾಂಡ್ಯ ನಾಯಕತ್ವದಲ್ಲಿ ಆಡಲು ಸಜ್ಜಾಗಿದ್ದಾರೆ. ಅಂದರೆ ಟೀಮ್ ಇಂಡಿಯಾದ ಕ್ಯಾಪ್ಟನ್ ಪಟ್ಟದಲ್ಲಿರುವ ಇಬ್ಬರು ಆಟಗಾರರು ಹಾಗೂ ಒಬ್ಬ ಉಪನಾಯಕ ಇದೇ ಮೊದಲ ಬಾರಿಗೆ ರಾಷ್ಟ್ರೀಯ ತಂಡದ ನಾಯಕನಲ್ಲದ ಆಟಗಾರನ ಕ್ಯಾಪ್ಟನ್ಸಿ ಅಡಿಯಲ್ಲಿ ಆಡಲು ಸಜ್ಜಾಗಿದ್ದಾರೆ. ಇದು ಐಪಿಎಲ್ ಇತಿಹಾಸದಲ್ಲೇ ಮೊದಲು ಎಂಬುದು ವಿಶೇಷ.



# ಆಸ್ಟ್ರೇಲಿಯನ್ನರಿಗೆ ನಡುಕ ಶುರು ಅಡಿಲೇಡ್‌ನಲ್ಲಿ ವಿರಾಟ್ ಕೊಹ್ಲಿ ಕಿಂಗ್

ಬಾರ್ಡರ್-ಗವಾಸ್ಕರ್ ಟೆಸ್ಟ್ ಸರಣಿಯ ಎರಡನೇ ಪಂದ್ಯಕ್ಕೆ ವೇದಿಕೆ ಸಿದ್ಧವಾಗಿದೆ. ಅಡಿಲೇಡ್‌ನ ಓವಲ್ ಮೈದಾನದಲ್ಲಿ ನಡೆಯಲಿರುವ ಈ ಪಂದ್ಯವು ಶುಕ್ರವಾರದಿಂದ (ಡಿ.6) ಶುರುವಾಗಲಿದೆ. ಈ ಪಂದ್ಯಕ್ಕೂ ಮುನ್ನವೇ ವಿರಾಟ್ ಕೊಹ್ಲಿ ಆಸ್ಟ್ರೇಲಿಯಾ ಬೌಲರ್‌ಗಳ ನಿದ್ದೆಗೆಡಿಸಿದ್ದಾರೆ. ಏಕೆಂದರೆ ಅಡಿಲೇಡ್ ಮೈದಾನದಲ್ಲಿ ಅತ್ಯದ್ಭುತ ಪ್ರದರ್ಶನ ನೀಡಿದ ವಿದೇಶಿ ಬ್ಯಾಟರ್‌ಗಳಲ್ಲಿ ವಿರಾಟ್ ಕೊಹ್ಲಿ ಕೂಡ ಒಬ್ಬರು. ಕಿಂಗ್ ಕೊಹ್ಲಿ ಓವಲ್ ಮೈದಾನದಲ್ಲಿ ಈಗಾಗಲೇ 3 ಶತಕ ಸಿಡಿಸಿದ ದಾಖಲೆ ಹೊಂದಿದ್ದಾರೆ. ಹಾಗೆಯೇ ಒಂದು ಅರ್ಧಶತಕವನ್ನೂ ಸಹ ಬಾರಿಸಿದ್ದಾರೆ. 2012 ರಲ್ಲಿ ನಡೆದ ಅಡಿಲೇಡ್ ಟೆಸ್ಟ್ ಪಂದ್ಯದಲ್ಲಿ ವಿರಾಟ್ ಕೊಹ್ಲಿ ಭರ್ಜರಿ ಬ್ಯಾಟಿಂಗ್ ಪ್ರದರ್ಶಿಸಿದ್ದರು. ಈ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ 6ನೇ ಕ್ರಮಾಂಕದಲ್ಲಿ ಕಣಕ್ಕಿಳಿದಿದ್ದ ಕೊಹ್ಲಿ 213 ಎಸೆತಗಳಲ್ಲಿ 116 ರನ್ ಬಾರಿಸಿ ಮಿಂಚಿದ್ದರು.

2014 ರಲ್ಲಿ ನಡೆದ ಅಡಿಲೇಡ್ ಟೆಸ್ಟ್ ಪಂದ್ಯದ ಎರಡೂ ಇನಿಂಗ್ಸ್‌ಗಳಲ್ಲೂ ಸೆಂಚುರಿ ಸಿಡಿಸಿ ವಿರಾಟ್ ವಿಶೇಷ ದಾಖಲೆ ಬರೆದಿದ್ದರು. ಈ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ 115 ರನ್ ಬಾರಿಸಿದ್ದ ಕಿಂಗ್ ಕೊಹ್ಲಿ, ದ್ವಿತೀಯ ಇನಿಂಗ್ಸ್‌ನಲ್ಲಿ 141 ರನ್ ಚಚ್ಚಿದ್ದರು. 2021 ರಲ್ಲಿ ಅಡಿಲೇಡ್‌ನಲ್ಲಿ ನಡೆದ ಡೇ-ನೈಟ್ ಟೆಸ್ಟ್ ಪಂದ್ಯದ ಮೊದಲ ಇನಿಂಗ್ಸ್‌ನಲ್ಲಿ ವಿರಾಟ್ ಕೊಹ್ಲಿ 74 ರನ್ ಕಲೆಹಾಕಿದ್ದರು. ಈ ಮೂಲಕ ಅಡಿಲೇಡ್‌ನಲ್ಲಿ ಆಡಿದ ಎಲ್ಲಾ ಪಂದ್ಯಗಳಲ್ಲೂ 50+ ಸ್ಕೋರ್‌ಗಳಿಸಿದ ವಿಶೇಷದ ಅಷ್ಟೇ ಅಲ್ಲದೆ ಅಡಿಲೇಡ್ ಓವಲ್ ಮೈದಾನದಲ್ಲಿ ಆಡಿದ 15 ಇನಿಂಗ್ಸ್‌ಗಳಲ್ಲಿ 73.61 ಸರಾಸರಿಯಲ್ಲಿ 957 ರನ್ ಗಳಿಸಿದ್ದಾರೆ. ಹೀಗಾಗಿಯೇ ಕಿಂಗ್ ಕೊಹ್ಲಿಯ ಭರ್ಜರಿ ಫಾರ್ಮ್ ಇದೀಗ ಆಸ್ಟ್ರೇಲಿಯನ್ ಬೌಲರ್‌ಗಳ ಚಿಂತೆಗೆ ಕಾರಣವಾಗಿದೆ. ಅದರಲ್ಲೂ ಪರ್ತ್ ಟೆಸ್ಟ್‌ನಲ್ಲಿ ಸೆಂಚುರಿ ಸಿಡಿಸಿರುವ ಕಿಂಗ್ ಕೊಹ್ಲಿ ಕಡೆಯಿಂದ ಶತಕವನ್ನು ನಿರೀಕ್ಷಿಸಲಾಗುತ್ತಿದೆ



**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**